ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೫

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಶುಕ್ರವಾರ, ದಿನಾಂಕ : ೧೭ನೇ ಮಾರ್ಚ್, ೨೦೧೭

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ವಸತಿ ಸಚಿವರು.

೫. ಸಣ್ಣ ಕೈಗಾರಿಕೆ ಸಚಿವರು.

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೭. ಸಾರಿಗೆ ಸಚಿವರು.

೮. ಗಣಿ ಮತ್ತು ಭೂವಿಜ್ಞಾನ ಸಚಿವರು.

---

## ಸಂಯುಕ್ತ ಪ್ರೌಢ ಶಾಲೆಗಳ ಮುಖ್ಯ ಗುರುಗಳ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೧೪ (೬೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಂದ ಬೇರ್ಪಟ್ಟ ಸಂಯುಕ್ತ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಈ ಸಂಯುಕ್ತ ಪ್ರೌಢ ಶಾಲೆಗಳಿಗೆ ಮುಖ್ಯ ಗುರುಗಳ ಹುದ್ದೆಗಳನ್ನು ಕೊಡುವ ಕುರಿತು ಇರುವ ನಿಯಮಾವಳಿಗಳೇನು ; ಆ ಮುಖ್ಯ ಗುರುಗಳಿಗೆ, ಮುಖ್ಯ ಗುರುಗಳಾಗಿ ಇರುವ ಎಲ್ಲಾ ಸೇವಾ ಸೌಲಭ್ಯಗಳನ್ನು ನೀಡಲಾಗಿದೆಯೇ ;

(ಇ) ಪ್ರಭಾರ ಕಾರ್ಯಭಾರದಲ್ಲಿದ್ದರೆ ಅವರಿಗೆ ನೀಡಿರುವ ಸೇವಾ ಸೌಲಭ್ಯಗಳನ್ನು ನೀಡಲಾಗಿದೆಯೇ ; ಪ್ರಭಾರ ಭತ್ಯೆ ರಜೆ ಹಾಗೂ ಇತ್ಯಾದಿ ಸೌಲಭ್ಯಗಳ ಕುರಿತು ವಿವರ ನೀಡುವುದು ; ಈ ಹುದ್ದೆಗಳಿಗೆ ಖಾಯಂ ಮುಖ್ಯ ಗುರುಗಳ ಹುದ್ದೆ ಸೃಷ್ಟಿಯಾಗಿದೆಯೇ ? (ವಿವರ ನೀಡುವುದು)

## ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೧೫ (೬೯೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಅನುದಾನಿತ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಕಾರ್ಯನಿರ್ವಹಿಸುತ್ತಿರುವ ಅನುದಾನಿತ ಹುದ್ದೆಗಳ ಸಂಖ್ಯೆ ಎಷ್ಟು ; ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತಿಯೊಂದು ಕಾಲೇಜುವಾರು ಇಂದಿನವರೆಗಿನ ವಿವರ ನೀಡುವುದು)

(ಇ) ಇವುಗಳಲ್ಲಿ ಪದವಿ ಪೂರ್ವ ಕಾಲೇಜುಗಳೊಂದಿಗೆ ಸಂಯುಕ್ತವಾಗಿದ್ದು, ವಿಭಜನೆಗೊಂಡ ಕಾಲೇಜುಗಳು ಎಷ್ಟು ಮತ್ತು ಯಾವುವು ; (ಪ್ರತಿಯೊಂದರ ಹೆಸರು ವಿಳಾಸ ನೀಡುವುದು)

(ಈ) ಅವುಗಳಲ್ಲಿ ಅನುದಾನಕ್ಕೆ ಒಳಪಟ್ಟ ಹುದ್ದೆಗಳು, ಖಾಲಿ ಇರುವ ಹುದ್ದೆಗಳು ಎಷ್ಟು ; ಇವುಗಳ ಭರ್ತಿಗೆ ಸರ್ಕಾರದ ಕ್ರಮ ಏನು ? (ಹುದ್ದೆವಾರು ವಿವರ ನೀಡುವುದು)

## ವಿಜಯಪುರ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ವಿಸ್ತೀರ್ಣದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೧೬ (೬೯೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಎಷ್ಟು ವಿಸ್ತೀರ್ಣ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗಿದೆ ; ಅದಕ್ಕೆ ಒದಗಿಸಿರುವ ಒಟ್ಟು ಜಮೀನು ಎಷ್ಟು ;

ಅಲ್ಲಿರುವ ಕಟ್ಟಡಗಳು ಯಾವುವು ; ಯಾವ ಯಾವ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಕಂದಾಯ ಇಲಾಖೆ ದಾಖಲೆಗಳಲ್ಲಿ ಯಾವಾಗ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಹೆಸರು ದಾಖಲಾಗಿದೆ ; ವಿಶ್ವವಿದ್ಯಾಲಯದಲ್ಲಿ ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕಾಗಿ ಸದ್ಯ ಪ್ರಸಕ್ತ ವರ್ಷ ಇರುವ ಹಣ ಎಷ್ಟು ; ಈ ಪಿ.ಜಿ. ಸೆಂಟರ್ ಅಭಿವೃದ್ಧಿಗೆ ವಿಶ್ವವಿದ್ಯಾನಿಲಯದ ನೀಲ ನಕ್ಷೆ ಏನು ಹಾಗೂ ಯೋಜನೆ ಏನು ; ಪ್ರಸಕ್ತ ವರ್ಷದಲ್ಲಿ ಒದಗಿಸಿರುವ ಹಣ ಎಷ್ಟು ;

(ಇ) ವಿಜಯಪುರ ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ವಿಶ್ವವಿದ್ಯಾನಿಲಯದ ಹೆಸರಿನಲ್ಲಿರುವ ಜಮೀನು ಎಷ್ಟು ? (ಪ್ರತಿಯೊಂದರ ವಿಸ್ತೀರ್ಣ ಸಹಿತ, ಕಬ್ಜೆ ಮತ್ತು ಜಮೀನಿನ ದಾಖಲೆಗಳ ವಿವರ ನೀಡುವುದು)

## ಪದವಿ ಪೂರ್ವ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿನ ಹುದ್ದೆಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೧೭ (೭೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿರುವ ಪದವಿ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಕಾಲೇಜುಗಳ ಹೆಸರು, ವಿಳಾಸ ನೀಡುವುದು) ಅವುಗಳಲ್ಲಿ ಅನುದಾನಕ್ಕೆ ಒಳಪಟ್ಟ ಹುದ್ದೆಗಳ

ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಹಾಗೂ ವಿಷಯವಾರು ಕಾರ್ಯಭಾರವಿರುವ ಮಾಹಿತಿ ನೀಡುವುದು ;

(ಆ) ಈ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಅನುಮತಿ ನೀಡಿರುವ ಹಾಗೂ ಪ್ರಸ್ತಾಪಿತ ಅನುಮತಿಗಾಗಿ ಇರುವ ಹುದ್ದೆಗಳೆಷ್ಟು ? (ವಿವರ ನೀಡುವುದು)

## ಕಲಬುರಗಿ ವಿಮಾನ ನಿಲ್ದಾಣದ ಬಾಕಿ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೧೮ (೭೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಮಾನ ನಿಲ್ದಾಣದ ಬಾಕಿ ಉಳಿದ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರವು ಲೋಕೋಪಯೋಗಿ ಇಲಾಖೆಗೆ ವಹಿಸಿರುವುದು ನಿಜವೇ ; ಹಾಗಾದರೆ, ಬಾಕಿ ಉಳಿದ ವಿಮಾನ ನಿಲ್ದಾಣದ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯು ಪ್ರಾರಂಭಿಸಿದೆಯೇ ; ಪ್ರಾರಂಭಿಸಿದ್ದರೆ, ಇಲ್ಲಿಯವರೆಗೆ ಆದ ಕಾಮಗಾರಿ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಆ) ಸದರಿ ಬಾಕಿ ಉಳಿದ ವಿಮಾನ ನಿಲ್ದಾಣದ ಕಾಮಗಾರಿ ಪೂರ್ಣಗೊಳಿಸಲು ಬೇಕಾಗುವ ಒಟ್ಟು ಹಣಕಾಸಿನ ಅವಶ್ಯಕತೆ ಎಷ್ಟು ; (ಮಾಹಿತಿ ನೀಡುವುದು)

(ಇ) ಈ ಕಾಮಗಾರಿಗಾಗಿ ಅವಶ್ಯಕತೆ ಇರುವ ಅನುದಾನವನ್ನು ಯಾವ ಮೂಲದಿಂದ ಭರಿಸಲಾಗುವುದು ? (ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂ. ೨೭, ೨೮ರ ವಸತಿ ಯೋಜನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೧೯ (೭೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂ. ೨೭ ಹಾಗೂ ೨೮ ರಲ್ಲಿ ರಾಜೀವ್ ಗಾಂಧಿ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು ; ಸದರಿ ಮನೆಗಳ ನಿರ್ಮಾಣಕ್ಕಾಗಿ ಇಲ್ಲಿಯವರೆಗೆ ಸರ್ಕಾರದಿಂದ ಆಗಿರುವ ವೆಚ್ಚ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ನಿರ್ಮಾಣಗೊಂಡಿರುವ ಆಶ್ರಯ ಮನೆಗಳು ಅರ್ಹ ಫಲಾನುಭವಿಗಳಿಗೆ ಹಸ್ತಾಂತರಗೊಂಡಿವೆಯೇ ; (ಫಲಾನುಭವಿಗಳ ಸಂಪೂರ್ಣ ವಿವರ ಒದಗಿಸುವುದು)

(ಇ) ಹದಿನೈದು ವರ್ಷ ಗತಿಸಿದರೂ ಸದರಿ ಆಶ್ರಯ ಮನೆಗಳು ಅರ್ಹ ಫಲಾನುಭವಿಗಳಿಗೆ ಹಸ್ತಾಂತರಗೊಳ್ಳದೆ ಶಿಥಿಲಾವಸ್ಥೆಯಲ್ಲಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ, ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೨೦ (೭೧೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯು ೨೦೦೦ ವರ್ಷದಲ್ಲಿ ಸ್ವತಂತ್ರವಾಗಿ ಸ್ಥಾಪನೆ ಆದಾಗ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಲು ಅಗತ್ಯ ಮೇಲ್ವಿಚಾರಕರನ್ನು, ಅಧಿಕಾರಿಗಳನ್ನು ಮತ್ತು ಸಿಬ್ಬಂದಿಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವೃಂದಗಳಿಂದ ನೇಮಿಸಿರುವುದು ನಿಜವೇ ; ಹಾಗಿದ್ದರೆ, ಸದರಿ ಅಧಿಕಾರಿಗಳ/ ಸಿಬ್ಬಂದಿಗಳ ಇಚ್ಛೆ ಪಡೆದು ಈ ಸಂಸ್ಥೆಯ ಮಂಜೂರಾತಿ ಹುದ್ದೆಗಳಿಗೆ ವಿಲೀನ ಮಾಡಿಕೊಳ್ಳಲಾಗಿದೆಯೇ ; (ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯುಲ್ಲಿ ಮಂಜೂರಾದ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಮೇಲ್ವಿಚಾರಕರ ಮತ್ತು (Supervisors and Officer) ಹುದ್ದೆವಾರು ಸಂಖ್ಯೆ ಎಷ್ಟು ; (೨೦೦೦ನೇ ವರ್ಷದಿಂದ ಮಾಹಿತಿ ನೀಡುವುದು)

(ಇ) ಖಾಲಿ ಇರುವ ಮೇಲ್ವಿಚಾರಕರ ಮತ್ತು ಅಧಿಕಾರಿಗಳ (Supervisors and Officer) ಗಳ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳದೆ ರಾಜ್ಯದ ವಿವಿಧ ಭಾಗಗಳಿಂದ ನಿಯೋಜನೆ ಮಾಡಲಾಗಿದೆಯೇ ; ಹಾಗಿದ್ದರೆ, ಪ್ರಸ್ತುತ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಮೇಲ್ವಿಚಾರಕರ ಮತ್ತು ಅಧಿಕಾರಿಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಈ) ಸದರಿ ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುವ ಬಗ್ಗೆ ಮೇಲ್ವಿಚಾರಕರಿಂದ, ಅಧಿಕಾರಿಗಳಿಂದ ಹಾಗೂ ಸಿಬ್ಬಂದಿಗಳಿಂದ ಇಚ್ಛೆ ಪಡೆದಿದ್ದಲ್ಲಿ, ಈ ಭಾಗದ ಜನಗಳಿಗೆ ಅಥವಾ ಈ ಭಾಗದಲ್ಲಿ ಕೆಲಸ ನಿರ್ವಹಿಸಲು ಇಚ್ಛಿಸುವ ವ್ಯಕ್ತಿಗಳಿಗೆ ಪದೋನ್ನತಿ ನೀಡಲಾಗಿದೆ ; ಇಲ್ಲದಿದ್ದಲ್ಲಿ, ಈ ನ್ಯೂನತೆಯನ್ನು ಸರಿಪಡಿಸಲು ಸರ್ಕಾರದ ಮುಂದಿರುವ ಕ್ರಮವೇನು ?

## ರಾಜ್ಯದ ೪ ರಸ್ತೆ ಸಾರಿಗೆ ಸಂಸ್ಥೆಗಳ ಸಂಪೂರ್ಣ ಮಾಹಿತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೨೧ (೭೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ರಸ್ತೆ ಸಾರಿಗೆ ಸಂಸ್ಥೆ, ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಗಳು ಯಾವ ದಿನಾಂಕಗಳಿಂದ ಸ್ವಾಯತ್ತ ರಸ್ತೆ ಸಾರಿಗೆ ಸಂಸ್ಥೆಗಳಾಗಿವೆ ; (ದಾಖಲೆಯೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಈ ಸಂಸ್ಥೆಗಳು ಯಾವ ಕಾಯಿದೆ ಅಡಿಯಲ್ಲಿ, ಪರಿಚ್ಛೇದದಡಿಯಲ್ಲಿ ಸ್ವತಂತ್ರ ರಸ್ತೆ ಸಾರಿಗೆ ಸಂಸ್ಥೆಗಳಾಗಿವೆ ; (ಕಾಯಿದೆಯ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈಶಾನ್ಯ ರಸ್ತೆ ಸಾರಿಗೆ ಸಂಸ್ಥೆಯು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಅಡಿಯಲ್ಲಿ ಯಾವ ಕಾಯಿದೆ ಮತ್ತು ಪರಿಚ್ಛೇಧ ಪ್ರಕಾರ ಕಾರ್ಯ ನಿರ್ವಹಿಸಲು ಅವಕಾಶ ಇದೆ ? (ಆದೇಶಗಳೊಂದಿಗೆ ಮಾಹಿತಿ ನೀಡುವುದು)

## ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨೨ (೭೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ವರ್ಷಾವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಈ ಯೋಜನೆಯಡಿಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಉದ್ಯೋಗ ನೀಡಲಾಗಿದೆ ;

(ಈ) ಈ ಯೋಜನೆಯಿಂದ ನೀಡಲಾಗುತ್ತಿರುವ ಒಟ್ಟು ಕೂಲಿಯ ದಿನಗಳು, ಕೂಲಿಯ ಮೊತ್ತ ಹಾಗೂ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು ; (ಪೂರ್ಣ ವಿವರ ನೀಡುವುದು)

(ಉ) ಪ್ರಸ್ತುತ ಯೋಜನೆಯಡಿ ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಕೂಲಿ ಕಾರ್ಮಿಕರಿಗೆ ಅನುಕೂಲವಾಗಿದೆ ? (ವಿವರ ನೀಡುವುದು)

## ವಿಶ್ವವಿದ್ಯಾಲಯಗಳ ಅಕ್ರಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨೩ (೭೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯಗಳ ಒಟ್ಟು ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ವಿಶ್ವವಿದ್ಯಾಲಯಗಳು ಅಭಿವೃದ್ಧಿ ಕಾಮಗಾರಿಯಲ್ಲಿ ಭಾರಿ ಅಕ್ರಮ ನಡೆಸಿರುವುದು ನಿಜವಲ್ಲವೇ ; (ವಿವರ ನೀಡುವುದು)

(ಇ) ವಿಶ್ವವಿದ್ಯಾಲಯಗಳ ಅಕ್ರಮ ತನಿಖೆಗೆ ಆಯಾ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಸಮಿತಿ ರಚಿಸಲು ಸರ್ಕಾರ ಮುಂದಾಗುವುದೇ ಸಮಿತಿಯ ಕಾರ್ಯಭಾರದ ವಿವರ ನೀಡುವುದು ;

(ಈ) ವಿಶ್ವವಿದ್ಯಾಲಯಗಳ ಅಕ್ರಮದಿಂದಾಗಿ ಉನ್ನತ ಶಿಕ್ಷಣದ ಮೇಲೆ ಅಡ್ಡ ಪರಿಣಾಮ ಉಂಟಾಗುವುದಿಲ್ಲವೇ ;

(ಉ) ವಿಶ್ವವಿದ್ಯಾಲಯಗಳ ಅಕ್ರಮಗಳನ್ನು ಬಹಿರಂಗಗೊಳಿಸಿ, ತಪ್ಪಿತಸ್ಥರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಬಸ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨೪ (೭೪೫) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (B.M.T.C.) ವ್ಯಾಪ್ತಿಯಲ್ಲಿ ದಿನನಿತ್ಯ ಎಷ್ಟು ಬಸ್‌ಗಳು ಓಡಾಡುತ್ತಿವೆ ; (ವಿವರ ನೀಡುವುದು)

(ಆ) (B.M.T.C.) ಬಸ್‌ಗಳ ಪೈಕಿ ೧೮% ರಿಂದ ೨೦% ರಷ್ಟು ಬಸ್‌ಗಳು ಸ್ಕ್ರಾಪ್ ಬಸ್‌ಗಳಾಗಿರುವುದು (ಗುಜರಿ ಬಸ್) ನಿಜವೇ ;

(ಇ) ಈ ಬಸ್‌ಗಳ ಆಯುಷ್ಯ ೮ ಲಕ್ಷ ಕಿ.ಮೀ. ಅಥವಾ ಖರೀದಿ ನಂತರ ೧೦ ವರ್ಷಗಳವರೆಗೆ ಬಳಸಬಹುದಾಗಿರುವುದು ನಿಜವೇ ; ಹಾಗಿದ್ದಲ್ಲಿ, ಇದರಡಿ ಬರತಕ್ಕ ಬಸ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಈ ಬಸ್‌ಗಳ ನಿರ್ವಹಣಾ ವೆಚ್ಚ ದುಬಾರಿಯಾಗಿರುವುದು ನಿಜವೇ ; ಹಾಗಿದ್ದಲ್ಲಿ, ಈ ಹಳೆಯ ಬಸ್‌ಗಳ ದುರಸ್ಥಿಗಾಗಿ ಪ್ರತಿ ವರ್ಷ ಖರ್ಚಾಗುವ ಮೊತ್ತವೆಷ್ಟು ;

(ಉ) ಬೆಂಗಳೂರು ಮಹಾನಗರ ಸಾರಿಗೆ ಬಸ್ ನಿಲ್ದಾಣದಲ್ಲಿ (ಮೆಜೆಸ್ಟಿಕ್) ದೂರ ದೂರದ ಸ್ಥಳಗಳಿಗೆ ಹೋಗುವ ಸಾರ್ವಜನಿಕರಿಗೆ ಬಸ್‌ಗಳು ಸರಿಯಾದ ವೇಳೆಗೆ ಲಭ್ಯವಾಗದೆ ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಲೆಕ್ಕ ಅಧೀಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೨೫ (೭೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಈಗಾಗಲೇ ಇರುವ ಲೆಕ್ಕ ಅಧೀಕ್ಷಕರ ಹುದ್ದೆಗಳನ್ನು (ಅಕೌಂಟ್ ಅಧೀಕ್ಷಕರು) ಭರ್ತಿ ಮಾಡುವ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಅರ್ಹ ನೌಕರರನ್ನು ಪರಿಗಣಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಲೆಕ್ಕ ಅಧೀಕ್ಷಕರ ಹುದ್ದೆಗಳನ್ನು (ಅಕೌಂಟ್ ಅಧೀಕ್ಷಕರು) ಭರ್ತಿ ಮಾಡುವ ಸಂದರ್ಭದಲ್ಲಿ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಾಮಾವಳಿ ೧೯೬೭ ಎಸ್.ಸಿ.ಹೆಚ್ ೭೯ರ ನಿಯಮ ಪಾಲಿಸಲಾಗಿದೆಯೇ ; (ಪಾಲಿಸಿದ್ದಲ್ಲಿ ಮಾಹಿತಿ ನೀಡುವುದು)

(ಇ) ಸದರಿ ನಿಯಮ ಪಾಲಿಸಿದ್ದಲ್ಲಿ ಈವರೆವಿಗೆ ಎಷ್ಟು ಮಂದಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಅರ್ಹ ನೌಕರರಿಗೆ ಲೆಕ್ಕ ಅಧೀಕ್ಷಕರ ಹುದ್ದೆಗೆ ಬಡ್ತಿ ನೀಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಮಂಜೂರಾದ ಲೆಕ್ಕ ಅಧೀಕ್ಷಕರ ಹುದ್ದೆಗಳ ಸಂಖ್ಯೆ ಹಾಗೂ ವಿವರ ಮತ್ತು ಖಾಲಿ ಹುದ್ದೆಗಳ ಮಾಹಿತಿ ನೀಡುವುದು ;

(ಉ) ಸದರಿ ಲೆಕ್ಕ ಅಧೀಕ್ಷಕರ ಹುದ್ದೆಗಳಲ್ಲಿ ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು ಹಾಗೂ ನಿಯೋಜನೆ ಪಡೆಯಲು ಕಾರಣವೇನು ;

(ಊ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಎಸ್.ಎ.ಎಸ್ ಪರೀಕ್ಷೆ ಉತ್ತೀರ್ಣರಾಗಿ ಲೆಕ್ಕ ಅಧೀಕ್ಷಕರ ಹುದ್ದೆಗೆ ಅರ್ಹರಿರುವ ನೌಕರರ ಜ್ಯೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ ; ತಯಾರಿಸಿದ್ದಲ್ಲಿ, ಈವರೆವಿಗೂ ಮುಂಬಡ್ತಿ ನೀಡದೆ ಇರಲು ಕಾರಣವೇನು ?

## ಗ್ರಾಮೀಣ ಪ್ರದೇಶದ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೨೬ (೬೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಹುತೇಕ ಹಳ್ಳಿಗಳಲ್ಲಿ ಜನ ಹಾಗೂ ಜಾನುವಾರುಗಳು ಕುಡಿಯುವ ನೀರಿನ ಕೊರತೆಯಿಂದ ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗ್ರಾಮೀಣ ಪ್ರದೇಶಗಳ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಪೂರೈಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ರಾಜ್ಯದಲ್ಲಿ ಕುಡಿಯುವ ನೀರು ಪೂರೈಸಲು ಕೊರೆದ ಕೊಳವೆಬಾವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಕೊಳವೆ ಬಾವಿಗಳಲ್ಲಿ ವಿಫಲವಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು ;

(ಉ) ರಾಜ್ಯದಲ್ಲಿ ಈಗ ಸದ್ಯ ಕಾರ್ಯಗತಗೊಂಡಿರುವ ಹಾಗೂ ಕಾರ್ಯಗತಗೊಳಿಸಲಾಗುತ್ತಿರುವ ಕುಡಿಯುವ ನೀರಿನ ಯೋಜನೆಗಳ ಸಂಖ್ಯೆ ಎಷ್ಟು ;

(ಊ) ಕುಡಿಯುವ ನೀರನ್ನು ಯಾವ ಯಾವ ಹಳ್ಳಿಗಳಿಗೆ ಟ್ಯಾಂಕರ್ ಮೂಲಕ ಪೂರೈಸಲಾಗುತ್ತಿದೆ ;

(ಋ) ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲು ಕಳೆದ ೪ ವರ್ಷಗಳಲ್ಲಿ ಖರ್ಚು ಮಾಡಿದ ಹಣವೆಷ್ಟು ?

## ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಗುತ್ತಿಗೆ, ಸಂಚಿತ ವೇತನ, ಹೊರ ಗುತ್ತಿಗೆ ಹಾಗೂ ಇತರೆ ವಿಧಾನಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ವಿಲೀನಗೊಳಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೨೭ (೬೭೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ವಿಶ್ವವಿದ್ಯಾಲಯಗಳಲ್ಲಿ ಗುತ್ತಿಗೆ, ಸಂಚಿತ ವೇತನ, ಹೊರ ಗುತ್ತಿಗೆ ಹಾಗೂ ಇತರೆ ವಿಧಾನಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಆ) ಈ ಸಿಬ್ಬಂದಿಗಳು ಎಷ್ಟು ವರ್ಷಗಳಿಂದ ಕೆಲಸ ಮಾಡುತ್ತಿದ್ದಾರೆ ; (ವಿವರವಾದ ಮಾಹಿತಿ ನೀಡುವುದು)

(ಇ) ಇವರನ್ನು ಸಂಬಂಧಿಸಿದ ವಿಶ್ವವಿದ್ಯಾಲಯಗಳ ಸೇವೆಯಲ್ಲಿ ವಿಲೀನಗೊಳಿಸಲು ಉದ್ದೇಶಿಸಲಾಗಿದೆಯೇ ;

(ಈ) ಈಗಾಗಲೇ ಲೋಕೋಪಯೋಗಿ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಇತರೆ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ದಿನಗೂಲಿ ನೌಕರರನ್ನು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ನಿಯಮಗಳನ್ನು ರೂಪಿಸಿ ವಿಲೀನಗೊಳಿಸಿದಂತೆ ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?

## ಡಿ.ಎಂ.ಸಿ. ಪದವಿ ಪಡೆದ ಹಾವೇರಿ ಜಿಲ್ಲೆಯ ಚಿತ್ರಕಲಾ ಶಿಕ್ಷಕರ ವೇತನ ತಡೆ ಹಿಡಿದಿರುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೨೮ (೬೭೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಡಿ.ಎಂ.ಸಿ. ವಿದ್ಯಾರ್ಹತೆ ಪಡೆದು ಆರ್ಟ್ಸ್ ಮಾಸ್ಟರ್ ವೇತನ ಶ್ರೇಣಿ ಪಡೆಯುತ್ತಿರುವ ಚಿತ್ರಕಲಾ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಡಿ.ಎಂ.ಸಿ. ವಿದ್ಯಾರ್ಹತೆ ಹೊಂದಲು ನಿಗಧಿಪಡಿಸಿದ ದಿನಾಂಕ ಯಾವುದು ;

(ಇ) ಈ ದಿನಾಂಕದ ನಂತರ ಡಿ.ಎಂ.ಸಿ. ಪದವಿ ಪಡೆದ ಎಷ್ಟು ಚಿತ್ರಕಲಾ ಶಿಕ್ಷಕರನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ ;

(ಈ) ನಿಗಧಿತ ದಿನಾಂಕದ ನಂತರ ಡಿ.ಎಂ.ಸಿ. ವಿದ್ಯಾರ್ಹತೆ ಹೊಂದಿದ ಹಾವೇರಿ ಜಿಲ್ಲೆಯ ಎಷ್ಟು ಜನ ಶಿಕ್ಷಕರ ವೇತನವನ್ನು ತಡೆಹಿಡಿಯಲಾಗಿದೆ ;

(ಉ) ಸದರಿ ಚಿತ್ರಕಲಾ ಶಿಕ್ಷಕರಿಗೆ ವೇತನ ಪಾವತಿಸಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಆದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಈ ಕುರಿತು ಯಾವಾಗ ಆದೇಶ ಹೊರಡಿಸಲಾಗಿದೆ ?

## ದೈಹಿಕ ಶಿಕ್ಷಕರು, ಟಿ.ಜಿ.ಟಿ ಶಿಕ್ಷಕರು, ವೃತ್ತಿ ಶಿಕ್ಷಕರು ಹಾಗೂ ಇತರರಿಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೯೨೯ (೭೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಶಿಕ್ಷಕರು ಹಾಗೂ ಪದವಿ ಪೂರ್ವ ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಿ ಸರ್ಕಾರ ಯಾವಾಗ ಆದೇಶ ಹೊರಡಿಸಿದೆ ;

(ಆ) ಈ ಆದೇಶದಲ್ಲಿ ದೈಹಿಕ ಶಿಕ್ಷಕರು, ಟಿ.ಜಿ.ಟಿ ಶಿಕ್ಷಕರು, ವೃತ್ತಿ ಶಿಕ್ಷಕರು ಹಾಗೂ ಸಮಾನಾಂತರ ಹುದ್ದೆಗಳನ್ನು ಹೊಂದಿದ ಸಿಬ್ಬಂದಿಗೆ ಈ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡದಿರಲು ಕಾರಣಗಳೇನು ;

(ಇ) ಈ ರೀತಿ ಶಿಕ್ಷಕರಲ್ಲಿಯೇ ತಾರತಮ್ಯ ಮಾಡಿ ಆದೇಶ ಹೊರಡಿಸಲು ಕಾರಣಗಳೇನು ;

(ಈ) ಈ ತಾರತಮ್ಯವನ್ನು ಸರಿಪಡಿಸಲು ಸರಕಾರ ಕೈಗೊಂಡ ಕ್ರಮಗಳೇನು ;

(ಉ) ಸರಕಾರಿ ಆದೇಶವನ್ನು ಯಾವ ದಿನಾಂಕದೊಳಗೆ ಹೊರಡಿಸಲಾಗುವುದು ?

## ವಿಜಯಪುರದಲ್ಲಿ ನಿರ್ಮಾಣವಾಗಿರುವ ಮನೆಗಳ ಹಂಚಿಕೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೦ (೬೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿಯಿಂದ ಮನೆ/ನಿವೇಶನ ಹಂಚಿಕೆಗೆ ಸರ್ಕಾರವು ರೂಪಿಸಿರುವ ಮಾನದಂಡಗಳೇನು ;

(ಆ) ಕರ್ನಾಟಕ ಗೃಹ ಮಂಡಳಿ ವತಿಯಿಂದ ವಿಜಯಪುರದಲ್ಲಿ ನಿರ್ಮಾಣ ಮಾಡಿರುವ ಮನೆಗಳ ಹಂಚಿಕೆಯಲ್ಲಿ ಭಾರಿ ಅವ್ಯವಹಾರ ನಡೆದಿದೆ ಎಂಬ ಗಂಭೀರ ಆರೋಪವಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ವಿಜಯಪುರ ಗೃಹ ಮಂಡಳಿಯ ವತಿಯಿಂದ ಮನೆ ಹಂಚಿಕೆಗಾಗಿ ಸಾರ್ವಜನಿಕರಿಂದ ಹಣ ಪಡೆದ ಬಗ್ಗೆ ಯಾವುದೇ ಲೆಕ್ಕಪತ್ರಗಳು ಇಲ್ಲದಿರುವ ಬಗ್ಗೆ ಹಾಗೂ ಸಾಮಾಜಿಕ ನ್ಯಾಯವನ್ನು ಪಾಲಿಸದೇ ಇರುವ ಬಗ್ಗೆ ಗಂಭೀರ ಆರೋಪಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದಕ್ಕೆ ಸರ್ಕಾರವು ತೆಗೆದುಕೊಂಡಿರುವ ಸೂಕ್ತ ಕ್ರಮಗಳು ಯಾವುವು ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರವು ಮುಂದಿನ ದಿನಗಳಲ್ಲಿ ತೆಗೆದುಕೊಳ್ಳುವ ಕ್ರಮಗಳೇನು ? (ವಿವರವಾದ ಮಾಹಿತಿ ನೀಡುವುದು)

## ಚಾಲಕರಿಗೆ / ನಿರ್ವಾಹಕರಿಗೆ ನೀಡುವ ಸೌಲಭ್ಯದ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೧ (೭೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಸ್ತೆ ಸಾರಿಗೆ ಸಂಸ್ಥೆಯ ಎಲ್ಲಾ ವಿಭಾಗಗಳಲ್ಲಿ ಚಾಲಕರಾಗಿ ನಿರ್ವಾಹಕರಾಗಿ, ಚಾಲಕ ಕಂ. ನಿರ್ವಾಹಕರಾಗಿ ಸೇವೆ ಸಲ್ಲಿಸುತ್ತಿರುವವರ ಸಂಖ್ಯೆ ಎಷ್ಟು ;

(ಆ) ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಚಾಲಕರ ಕರ್ತವ್ಯ ಮತ್ತು ಮಾರ್ಗಸೂಚಿಗಳ ವಿವರ ನೀಡುವುದು ;

(ಇ) ಪ್ರತಿ ಸಾರಿಗೆ ವಿಭಾಗದಲ್ಲಿ ಚಾಲಕರು ತಮ್ಮ ನಿಗಧಿತ ಕಿ.ಮೀ.ಗಳನ್ನು ಪೂರೈಸಿದ ನಂತರವೂ ಸಾರಿಗೆ ಅಧಿಕಾರಿಗಳ ಒತ್ತಡದ ಆದೇಶಕ್ಕೆ ಹೆಚ್ಚುವರಿಯಾಗಿ ವಾಹನ ಚಾಲನೆ ಮಾಡುತ್ತಿರುವುದರಿಂದ ಅಪಘಾತಗಳು ಸಂಭವಿಸುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಪರಿಗಣಿಸಿದ್ದಲ್ಲಿ, ಸರ್ಕಾರ ಅಪಘಾತ ತಡೆಯುವಲ್ಲಿ ಯಾವ ಕ್ರಮ ತೆಗೆದುಕೊಂಡಿದೆ ; (ವಿವರ ನೀಡುವುದು)

(ಈ) ಚಾಲಕರಿಗೆ, ನಿರ್ವಾಹಕರಿಗೆ, ಚಾಲಕ ಕಂ. ನಿರ್ವಾಹಕರಿಗೆ ಸಂಬಂಧಿಸಿದಂತೆ ಸರ್ಕಾರ ಯಾವ ಯಾವ ಸೌಲಭ್ಯವನ್ನು ಕಲ್ಪಿಸಿದೆ ಮತ್ತು ಯಾವ ಸೌಲಭ್ಯಗಳನ್ನು ನೀಡಲು ಉದ್ದೇಶಿಸಿದೆ ? (ವಿವರ ನೀಡುವುದು)

## ವಕ್ಫ್ ಆಸ್ತಿ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೨ (೭೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳ ಅವಧಿಯಲ್ಲಿ ವಿಜಯಪುರ ನಗರದ ಸರ್ಕಾರಿ ಆಸ್ತಿಗಳನ್ನು ವಕ್ಫ್‌ಗೆ ಮತ್ತು ಸಾರ್ವಜನಿಕ ಬಳಕೆಗೆ ವರ್ಗಾವಣೆಯಾಗಿರುವುದೇ ; (ಸರ್ವೆ ನಂ. ಸಹಿತ ವಿವರ ನೀಡುವುದು)

(ಆ) ವಕ್ಫ್‌ಗೆ ವರ್ಗಾವಣೆಯಾದ ಸರ್ಕಾರಿ ಆಸ್ತಿಗಳನ್ನು ಪರಭಾರೆ ಮಾಡುವಾಗ ಗೆಜೆಟ್ ನೋಟಿಫಿಕೇಶನ್ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ವಿಜಯಪುರ ನಗರದ ಎಷ್ಟು ಸರ್ಕಾರಿ ಆಸ್ತಿಗಳನ್ನು ಲೀಜ್ ಆಧಾರದ ಮೇಲೆ ನಗರಸಭೆ ಮತ್ತು ಮಹಾನಗರ ಪಾಲಿಕೆಗೆ ಹಸ್ತಾಂತರಿಸಲಾಗಿದೆ ; (ವಿವರ ನೀಡುವುದು)

(ಈ) ವಕ್ಫ್‌ಗೆ ವರ್ಗಾವಣೆಯಾದ ಆಸ್ತಿಗಳನ್ನು ಪಡೆದುಕೊಂಡವರು ಬೇರೆಯವರಿಗೆ ಮಾರಾಟ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪ್ರಕರಣಗಳಲ್ಲಿ ಸರ್ಕಾರವು ತೆಗೆದುಕೊಂಡ ಗಂಭೀರ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಬಸನಗೌಡ ಆರ್.ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೩ (೬೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ ; (ವಿವರವಾದ ಮಾಹಿತಿ ನೀಡುವುದು)

(ಆ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ಪೂರ್ವ ಪ್ರಾಥಮಿಕ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಮೀಸಲಿಟ್ಟ ಜಾಗಗಳು ಅತಿಕ್ರಮವಾಗಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಮಾಹಿತಿ ಇದ್ದಲ್ಲಿ, ಸದರಿ ಅತಿಕ್ರಮಣಗೊಂಡಿರುವ ಶಾಲೆಗಳ ಜಾಗದ ಹದ್ದು ಗುರ್ತಿಸಿ, ಅತಿಕ್ರಮಣವನ್ನು ತೆರವುಗೊಳಿಸುವ ಸಂಬಂಧ ಸರ್ಕಾರವು ಯಾವ ರೀತಿಯ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಬಸವರಾಜ .ಪಾಟೀಲ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೪ (೬೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಡಿಯಲ್ಲಿ ಬರುವ ರಸ್ತೆಗಳು ಯಾವುವು ; (ಪೂರ್ಣ ವಿವರ ಒದಗಿಸುವುದು)

(ಆ) ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲು ತೆಗೆದುಕೊಂಡ ಕ್ರಮವೇನು ;

(ಇ) ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು ;

(ಈ) ೨೦೧೭–೧೮ನೇ ಸಾಲಿನಲ್ಲಿ ಈ ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಹಣ ಬಿಡುಗಡೆ ಮಾಡಲು ಸರ್ಕಾರದ ನಿರ್ಧಾರವೇನು ?

## ಕೆರೆಗಳ ಅಭಿವೃದ್ಧಿ ಕುರಿತು

**ಶ್ರೀ ಬಸವರಾಜ .ಪಾಟೀಲ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೫ (೬೨೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಗೆ ಬರುವ ಕೆರೆಗಳು ಯಾವುವು ; ಕೆರೆಗಳ ಸರ್ವೆ ನಂ. ವಿಸ್ತೀರ್ಣ ಮತ್ತು ನೀರಾವರಿ ಆಗುವ ಕ್ಷೇತ್ರಗಳ ವಿವರ ನೀಡುವುದು ;

(ಆ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಅವುಗಳ ಅಭಿವೃದ್ಧಿಗಾಗಿ ವಿವಿಧ ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ಒದಗಿಸಲಾಗಿರುವ ಹಣ ಎಷ್ಟು ; ಆ ಪೈಕಿ ಯಾವ ಯಾವ ಕೆರೆಗಳಿಗೆ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಸದರಿ ಕಾಮಗಾರಿಗಳನ್ನು ನಿರ್ವಹಿಸಿದ ಗುತ್ತಿಗೆದಾರರ ಹೆಸರಿನೊಂದಿಗೆ ಅಂಕಿ ಅಂಶಗಳ ವಿವರ ಒದಗಿಸುವುದು ;

(ಇ) ಈ ಕ್ಷೇತ್ರದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಕೆರೆಗಳನ್ನು ಒತ್ತುವರಿ ಮಾಡಿಕೊಳ್ಳಲಾಗಿದೆ ; ಒತ್ತುವರಿದಾರರ ಹೆಸರು ಮತ್ತು ಕೆರೆಗಳ ಹೆಸರು, ಒತ್ತುವರಿ ಮಾಡಿದ ಅಳತೆ ವಿವರ ನೀಡುವುದು ;

(ಈ) ಒತ್ತುವರಿ ಮಾಡಿದ್ದಲ್ಲಿ, ಸದರಿ ಒತ್ತುವರಿ ತೆರವುಗೊಳಿಸಲು ಮತ್ತು ಸದರಿ ಕೆರೆಯ ಜಾಗ ರಕ್ಷಣೆಯನ್ನು ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ನಿವೇಶನ ರಹಿತ ಮತ್ತು ವಸತಿ ರಹಿತ ಪಟ್ಟಿ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೬ (೭೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನ ರಹಿತ ಮತ್ತು ವಸತಿ ರಹಿತರ ಪಟ್ಟಿಯನ್ನು ಮಾಡಲಾಗಿದೆಯೇ ; (ಗ್ರಾಮವಾರು, ನಗರವಾರು ಮಾಹಿತಿಯನ್ನು ನೀಡುವುದು)

(ಆ) ಈ ಪಟ್ಟಿಯನ್ನು ಮಾಡಲು ಸರ್ಕಾರವು ನಿಗಧಿಪಡಿಸಿರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳಂತೆಯೇ ಪಟ್ಟಿಯನ್ನು ಮಾಡಲಾಗಿದೆಯೇ ; ಹಾಗೂ ಸಾರ್ವಜನಿಕವಾಗಿ ಪ್ರಕಟಣೆ ಮಾಡಲಾಗಿದೆಯೇ ? (ವಿವರ ನೀಡುವುದು)

## ರಾಯಚೂರುನಲ್ಲಿ ವಿಶ್ವವಿದ್ಯಾಲಯ ಪ್ರಾರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೭ (೭೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರುನಲ್ಲಿ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾಚಾರ್ಯರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಖಾಲಿಯಿರುವ ಪ್ರಾಚಾರ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶವು ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿರುವುದರಿಂದ ಈ ಪ್ರದೇಶಕ್ಕೆ “ವಿಶೇಷ ಪ್ಯಾಕೇಜ್” ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ವಸತಿ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೩೮ (೭೨೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೩–೧೪ ರಿಂದ ಇಲ್ಲಿಯವರೆಗೂ ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾಗಿರುವ ಮನೆಗಳೆಷ್ಟು ; ಅದಕ್ಕೆ ತಗಲಿರುವ ಅಂದಾಜು ವೆಚ್ಚ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯಲ್ಲಿ ಸಾಮಾನ್ಯ ವರ್ಗದ ಜನಾಂಗಕ್ಕೆ ವಸತಿ ಯೋಜನೆಗಳನ್ನು ಮಂಜೂರಾತಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೩೯ (೭೨೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ಯೋಜನೆಗಳ ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ಮತ್ತು ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕುಡಿಯುವ ನೀರಿನ ತೊಂದರೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮುನಿರಾಬಾದ್–ಮೆಹಿಬೂಬನಗರದ ರೈಲ್ವೆ ವಲಯ ಹಾಗೂ ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೪೦ (೭೨೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮುನಿರಾಬಾದ್–ಮೆಹಿಬೂಬನಗರದ ರೈಲ್ವೆ ವಲಯ ಯೋಜನೆಯನ್ನು ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರಿನಲ್ಲಿ ವಿಮಾಣ ನಿಲ್ದಾಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ನಗರದಲ್ಲಿ ಕೈಗಾರಿಕೆಗಳ ಸ್ಥಾಪನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೪೧ (೭೩೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಕೈಗಾರಿಕೆಗಳ ನಿರ್ಮಾಣಕ್ಕೆ ಭೂಮಿ ಶೇಖರಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮ ವಿಕಾಸ ಯೋಜನೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೪೨ (೬೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ವಿಕಾಸ ಯೋಜನೆಯನ್ನು ಸರ್ಕಾರವು ಯಾವಾಗಿನಿಂದ ಜಾರಿಗೆ ತಂದಿದೆ ; ಇದರ ರೂಪುರೇಷಗಳೇನು ;

(ಆ) ಗ್ರಾಮಗಳನ್ನು ಆಯ್ಕೆ ಮಾಡುವ ಅವಕಾಶವನ್ನು ಯಾರಿಗೆ ನೀಡಲಾಗಿದೆ ;

(ಇ) ಮಾನ್ಯ ವಿಧಾನ ಪರಿಷತ್ತು ಸದಸ್ಯರಿಗೆ ಗ್ರಾಮಗಳನ್ನು ಆಯ್ಕೆ ಮಾಡುವ ಅಧಿಕಾರವನ್ನು ನೀಡದೆ ಇರುವುದು ನಿಜವೇ ;

(ಈ) ಹಾಗಾದರೆ ಸರ್ಕಾರವು ಇಬ್ಬಗೆಯ ನೀತಿಯನ್ನು ಅನುಸರಿಸುತ್ತಿರುವುದು ಸರಿಯೇ ;

(ಉ) ಇದನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು ;

(ಊ) ಮಾನ್ಯ ವಿಧಾನ ಪರಿಷತ್ತು ಸದಸ್ಯರು ತಮ್ಮ ಸ್ವಂತ ಗ್ರಾಮವನ್ನು ಗ್ರಾಮ ವಿಕಾಸ ಯೋಜನೆಯಡಿ ಅಭಿವೃದ್ಧಿಪಡಿಸಲು ಸಾಧ್ಯವಾಗದಿರುವುದು ನಿಜವೇ ? (ವಿವರವಾದ ಮಾಹಿತಿ ನೀಡುವುದು)

## ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೪೩ (೬೮೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೫–೯೬ನೇ ಶೈಕ್ಷಣಿಕ ವರ್ಷದಿಂದ ೨೦೧೪–೧೫ನೇ ಸಾಲಿನವರೆಗೆ ಪ್ರಾರಂಭಿಸಲಾದ ಶಿಕ್ಷಣ ಸಂಸ್ಥೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಶಿಕ್ಷಣ ಸಂಸ್ಥೆವಾರು ಮಾಹಿತಿ ನೀಡುವುದು)

(ಆ) ಈ ಶಿಕ್ಷಣ ಸಂಸ್ಥೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಉದ್ದೇಶಿಸಿದಲ್ಲಿ ಪ್ರತಿವರ್ಷ ಸರ್ಕಾರಕ್ಕೆ ಆಗುವ ಆರ್ಥಿಕ ಹೊರೆ ಎಷ್ಟು ;

(ಇ) ಕಳೆದ ೨೦ ವರ್ಷಗಳಿಂದ ಈ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಯನ್ನು ಮಾನವೀಯ ನೆಲೆಗಟ್ಟಿನ ಮೇಲೆ ಹಂತ ಹಂತವಾಗಿ ವೇತನಾನುದಾನಕ್ಕೆ ಒಳಪಡಿಸಲು ಸಾಧ್ಯವಿಲ್ಲವೇ ;

(ಈ) ಪಕ್ಕದ ರಾಜ್ಯಗಳಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸುವ ಪ್ರಕ್ರಿಯೆಯನ್ನು ಅಧ್ಯಯನ ಮಾಡಿ ಸೂಕ್ತವಾದ ಪ್ರಕ್ರಿಯೆಯನ್ನು ನಮ್ಮ ರಾಜ್ಯದಲ್ಲಿ ಅಳವಡಿಸಿಕೊಳ್ಳಲು ಉದ್ದೇಶಿಸಲಾಗಿದೆಯೇ ;

(ಉ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕಾಲ್ಪನಿಕ ವೇತನದ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೪೪ (೬೭೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಅನುದಾನ ರಹಿತ ಅವಧಿಗೆ ಕಾಲ್ಪನಿಕ ವೇತನ ನಿಗಧಿಗೊಳಿಸಲು ಅಧ್ಯಯನ ನಡೆಸಿ ವರದಿ ಸಲ್ಲಿಸಲು ವಿಧಾನಪರಿಷತ್ ಸದಸ್ಯ ಬಸವರಾಜ ಎಸ್. ಹೊರಟ್ಟಿಯವರ ನೇತೃತ್ವದಲ್ಲಿ ಸದನ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಆ) ಈ ಸಮಿತಿಯು ತನ್ನ ಅಂತಿಮ ವರದಿಯನ್ನು ಸರ್ಕಾರಕ್ಕೆ ಯಾವ ದಿನಾಂಕದಂದು ಸಲ್ಲಿಸಿದೆ ;

(ಇ) ಸಮಿತಿಯ ವರದಿಯ ಪ್ರಮುಖ ಶಿಫಾರಸ್ಸುಗಳಾವುವು ;

(ಈ) ಸಮಿತಿಯ ಶಿಫಾರಸ್ಸುಗಳನ್ನು ಸರ್ಕಾರ ಒಪ್ಪಿದೆಯೇ ;

(ಉ) ಹಾಗಿದ್ದಲ್ಲಿ, ಈ ಶಿಫಾರಸ್ಸುಗಳನ್ನು ಯಥಾವತ್ತಾಗಿ ಜಾರಿಗೊಳಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಯಾವ ದಿನಾಂಕದಂದು ಸರ್ಕಾರ ಆದೇಶ ಹೊರಡಿಸಲಿದೆ ?

## ಅತಿಥಿ ಉಪನ್ಯಾಸಕರ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೪೫ (೬೭೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳನ್ನು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಯಾವಾಗ ಸೃಜನೆ ಮಾಡಲಾಗುವುದು ;

(ಇ) ಸೃಜನೆಗೊಂಡ ಹುದ್ದೆಗೆ ಎದುರಾಗಿ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಈ) ನಡೆಸಿದ್ದರೆ, ಯಾವ ಕಾಲಮಿತಿಯೊಳಗೆ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ?

## ಜಿಲ್ಲಾ ಪಂಚಾಯತ್ ನೌಕರರ ಬಗ್ಗೆ

**ಶ್ರೀ ಆರ್.ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೪೬ (೬೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಲೀನಗೊಂಡ ಹಾಗೂ ಹೊಸದಾಗಿ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ;

(ಆ) ಇವರಲ್ಲಿ ಕೆಲವು ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಅವರಿಗೆ ಸರ್ಕಾರಿ ನೌಕರರಿಗೆ ಸಿಗುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಇ) ಕೆಲವು ನೌಕರರನ್ನು ಸರ್ಕಾರಿ ನೌಕರರಲ್ಲವೆಂದು ಪರಿಗಣಿಸಿ ಅವರಿಗೆ ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳಿಂದ ವಂಚಿತರಾಗಿ ಮಾಡಿರುವುದು ನಿಜವೇ ;

(ಈ) ಜಿಲ್ಲಾ ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸಚಿವ ಸಂಪುಟವು ಯಾವ ದಿನಾಂಕದಂದು ನಿರ್ಧರಿಸಿದೆ ;

(ಉ) ಸಚಿವ ಸಂಪುಟದ ನಿರ್ಣಯವನ್ನು ಅನುಷ್ಠಾನಗೊಳಿಸಲು ಇರುವ ತೊಂದರೆಗಳೇನು ;

(ಊ) ಈ ಕುರಿತು ವಿಳಂಬವಾಗಿ ಸರ್ಕಾರಿ ಆದೇಶ ಹೊರಡಿಸಿದ್ದಲ್ಲಿ ಹಲವಾರು ನೌಕರರು ಅವರಿಗೆ ಸಿಗಬೇಕಾದ ಸೌಲಭ್ಯಗಳಿಂದ ವಂಚಿತರಾಗುವುದಿಲ್ಲವೇ ;

(ಋ) ಈ ತಾರತಮ್ಯ ಪರಿಹರಿಸಿ ಸಚಿವ ಸಂಪುಟದ ನಿರ್ಣಯದಂತೆ ಜಿಲ್ಲಾ ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ ಯಾವಾಗ ಸರ್ಕಾರಿ ಆದೇಶ ಹೊರಡಿಸಲಾಗುವುದು ?

## ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ನೀಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪೭ (೬೨೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣವನ್ನು ಸಮರ್ಪಕವಾಗಿ ನೀಡಲಾಗುತ್ತಿದೆಯೇ ;

(ಆ) ಎಲ್ಲಾ ಪದವಿ ಕಾಲೇಜುಗಳಲ್ಲಿ ಅಗತ್ಯವಾದ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಲಾಗಿದೆಯೇ ; ದೈಹಿಕ ಶಿಕ್ಷಕರ ಕೊರತೆ ಇಲ್ಲವೇ ;

(ಇ) ಒಂದು ವೇಳೆ ಕೊರತೆ ಇದ್ದಲ್ಲಿ, ಕೂಡಲೇ ನೇಮಕಾತಿ ಮಾಡಿ ದೈಹಿಕ ಶಿಕ್ಷಕರು ಕೊರತೆಯುನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಶಾಲಾ ಮಕ್ಕಳ ಬಿಸಿಯೂಟಕ್ಕೆ ಪ್ರತ್ಯೇಕ ವ್ಯವಸ್ಥೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪೮ (೬೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಾಲೆಗಳಲ್ಲಿ ಬಿಸಿಯೂಟದ ಗುಣಮಟ್ಟ ಸರಿಯಿಲ್ಲದೆ ಅನೇಕ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಾಲಾ ಮುಖ್ಯೋಪಾಧ್ಯಾಯರಿಗೆ ಈ ಬಿಸಿಯೂಟದ ಜವಾಬ್ದಾರಿಯನ್ನು ವಹಿಸದೆ ಇದಕ್ಕಾಗಿಯೇ ಪ್ರತ್ಯೇಕ ನುರಿತ ಅಡಿಗೆಯವರನ್ನು ಮತ್ತು ಮೇಲ್ವಿಚಾರಣೆಗೆ ಪ್ರತ್ಯೇಕ ಅಧಿಕಾರಿಗಳನ್ನು ನೇಮಿಸಿ ಈಗ ಆಗುತ್ತಿರುವ ತೊಂದರೆಗಳನ್ನು ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ;

(ಇ) ಮಕ್ಕಳ ಆರೋಗ್ಯದ ದೃಷ್ಟಿಯಿಂದ ಈಗಿರುವ ಪದ್ಧತಿಯನ್ನು ಬದಲಾಯಿಸಿ ಹೊಸ ಪದ್ಧತಿಯನ್ನು ಜಾರಿಗೊಳಿಸಲು ಸರ್ಕಾರ ಪರಿಶೀಲಿಸುತ್ತದೆಯೇ ?

## ಕೊಳೆಗೇರಿ ನಿವಾಸಿಗಳಿಗೆ ನಿವೇಶನ ಹಂಚಿಕೆ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪೯ (೬೨೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಸಾಣೆಗುರುವಿನ ಹಳ್ಳಿಯಲ್ಲಿ ೨೦೦ ಮಂದಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದವರು ಗುಡಿಸಲುಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ೧೯೯೭ ರಲ್ಲಿ ನೆಲಸಮಗೊಳಿಸಿರುವುದು ನಿಜವಲ್ಲವೆ ;

(ಆ) ಅವರಲ್ಲಿ ೭೫ ಜನರಿಗೆ ಮಾತ್ರ ನಿವೇಶನ ಹಂಚಿಕೆ ಮಾಡಿದ್ದು, ಇನ್ನುಳಿದ ೧೨೫ ಜನರಿಗೆ ಹಂಚಿಕೆ ಮಾಡಿಲ್ಲದಿರುವುದರಿಂದ, ಇವರಿಗೂ ನಿವೇಶನ ನೀಡುವ ಬಗ್ಗೆ ಪರಿಶೀಲಿಸಬೇಕೆಂದು ವಿಧಾನ ಮಂಡಲದ ಅನುಸೂಚಿತ ಜಾತಿ ಪಂಗಡಗಳ ಕಲ್ಯಾಣ ಸಮಿತಿ ಸೂಚಿಸಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಈಗಾಗಲೇ ವಿಳಂಬವಾಗಿರುವುದರಿಂದ ಈ ೧೨೫ ಜನರಿಗೆ ೨೦X೩೦ ಅಡಿ ಅಳತೆಯ ನಿವೇಶನಗಳನ್ನು ಕೂಡಲೇ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಹಂಚಿಕೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಶಾಲಾ ಸಮವಸ್ತ್ರ ಖರೀದಿಯಲ್ಲಿ ಅವ್ಯವಹಾರ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೦ (೬೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಸರ್ವ ಶಿಕ್ಷಣ ಅಭಿಯಾನ ಯೋಜನೆಯಲ್ಲಿ ಪ್ರಸಕ್ತ ಸಾಲಿನ ೨ನೇ ಹಂತದ ಶಾಲಾ ಸಮವಸ್ತ್ರ ವಿತರಣೆಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಅಂದಾಜು ೧ ಕೋಟಿಗೂ ಹೆಚ್ಚು ಅವ್ಯವಹಾರವಾಗಿದೆ, ಎಂದು ಸಾಮಾಜಿಕ ಸೇವಾ ಸಂಘಟನೆ ಸೇಫ್ ಆರ್ಗ್‍ನೈಜೇಷನ್ ಅಧ್ಯಕ್ಷ ಆರೋಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ? (ವಿವರ ನೀಡುವುದು)

(ಆ) ಸರ್ಕಾರದ ಸುತ್ತೋಲೆ ಪ್ರಕಾರ ನಿಗದಿಪಡಿಸಿದ ನಿಯಮಾವಳಿಗಳನ್ನು ಗಾಳಿಗೆ ತೂರಿ ಕಳಪೆ ಗುಣಮಟ್ಟದ ಸಮವಸ್ತ್ರಗಳನ್ನು ತಮಗೆ ಬೇಕಾದವರಿಂದ ಖರೀದಿಸಲಾಗಿದ್ದು, ಇದರಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ನೇರ ಕೈವಾಡ ಇರುತ್ತದೆಂದು ತಿಳಿದು ಬಂದಿದ್ದು ಸರ್ಕಾರ ಈ ಕುರಿತು ತನಿಖೆ ಮಾಡುವುದೇ ; (ವಿವರ ನೀಡುವುದು)

(ಇ) ಈ ಸಮವಸ್ತ್ರ ಕುರಿತಾದ ಟೆಂಡರ್ ಕರೆದಿರುವ ಬಗ್ಗೆ ಪತ್ರಿಕಾ ಮಾಹಿತಿ ಹಾಗೂ ಟೆಂಡರ್ ಹಾಕಿರುವವರ ವಿವರಗಳೇನು ? (ತಾಲ್ಲೂಕುವಾರು / ಜಿಲ್ಲಾವಾರು ನಿಯಮಾವಳಿಗಳ ಪ್ರಕಾರ ಮಾಹಿತಿ ನೀಡುವುದು)

## ಕುಡಿಯುವ ನೀರಿನ ಘಟಕಕ್ಕೆ ನೀಡಿರುವ ಅನುದಾನದಲ್ಲಿರುವ ಅವ್ಯವಹಾರದ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೧ (೬೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕಿನಲ್ಲಿ ೨೦೧೫–೧೬ನೇ ಸಾಲಿನ ಜನವರಿ, ೨೦೧೬ರಿಂದ ಮೇ, ೨೦೧೬ ರವರೆಗೆ ಎಷ್ಟು ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ ; ಒಂದೊಂದು ಕುಡಿಯುವ ನೀರಿನ ಘಟಕಕ್ಕೆ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತ ಎಷ್ಟು ; ಸದರಿ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿರುವ ಏಜನ್ಸಿ ಯಾವುದು ; (ಸದರಿ ಏಜನ್ಸಿರವರು ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಲು ಆಯ್ಕೆಯಾಗಿರುವ ವಿಧಾನವನ್ನು ಘಟಕವಾರು ಮಾಹಿತಿ ನೀಡುವುದು)

(ಆ) ಇಲ್ಲಿಯವರೆಗೆ ಸದರಿ ಹಳಿಯಾಳ ಹಾಗೂ ಜೋಯಿಡಾ ತಾಲ್ಲೂಕಿನಲ್ಲಿ ಪೂರ್ಣಗೊಂಡಿರುವ ಕುಡಿಯುವ ನೀರಿನ ಘಟಕಗಳ ವಿವರ ಹಾಗೂ ಸದರಿ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿದವರಿಗೆ ಹಣ ಬಟವಾಡೆ ಮಾಡುವ ಅಧಿಕಾರಿ ಯಾರು ? (ವಿವರ ನೀಡುವುದು)

## ಕಾರವಾರ ಜಿಲ್ಲೆಯ ಶಿಕ್ಷಣ ಇಲಾಖೆಯಲ್ಲಿ ಬೆಂಚ್ / ಡೆಸ್ಕ್ ಖರೀದಿಯಲ್ಲಿ ಆದ ಅವ್ಯವಹಾರದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೨ (೬೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪ್ರತಿ ವರ್ಷ ಖರೀದಿಸಿದ ಬೆಂಚ್/ಡೆಸ್ಕ್ ಖರೀದಿ ಪ್ರಕ್ರಿಯೆಯಲ್ಲಿ ಇಲ್ಲಿಯವರೆಗೆ ಲಕ್ಷಾಂತರ ರೂಪಾಯಿಗಳ ಅವ್ಯವಹಾರ ಹಾಗಿರುವುದು ಹಾಗೂ ಈ ಬಗ್ಗೆ ಸಾಮಾಜಿಕ ಕಾರ್ಯಕರ್ತರು ಆರೋಪಿಸಿರುವುದು ನಿಜವಲ್ಲವೇ ; ಬಹಳಷ್ಟು ಅಧಿಕಾರಿಗಳು ಭಾಗಿಯಾಗಿರುತ್ತಾರೆಂದು ಸಾಮಾಜಿಕ ಕಾರ್ಯಕರ್ತರೊಬ್ಬರು ಆರೋಪಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ವಿಷಯದಲ್ಲಿ ೨೦೧೦ ರಿಂದ ಇಲ್ಲಿಯವರೆಗೆ ಶಿಕ್ಷಣ ಇಲಾಖೆಯಲ್ಲಿ ಖರೀದಿಸಿದ ಬೆಂಚ್/ಡೆಸ್ಕ್‌ಗಳಿಗೆ ನೀಡಿದ್ದ ಅನುದಾನ ಎಷ್ಟು ; ಇದನ್ನು ಪೂರೈಸಿದ ಗುತ್ತಿಗೆದಾರರು ಯಾರು ಇವರಿಗೆ ಯಾವ ಆಧಾರದ ಮೇಲೆ ಗುತ್ತಿಗೆ ನೀಡಲಾಗಿದೆ ; (ದಾಖಲೆಗಳೊಂದಿಗೆ ವಿವರ ನೀಡುವುದು) ಹಾಗೂ ಇದಕ್ಕೆ ಇರುವ ಮಾನದಂಡಗಳೇನು ; (ಆದೇಶದ ಪ್ರತಿ ಒದಗಿಸುವುದು)

(ಇ) ಅರಣ್ಯ ಇಲಾಖೆಯಿಂದ (ಬೆಂಚ್/ಡೆಸ್ಕ್) ಪರಿಶೀಲಿಸಿ ಪ್ರತಿ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ವರದಿಯ ಪ್ರತಿ ತೆಗೆದುಕೊಳ್ಳಬೇಕಾಗಿರುತ್ತದೆಯೇ ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಈ) ಸದರಿ ವಿಷಯದಲ್ಲಿ ಉನ್ನತ ಮಟ್ಟದ ತನಿಖೆ ಮಾಡಿ ಆಗಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರ ಸೂಕ್ತ ಕ್ರಮ ಜರುಗಿಸುವುದೇ ; ಇದಕ್ಕೆ ಕಾಲಾವಕಾಶ ಬೇಕಾಗಿರುವುದು ? (ವಿವರ ನೀಡುವುದು)

## ಶಿಕ್ಷಣ ಇಲಾಖೆಯಲ್ಲಿ ಅತಿಥಿ ಶಿಕ್ಷಕರಿಗೆ ೫ ತಿಂಗಳುಗಳಿಂದ ವೇತನ ದೊರೆಯದೆ ಇರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫೩ (೬೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಅತಿಥಿ ಶಿಕ್ಷಕರಾಗಿ ಸೇವೆ ಸಲ್ಲಿಸಿರುತ್ತಿರುವ ಸಾವಿರಾರು ಶಿಕ್ಷಕರಿಗೆ ಕಳೆದ ಐದು ತಿಂಗಳಿಂದ ವೇತನ ದೊರೆತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಈ ಶಿಕ್ಷಕರಿಗೆ ಇಲ್ಲಿಯವರೆಗೆ ಯಾವ ಕಾರಣಕ್ಕಾಗಿ ವೇತನ ಬಟವಾಡೆ ಮಾಡಿರುವುದಿಲ್ಲ ; ಈಗಲಾದರೂ ಸರ್ಕಾರ ಇವರಿಗೆ ವೇತನ ಬಟವಾಡೆ ಮಾಡಲು ಕ್ರಮ ಕೈಗೊಳ್ಳುವುದೇ ; ಇದಕ್ಕೆ ಎಷ್ಟು ಕಾಲಾವಕಾಶ ಬೇಕಾಗುವುದು ? (ವಿವರ ನೀಡುವುದು)

## ಕರಾವಳಿ ಜಿಲ್ಲೆಗಳಲ್ಲಿ ಖಾಸಗಿ ಸಾರಿಗೆಯನ್ನು ರಾಷ್ಟ್ರೀಕರಣಗೊಳಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೪ (೬೪೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಲ್ಲಿ ಖಾಸಗಿ ಸಾರಿಗೆಂಯುನ್ನು ರಾಷ್ಟ್ರೀಕರಣಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಈ ಬಗ್ಗೆ ಸರ್ಕಾರದ ನೀತಿ ಏನು ;

(ಆ) ಕರಾವಳಿ ಜಿಲ್ಲೆಗಳಲ್ಲಿ ಖಾಸಗಿ ಬಸ್‌ಗಳು ಉತ್ತಮವಾಗಿ ಜನಸೇವೆ ನೀಡುತ್ತಿರುವುದರಿಂದ ರಾಷ್ಟ್ರೀಕರಣ ಮಾಡಲು ಇಲಾಖೆ ಆದೇಶ ಹೊರಡಿಸಿರುವುದು ಸರಿಯೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಒಟ್ಟು ಖಾಸಗಿ ಬಸ್‌ಗಳ ಸಂಖ್ಯೆ ಎಷ್ಟು ; ನೌಕರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಸಾರಿಗೆ ಇಲಾಖೆಯ ಬೇಡಿಕೆ ಇರುವ ಬಸ್‌ಗಳ ಸಂಖ್ಯೆ ಎಷ್ಟು ಇದಕ್ಕೆ ಬೇಕಾಗಿರುವ ಸಂಪನ್ಮೂಲ ಎಷ್ಟು ? (ವಿವರ ನೀಡುವುದು)

## ರಾಜ್ಯದಾದ್ಯಂತ ಅಕ್ರಮ ಮರಳುಗಾರಿಕೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೫ (೬೪೩) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಅಕ್ರಮ ಮರಳುಗಾರಿಗೆ ವ್ಯಾಪಕವಾಗಿ ನಡೆಯುತ್ತಿದ್ದು, ಸಾರ್ವಜನಿಕರು ಆಕ್ರೋಶಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಮರಳು ಪೂರೈಸಲು ಸರ್ಕಾರ ವಿಫಲಗೊಂಡಿದೆ ಎಂಬ ಆರೋಪ ಹೊಂದಿದ್ದು ಈ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಯೋಜನೆಗಳಾವುವು ;

(ಇ) ಕರಾವಳಿ ಭಾಗದಲ್ಲಿ CRZ ಮತ್ತು Non CRZ ಎಂದು ವಿಭಾಗಗಳನ್ನಾಗಿ ವಿಂಗಡಿಸಿದ್ದು, ಈ ಬಗ್ಗೆ ಇಲಾಖೆಯಲ್ಲಿರುವ ನಿಯಮಗಳಾವುವು ;

(ಈ) ರಾಜ್ಯದಲ್ಲಿ ಅವಶ್ಯಕತೆಗೆ ಅನುಗುಣವಾಗಿ ಮರಳು ಪೂರೈಸಲು ಸರ್ಕಾರ ಸಮರ್ಪಕವಾಗಿ ಕ್ರಮ ಕೈಗೊಳ್ಳದಿರಲು ಕಾರಣವೇನು ಪ್ರಸ್ತುತ ಒಂದು ಟನ್ ಮರಳಿಗೆ ಎಷ್ಟು ಹಣವನ್ನು ಪಡೆಯಲಾಗುತ್ತಿದೆ ? (ವಿವರ ನೀಡುವುದು)

## ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿದ ರೋಡ್ ಟ್ರಾನ್ಸ್‌ಪೋರ್ಟ್ ಮತ್ತು ಸೇಫ್ಟಿ ಬಿಲ್ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೬ (೬೪೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿದ ರೋಡ್ ಟ್ರಾನ್ಸ್‌ಪೋರ್ಟ್ ಮತ್ತು ಸೇಫ್ಟಿ ಬಿಲ್ ಕಾನೂನು ಜಾರಿಗೆ ಬಂದಿದೆಯೇ ;

(ಆ) ಕೇಂದ್ರ ಸರ್ಕಾರ ಪ್ರಸ್ತುತ ವಿಧಿಸಿದ ದಂಡಗಳಾವುವು ; ಎಷ್ಟು ಪ್ರಮಾಣದಲ್ಲಿ ಜಾರಿಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಮೋಟಾರ್ ವಾಹನಗಳಿಗೆ ದಂಡ ವಿಧಿಸುವ ಬಗ್ಗೆ ರಾಜ್ಯ ಸರ್ಕಾರದ ಆಕ್ಷೇಪಣೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದರೆ ವಿವರ ನೀಡುವುದು ;

(ಈ) ಸಾರಿಗೆ ಇಲಾಖೆ ಯಾವ ಕಾಯ್ದೆಗಳಿಗೆ ತಿದ್ದುಪಡಿ ತರಲಾಗಿದೆ ; ಇದರ ಪರಿಣಾಮಗಳೇನು ? (ವಿವರ ನೀಡುವುದು)

## ಮಂಗಳೂರಿನಲ್ಲಿ ಸಂಜೆ ಪಾಲಿಟೆಕ್ನಿಕ್ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೭ (೬೪೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರಿನಲ್ಲಿ ಸಂಜೆ ಪಾಲಿಟೆಕ್ನಿಕ್ ಸ್ಥಾಪಿಸಬೇಕೆಂದು ಎ.ಐ.ಸಿ.ಟಿ. ಅನುಮತಿ ನೀಡಿದ್ದರೂ ಇಲಾಖೆಯ ಕ್ರಮಕೈಗೊಳ್ಳದೇ ಇರಲು ಕಾರಣಗಳೇನು ;

(ಆ) ದಕ್ಷಿಣ ಕನ್ನಡ ಜಿಲ್ಲೆಯ ಕೈಗಾರಿಕೆಗಳಲ್ಲಿ ಉದ್ಯೋಗದಲ್ಲಿರುವ ಮಕ್ಕಳಿಗೆ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಸಂಜೆ ಪಾಲಿಟೆಕ್ನಿಕ್ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಮಂಗಳೂರಿನಲ್ಲಿ ಸಂಜೆ ಪಾಲಿಟೆಕ್ನಿಕ್ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಎಂದು ಕ್ರಮ ಕೈಗೊಳ್ಳುವುದು ; ( ವಿವರ ನೀಡುವುದು)

(ಈ) ಮಂಗಳೂರು ಸಂಜೆ ಪಾಲಿಟೆಕ್ನಿಕ್ ಹಾಸ್ಟೆಲ್ ದುರಸ್ಥಿಗೆ ಬಿಡುಗಡೆಗೊಳಿಸಿದ ಅನುದಾನ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಮಹಿಳಾ ಪಾಲಿಟೆಕ್ನಿಕ್ ಹಾಸ್ಟೆಲ್‌ನಲ್ಲಿ ಆವರಣಗೋಡೆ ಇಲ್ಲದೇ ಸೂಕ್ತ ಭದ್ರತೆ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಊ) ಹಾಸ್ಟೆಲ್‌ಗಳಲ್ಲಿ ವಾರ್ಡನ ಕೊರತೆ ಇದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಕ್ರೈಸ್ತ ಅಲ್ಪಸಂಖ್ಯಾತರ ಸಮುದಾಯದಿಂದ ನಡೆಸಲ್ಪಟ್ಟ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೯೫೮ (೬೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕ್ರೈಸ್ತ ಅಲ್ಪಸಂಖ್ಯಾತರ ಸಮುದಾಯದಿಂದ ನಡೆಸಲ್ಪಟ್ಟ ಶಿಕ್ಷಣ ಸಂಸ್ಥೆಗಳಲ್ಲಿ ಶೇ.೨೫ರಷ್ಟು ಕ್ರೈಸ್ತ ಸಮುದಾಯದ ವಿದ್ಯಾರ್ಥಿಗಳು ಇರಬೇಕೆಂಬ ಸರ್ಕಾರದ ನಿರ್ಬಂಧನೆಯ ಆಧಾರವೇನು ; (ವಿವರ ಒದಗಿಸುವುದು)

(ಆ) ಕ್ರೈಸ್ತ ಅಲ್ಪಸಂಖ್ಯಾತರ ಸಮುದಾಯ ಶಿಕ್ಷಣ ಸಂಸ್ಥೆಗಳನ್ನು ಆರ್ಟಿಕಲ್ ೩೦ರ ಅನ್ವಯ ನಡೆಸಿಕೊಂಡು ಬರುತ್ತಿರುವುದು ಇಲಾಖೆಯ ಗಮನದಲ್ಲಿದೆಯೇ ;

(ಇ) ಶಿಕ್ಷಣ ಸಂಸ್ಥೆ ಪ್ರಾರಂಭಿಕ ಹಂತದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರು ಎಂಬ ಘೋಷಣೆ ಮಾಡಿದ ನಂತರ ಪ್ರತಿ ವರ್ಷ ಅದು ಅಲ್ಪಸಂಖ್ಯಾತರು ಎಂದು ಘೋಷಿಸುವ ನಿಯಮಗಳಿದೆಯೇ ; ಅಲ್ಪಸಂಖ್ಯಾತರ ಕಛೇರಿಗಳಿಗೆ ಅಲೆಯುವಂತೆ ಮಾಡುವುದು ಸರಿಯೇ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ರಾಜ್ಯದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರ ಸಮುದಾಯ ನಡೆಸುತ್ತಿರುವ ಒಟ್ಟು ಶಿಕ್ಷಣ ಸಂಸ್ಥೆಗಳೆಷ್ಟು ; ಈ ಸಂಸ್ಥೆಗಳಿಗೆ ಮಾನ್ಯತೆ ನೀಡಲಾಗಿದೆಯೇ ? (ವಿವರ ನೀಡುವುದು)

## ಇ–ಸ್ವತ್ತು ಕುರಿತು

**ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೯೫೯ (೫೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮನೆ ಮತ್ತು ನಿವೇಶನಗಳನ್ನು ಇ–ಸ್ವತ್ತು ಮಾಡಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆಯೇ ; ಇದ್ದಲ್ಲಿ, ಸರ್ಕಾರ ಆದೇಶವನ್ನು ಹೊರಡಿಸಿದೆಯೇ ; (ಪ್ರತಿಯನ್ನು ಒದಗಿಸುವುದು)

(ಆ) ಆದೇಶ ಹೊರಡಿಸಿದ ದಿನಾಂಕದಿಂದ ಈವರೆಗೆ ಎಷ್ಟು ಸ್ವತ್ತುಗಳನ್ನು ಇ–ಸ್ವತ್ತಿಗೆ ಒಳಪಡಿಸಲಾಗಿದೆ ; ವಿಳಂಬಕ್ಕೆ ಕಾರಣಗಳೇನು ;

(ಇ) ಈ ಯೋಜನೆಗಾಗಿ ರೂಪಿಸಿದ ಮತ್ತು ವ್ಯಯ ಮಾಡಿದ ಹಣ ಎಷ್ಟು ; ಗ್ರಾಮಗಳಿಗೆ ಪ್ರಚಾರದ ವ್ಯವಸ್ಥೆಯನ್ನು ಮತ್ತಷ್ಟು ಹೆಚ್ಚಳ ಮಾಡಲಾಗುವುದೇ ?

## ಗೊಲ್ಲರ ಹಟ್ಟಿಗಳಿಗೆ ವಸತಿ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೦ (೬೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ನೇ ಸಾಲಿನಲ್ಲಿ ಗೊಲ್ಲರ ಹಟ್ಟಿಗಳಲ್ಲಿನ ಗುಡಿಸಲು ಮನೆಗಳನ್ನು ತೆರವುಗೊಳಿಸಿ ಹೊಸದಾಗಿ ಮನೆಗಳನ್ನು ನಿರ್ಮಿಸಿ ಕೊಡುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ;

(ಆ) ಇದ್ದಲ್ಲಿ, ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

## ಸರ್ಕಾರಿ ಪದವಿ ಪೂರ್ವ ಕಾಲೇಜು ಕಟ್ಟಡ ಶಿಥಿಲಗೊಂಡಿರುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೧ (೬೦೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗದಲ್ಲಿನ ಸರ್ಕಾರಿ ಮಹಿಳಾ ಪದವಿ ಪೂರ್ವ ಕಾಲೇಜಿನ ಕಟ್ಟಡ ಶತಮಾನದಷ್ಟು ಹಳೆಯದಾಗಿದ್ದು, ಕಟ್ಟಡ ಶಿಥಿಲಗೊಂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಕಟ್ಟಡದ ಕಾಮಗಾರಿಗೆ ಅನುದಾನ ನೀಡಲಾಗಿದೆಯೇ ;

(ಇ) ನೀಡಿದ್ದರೆ, ಈವರೆಗೆ ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು–ಹಾಸನ–ಮಂಗಳೂರು–ಉಡುಪಿ–ಕಾರವಾರ ಮಾರ್ಗದಲ್ಲಿ ಹೊಸ ರೈಲು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೨ (೭೩೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ–ಬೆಂಗಳೂರು ರೈಲ್ವೆ ಹಳಿ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಹಾಸನ–ಬೆಂಗಳೂರು ರೈಲ್ವೆ ಹಳಿ ಕಾಮಗಾರಿ ಯಾವಾಗ ಮುಕ್ತಾಯವಾಗಲಿದೆ ; ರೈಲು ಸಂಚಾರ ಯಾವಾಗ ಪ್ರಾರಂಭಿಸಲಾಗುವುದು ;

(ಇ) ಕಾರವಾರ–ಕುಂದಾಪುರ–ಉಡುಪಿ–ಮಂಗಳೂರು–ಹಾಸನ ಮಾರ್ಗವಾಗಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಹೊಸ ರೈಲು ಓಡಿಸುವ ಕುರಿತು ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಕಾರವಾರ–ಕುಂದಾಪುರ–ಉಡುಪಿ–ಮಂಗಳೂರು–ಹಾಸನ ಮಾರ್ಗವಾಗಿ ಹೊಸದಾಗಿ ವೇಗದ ರೈಲು ಓಡಿಸುವುದರಿಂದ ರಾಜ್ಯ ರಾಜಧಾನಿ ಮತ್ತು ಬಂದರು, ನಗರ ಮಂಗಳೂರು ನಡುವಿನ ರೈಲು ಪ್ರಯಾಣದ ಅವಧಿ ಕಡಿಮೆಯಾಗಿ, ಪ್ರವಾಸೋದ್ಯಮ ಬೆಳೆಯುವುದರೊಂದಿಗೆ, ರಸ್ತೆ ಮೇಲಿನ ಒತ್ತಡ ಕಡಿಮೆಯಾಗುವುದರೊಂದಿಗೆ ರಸ್ತೆ ಅಪಘಾತಗಳ ಸಂಖ್ಯೆ ಇಳಿಮುಖವಾಗುವುದು ಪ್ರಯಾಣಿಕರಿಗೆ ಅನುಕೂಲವಾಗುವ ಬಗ್ಗೆ ಸರ್ಕಾರದ ಗಮನಕ್ಕಿದೆಯೇ ;

(ಉ) ಸದರಿ ರೈಲು ಮಾರ್ಗದ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ಶೀಘ್ರವಾಗಿ ರೈಲು ಸಂಚಾರ ಪ್ರಾರಂಭಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ಒದಗಿಸುವುದು)

## ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೬೩ (೬೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ, ಖಾಸಗಿ ಅನುದಾನಿತ ಹಿರಿಯ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿವೆ ;

(ಆ) ಈ ಎಲ್ಲಾ ಶಾಲೆಗಳಲ್ಲಿ ಶಿಕ್ಷಕರ ಸಂಖ್ಯೆ ಮಕ್ಕಳ ಅನುಪಾತಕ್ಕಿದೆಯೇ ;

(ಇ) ಇಲ್ಲದಿದ್ದಲ್ಲಿ, ಹಿರಿಯ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಳ್ಳಲು ಸರ್ಕಾರ ಯಾವ ನಿಯಮವನ್ನು ರೂಪಿಸಿದೆ ;

(ಈ) ರಾಜ್ಯದಲ್ಲಿ ಕೊರತೆಯಿರುವ ಶಿಕ್ಷಕರ ಸಂಖ್ಯೆಯನ್ನು ತುಂಬಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ;

(ಉ) ರಾಜ್ಯದ ಅನುದಾನಿತ ಹಾಗೂ ಸರ್ಕಾರಿ ಶಾಲಾ ಕಾಲೇಜುಗಳಿಗೆ ಎಷ್ಟು ವರ್ಷಗಳಿಗೊಮ್ಮೆ ಸರ್ಕಾರವು ಮೂಲಭೂತ ಸೌಕರ್ಯಗಳಾದ ಬೆಂಚು, ಕುರ್ಚಿ ಮತ್ತು ಬೋಧನಾ ಪೀಠೋಪಕರಣಗಳನ್ನು ಪೂರೈಸುತ್ತದೆ ;

(ಊ) ಪೂರೈಸಿದ್ದಲ್ಲಿ ೨೦೧೫–೧೬ನೇ ಸಾಲಿನಲ್ಲಿ ರಾಜ್ಯದ ಯಾವ ಸರ್ಕಾರಿ ಶಾಲಾ ಕಾಲೇಜುಗಳಿಗೆ ಬೋಧನಾ ಪೀಠೋಪಕರಣಗಳನ್ನು ಪೂರೈಸಿದೆ ;

(ಋ) ಸರ್ಕಾರವು ಸಕಾಲದಲ್ಲಿ ಬೋಧನಾ ಪೀಠೋಪಕರಣಗಳನ್ನು ಪೂರೈಸದೆ ಇದ್ದುದರಿಂದ, ಮಕ್ಕಳ ಶೈಕ್ಷಣಿಕ ಪ್ರಗತಿ ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಜಿಲ್ಲಾ ಪಂಚಾಯತ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ತಾತ್ಕಾಲಿಕ ನೌಕರರನ್ನು ಖಾಯಂಗೊಳಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೬೪ (೬೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳಲ್ಲಿ ಕೆಲಸ ನಿರ್ವಹಿಸುವ ನೌಕರರಿಗೆ ಇ.ಎಸ್.ಐ, ಪಿ.ಎಫ್ ಮತ್ತು ಪಿಂಚಣಿ ಸೌಲಭ್ಯ ನೀಡುವ ಕುರಿತು ತಾಲ್ಲೂಕುಗಳನ್ನು ಒಂದು ಘಟಕವಾಗಿ ಪರಿಗಣಿಸಲು ಸರ್ಕಾರ ಯೋಜನೆ ರೂಪಿಸುವುದೇ ;

(ಆ) ಅನೇಕ ವರ್ಷಗಳಿಂದ ದುಡಿಯುತ್ತಿರುವ ಗ್ರಾಮ ಪಂಚಾಯತ್ ನೌಕರರಿಗೆ ಯಾವುದೇ ಸೌಲಭ್ಯ ನೀಡದಿರುವುದರಿಂದ, ನಿಯಮಾವಳಿ ರೂಪಿಸಿ ಇ.ಎಸ್.ಐ, ಮತ್ತು ಪಿ.ಎಫ್ ಮತ್ತು ಪಿಂಚಣಿ ಸೌಲಭ್ಯದೊಂದಿಗೆ ಜೀವನ ಭದ್ರತೆ ಕಲ್ಪಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ಗುತ್ತಿಗೆ ನೌಕರರ ಸಂಖ್ಯೆಯೆಷ್ಟು ;

(ಈ) ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಲ್ಲಿ ಕರ್ತವ್ಯ ನಿರ್ವಹಿಸುವ ದಿನಗೂಲಿ ನೌಕರರ ಸಂಖ್ಯೆಯೆಷ್ಟು ; ಈ ಹಿಂದೆ ದಿನಗೂಲಿ ಗುತ್ತಿಗೆ ನೌಕರರಾಗಿ ಕೆಲಸ ನಿರ್ವಹಿಸುತ್ತಿದ್ದವರನ್ನು ಹೊರ ಗುತ್ತಿಗೆಯಾಗಿ ಬದಲಾಯಿಸಿದ್ದು ನಿಜವೇ ;

(ಉ) ಗ್ರಾಮ ಪಂಚಾಯತ್, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಲ್ಲಿ ಕರ್ತವ್ಯನಿರ್ವಹಿಸುವ ಗುತ್ತಿಗೆ, ಹೊರ ಗುತ್ತಿಗೆ ನೌಕರರನ್ನು ಖಾಯಂಗೊಳಿಸಿ, ಅಗತ್ಯ ಸೌಲಭ್ಯ ನೀಡುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಯಾವ ಕ್ರಮ ಕೈಗೊಳ್ಳಲಿದೆ ?

## ವಸತಿ ಯೋಜನೆ ಅನುಷ್ಠಾನದಲ್ಲಿನ ಗೊಂದಲ ಹಾಗೂ ಒತ್ತಡಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೬೫ (೬೩೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೫–೧೬ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿ ಹಂಚಲಾದ ಮನೆಗಳ ಸಂಖ್ಯೆ ಎಷ್ಟು ; (ವಿಧಾನಸಭಾವಾರು ಮಾಹಿತಿ ನೀಡುವುದು)

(ಆ) ವಿಶೇಷ ವರ್ಗದಡಿ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆಯೆಷ್ಟು; ವಿಧವೆಯರು ಸೇರಿದಂತೆ ವಿವಿಧ ವಿಶೇಷ ವರ್ಗಗಳಿಗೆ ಬೇಡಿಕೆಗೆ ಅಗತ್ಯದಂತೆ ಮನೆ ನೀಡದಿರುವುದಕ್ಕೆ ಕಾರಣಗಳೇನು ;

(ಇ) ವಿಧವೆಯರು ಸೇರಿದಂತೆ ವಿವಿಧ ವಿಶೇಷ ವರ್ಗಗಳಿಗೆ ಪ್ರಥಮ ಆದ್ಯತೆಯಲ್ಲಿ ಗ್ರಾಮ ಪಂಚಾಯತ್‌ಗಳ ಬೇಡಿಕೆಗೆ ತಕ್ಕಂತೆ ಹೆಚ್ಚುವರಿ ಮನೆ ಹಂಚಿಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಈ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಗ್ರಾಮ ಪಂಚಾಯತ್‌ಗಳಿಗೆ ಮೊದಲು ನಿಗಧಿ ಮಾಡಿದ ಹಾಗೂ ನಂತರ ಪರಿಷ್ಕೃತಗೊಳಿಸಿ ಹಂಚಿಕೆ ಮಾಡಿರುವ ಮನೆಗಳ ಸಂಖ್ಯೆಯೆಷ್ಟು; (ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

(ಉ) ರಾಜ್ಯದಲ್ಲಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಸತಿ ಯೋಜನೆಯ ಪ್ರಗತಿಯ ಉಸ್ತುವಾರಿಯನ್ನು ನೋಡಿಕೊಳ್ಳಲು ಎಷ್ಟು ಜನ ನೋಡಲ್ ಅಧಿಕಾರಿಯನ್ನು ನೇಮಕ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ಜಿಲ್ಲೆ ತಾಲ್ಲೂಕು ಗ್ರಾಮ ಪಂಚಾಯತ್‌ನಲ್ಲಿ ಪ್ರಸಕ್ತ ವಸತಿ ಯೋಜನೆ ಅನುಷ್ಠಾನದ ಜವಾಬ್ದಾರಿಯನ್ನು ಯಾವ ಯಾವ ಅಧಿಕಾರಿಗಳಿಗೆ ಹಂಚಿಕೆ ಮಾಡಲಾಗಿದೆ ;

(ಋ) ವಸತಿ ಯೋಜನೆಯ ಮನೆಗಳ ಪ್ರಗತಿಯನ್ನು ಜಿ.ಪಿ.ಎಸ್. ಮಾಡಲು ಇರುವ ತಂತ್ರಾಂಶಗಳಾವುವು ; ಒಂದೇ ಮನೆಯನ್ನು ಪದೇ ಪದೇ ಜಿ.ಪಿ.ಎಸ್ ಮಾಡಲು ಹಾಗೂ ತಂತ್ರಾಂಶಗಳಲ್ಲಿ ತೊಂದರೆಗಳಿರುವುದು, ಅಭಿವೃದ್ಧಿ ಅಧಿಕಾರಿಗಳಿಗೆ ಪದೇ ಪದೇ ಶಿಸ್ತು ಕ್ರಮಕ್ಕೆ ನೋಟೀಸ್ ನೀಡುತ್ತಿರುವುದು ಸೇರಿದಂತೆ ಗೊಂದಲ ಸೃಷ್ಠಿಸಿರುವುದು ನಿಜವೇ ;

(ಎ) ಗ್ರಾಮ ಪಂಚಾಯತ್‌ಗಳಲ್ಲಿನ ಅನೇಕ ಯೋಜನೆಗಳ ಅನುಷ್ಠಾನದ ಜವಾಬ್ದಾರಿ, ಅತಿಯಾದ ಕಾರ್ಯ ಒತ್ತಡ ಹಾಗೂ ಸಿಬ್ಬಂದಿ ಕೊರತೆ ಸೇರಿದಂತೆ, ವಾಸ್ತವಾಂಶ ಪರಿಗಣಿಸಿ ಒತ್ತಡ ಹೇರದೆ ಸುಗಮವಾಗಿ ವಸತಿ ಯೋಜನೆ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ೧೯೯೫ರ ನಂತರ ಪ್ರಾರಂಭವಾದ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳ ವೇತನಾನುದಾನದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೯೬೬ (೬೫೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾವ ವರ್ಷದವರೆಗಿನ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ ;

(ಆ) ೧೯೯೫ರ ನಂತರ ಪ್ರಾರಂಭವಾದ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರ ಆಲೋಚಿಸಿದೆಯೇ ;

(ಇ) ಆಲೋಚಿಸಿದ್ದಲ್ಲಿ, ಯಾವ ವರ್ಷದವರೆಗಿನ ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು ; ಮತ್ತು ವೇತನಾನುದಾನಕ್ಕೆ ಒಳಪಡಿಸುವುದು ಯಾವಾಗ ;

(ಈ) ೨೦೦೦ನೇ ಇಸವಿವರೆಗಿನ ಎಷ್ಟು ಶಾಲಾ–ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು ; ಮತ್ತು ಅದಕ್ಕೆ ತಗಲುವ ವೆಚ್ಚ ಎಷ್ಟು ?

## ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೯೬೭ (೬೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಿಂದ ಬೇರ್ಪಡಿಸಲಾದ ಪದವಿ ಪೂರ್ವ ಕಾಲೇಜುಗಳು ಎಷ್ಟು;

(ಆ) ಈ ಕಾಲೇಜುಗಳಲ್ಲಿ ಖಾಯಂ ಹುದ್ದೆಗಳನ್ನು ಮಂಜೂರು ಮಾಡಲಾಗಿದೆಯೇ ;

(ಇ) ಖಾಯಂ ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಇದ್ದಾರೆಯೇ ; ಇದ್ದಲ್ಲಿ, ಕಾಲೇಜುವಾರು ವಿವರ ನೀಡುವುದು ;

(ಈ) ಕನಿಷ್ಠ ಹತ್ತು ವರ್ಷ ತಾತ್ಕಾಲಿಕವಾಗಿ ಸೇವೆ ಪೂರೈಸುತ್ತಿರುವ ಉಪನ್ಯಾಸಕರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಏನು ಕ್ರಮ ಕೈಗೊಳ್ಳಲಾಗಿದೆ ?

## ಮದ್ದೂರು ತಾಲ್ಲೂಕು ಕೊಪ್ಪ ಗ್ರಾಮದ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೯೬೮ (೬೫೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮದ್ದೂರು ತಾಲ್ಲೂಕು ಕೊಪ್ಪ ಗ್ರಾಮದಲ್ಲಿ ಮಂಜೂರಾಗಿರುವ ಬಸ್ ನಿಲ್ದಾಣದ ಅಂದಾಜು ಮೊತ್ತ ಎಷ್ಟು;

(ಆ) ಈ ಕಾಮಗಾರಿ ಮಂಜೂರಾದ ದಿನಾಂಕ ಯಾವುದು ; ಗುತ್ತಿಗೆದಾರರು ಯಾರು ; ಅವಧಿ ಎಷ್ಟು;

(ಇ) ಸದರಿ ಕಾಮಗಾರಿಗೆ ಹೆಚ್ಚುವರಿ ಅನುದಾನದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಸದರಿ ಕಾಮಗಾರಿಯು ಯಾವಾಗ ಪೂರ್ಣಗೊಳಿಸಲಾಗುತ್ತದೆ ?

## ಶಿಕ್ಷಕರ ಬಡ್ತಿಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೯೬೯ (೭೫೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಶಾಲಾ ಶಿಕ್ಷಕರನ್ನು ಪ್ರೌಢ ಶಾಲೆಗೆ ಹಾಗೂ ಪ್ರೌಢ ಶಾಲಾ ಶಿಕ್ಷಕರನ್ನು ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡಲು ಅನುಸರಿಸುತ್ತಿರುವ ಮಾನದಂಡವೇನು ; (ವಿವರ ನೀಡುವುದು)

(ಆ) ಇತ್ತೀಚೆಗೆ ಮಾನದಂಡಗಳನ್ನು ಬದಲಾವಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಬಡ್ತಿ ಪಡೆದ ಶಿಕ್ಷಕರಿಗೆ ಕಾಲಮಿತಿ ವೇತನ ಬಡ್ತಿ ನೀಡುವಲ್ಲಿ ಆಗುತ್ತಿರುವ ಗೊಂದಲದಿಂದ ಅವರಿಗೆ ವೇತನದಲ್ಲಿ ತಾರತಮ್ಯ ಉಂಟಾಗಿದೆಯೇ ;

(ಈ) ತಾರತಮ್ಯ ಉಂಟಾಗಿದ್ದಲ್ಲಿ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೯೭೦ (೬೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ ಒಟ್ಟು ಪ್ರಾಂಶುಪಾಲರ ಹುದ್ದೆಗಳೆಷ್ಟು;

(ಆ) ಇದರಲ್ಲಿ ಭರ್ತಿಯಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು;

(ಇ) ಎಷ್ಟು ಅವಧಿಯಿಂದ ಈ ಹುದ್ದೆಗಳು ಖಾಲಿ ಇವೆ;

(ಈ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಈ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಅಭ್ಯರ್ಥಿಗಳಿಗೆ ಬಿ.ಎಡ್ ಪದವಿಯನ್ನು ಪೂರೈಸಲು ಅವಕಾಶ ಕಲ್ಪಿಸುವ ಕುರಿತು

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೯೭೧ (೬೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ರಲ್ಲಿ ನೇಮಕಗೊಂಡ ಪದವಿ ಪೂರ್ವ ಉಪನ್ಯಾಸಕರಲ್ಲಿ ಎಷ್ಟು ಮಂದಿ ಬಿ.ಎಡ್. ಪದವಿಯನ್ನು ಪೂರೈಸಿರುವುದಿಲ್ಲ ;

(ಆ) ಸದರಿ ಅಭ್ಯರ್ಥಿಗಳಿಗೆ ಬಿ.ಎಡ್ ಪದವಿಯನ್ನು ಪೂರೈಸಲು ಸರ್ಕಾರದಿಂದ ಯಾವ ಅವಕಾಶವನ್ನು ಕಲ್ಪಿಸಿಕೊಡಲಾಗಿದೆ ;

(ಇ) ಸಂಬಳ ಸಹಿತವಾಗಿ ಬಿ.ಎಡ್ ಪದವಿ ವ್ಯಾಸಂಗಕ್ಕೆ ರಜೆ ನೀಡಿದಲ್ಲಿ ಉಂಟಾಗುವ ಆರ್ಥಿಕ ಹೊರೆ ಎಷ್ಟು ? (ಮಾಹಿತಿ ಒದಗಿಸುವುದು)

## ಪ್ರೊ: ವೈದ್ಯನಾಥನ್ ವರದಿಯ ಅನುಷ್ಠಾನ ಕುರಿತಂತೆ ಪದವಿ ಪೂರ್ವ ಇಲಾಖೆಯಿಂದ ದೈಹಿಕ ಶಿಕ್ಷಕರನ್ನು ನೇಮಕ ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೯೭೨ (೬೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಸರ್ಕಾರಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ನಿರ್ದೇಶಕರ ಹುದ್ದೆಗಳನ್ನು ಸೃಷ್ಟಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಆ ಪೈಕಿ ಎಷ್ಟು ಹುದ್ದೆಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಲಾಗಿದೆ ; (ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬುವಲ್ಲಿ ಇರುವ ವಿಳಂಬ ನೀತಿಗೆ ಕಾರಣವೇನು ;

(ಈ) ಪ್ರೊ: ವೈದ್ಯನಾಥನ್ ವರದಿಯನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರ ಈಗಾಗಲೇ ನಿರ್ಣಯಿಸಿರುವುದರಿಂದ ವಿಶೇಷವಾಗಿ ಪದವಿ

ಪೂರ್ವ ಇಲಾಖೆಯಿಂದ ದೈಹಿಕ ಶಿಕ್ಷಕರನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಮಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಹಾಸ್ಟೆಲ್ ಹಾಗೂ ಶೌಚಾಲಯ ಸೇರಿದಂತೆ ಕಟ್ಟಡಗಳು ದುಸ್ಥಿತಿಯಲ್ಲಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೯೭೩ (೬೬೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಗಳೂರು ಮಹಾನಗರ ವ್ಯಾಪ್ತಿಯಲ್ಲಿರುವ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್ ಹಾಸ್ಟೆಲ್ ಹಾಗೂ ಶೌಚಾಲಯ ಸೇರಿದಂತೆ ಕಟ್ಟಡಗಳು ವಾಸಿಸಲು ಅತ್ಯಂತ ಅನರ್ಹವಾದ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಲ್ಲಿನ ಕಟ್ಟಡಗಳ ಕೆಲವು ಭಾಗಗಳಲ್ಲಿ ಕೆಲವು ತರಗತಿಗಳು ನಡೆಯುತ್ತಿರುವುದು ವಿದ್ಯಾರ್ಥಿಗಳ ರಕ್ಷಣೆ ದೃಷ್ಟಿಯಿಂದ ಅತ್ಯಂತ ಅಪಾಯಕಾರಿ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಹಿಳಾ ವಿದ್ಯಾರ್ಥಿಗಳು ವಾಸಿಸುವ ವಿದ್ಯಾರ್ಥಿ ನಿಲಯದಲ್ಲಿರುವ ಸಿಬ್ಬಂದಿಗೆ ಮೂಲಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಕುರಿತಾಗಿ ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಶಿಕ್ಷಕರಿಗೆ ತಿಂಗಳ ಸಂಬಳ ಬಟವಾಡೆ ತಡವಾಗುತ್ತಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೯೭೪ (೬೬೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ ಶಿಕ್ಷಕರಿಗೆ (ಸರ್ಕಾರಿ ಹಾಗೂ ಅನುದಾನಿತ) ಪ್ರತಿ ತಿಂಗಳ ಸಂಬಳ ಬಟವಾಡೆ ತಡವಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಇದರ ಹೊರತಾಗಿಯೂ ಸಂಬಳ ಬಟವಾಡೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ವಿಳಂಬವನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಮೂಲಕ ಶಿಕ್ಷಕರಿಗೆ ಸಕಾಲದಲ್ಲಿ ವೇತನ ಬಿಡುಗಡೆಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೭೫ (೬೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರಗಾಲ ತಾಂಡವವಾಡುತ್ತಿದ್ದು, ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ತೊಂದರೆ ತೀವ್ರವಾಗಿ, ಜನ ನೀರಿಗಾಗಿ ಪಡಬಾರದ ಕಷ್ಟ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಈ) ಈಗಾಗಲೇ ರಾಜ್ಯದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಎಲ್ಲೆಲ್ಲಿ ಸ್ಥಾಪಿಸಲಾಗಿದೆ ; ಆ ಪೈಕಿ ಎಷ್ಟು ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆ ; ಇನ್ನೂ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸರ್ಕಾರವು ಚಿಂತಿಸುತ್ತಿದೆ ಇದಕ್ಕೆ ಮೀಸಲಿರಿಸಲಿಟ್ಟಿರುವ ಅನುದಾನ ಎಷ್ಟು;

(ಉ) ಬರಗಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಲು ಸರ್ಕಾರವು ಬಿಡುಗಡೆ ಮಾಡಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಎಂಟನೇ ತರಗತಿ ಮಕ್ಕಳಿಗೆ ವಿತರಿಸಿರುವ ಸೈಕಲ್‌ಗಳು ಕಳಪೆಯಾಗಿರುವ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳಿಯ ಸಂಸ್ಥೆಗಳ ಕ್ಷೇತ್ರ):–**

೯೭೬ (೬೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಂಟನೇ ತರಗತಿ ಮಕ್ಕಳಿಗೆ ಉಚಿತವಾಗಿ ನೀಡುತ್ತಿರುವ ಸೈಕಲ್‌ಗಳು ತೀರ ಕಳಪೆ ಮಟ್ಟದಿಂದ ಕೂಡಿರುವುದರಿಂದ ಅವು ಶಾಲಾ ಮಕ್ಕಳ ಉಪಯೋಗಕ್ಕೆ ಬಾರದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳಪೆ ಸೈಕಲ್ ವಿತರಿಸಿದ ಗುತ್ತಿಗೆದಾರ / ಮಾರಾಟಗಾರರ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ ; ವಿತರಿಸಿದ ಕಳಪೆ ಸೈಕಲ್‌ಗಳ ನಿರ್ವಹಣೆಗೆ ಸರ್ಕಾರ ಏನು ಕ್ರಮ ಕೈಗೊಳ್ಳುವುದು ;

(ಇ) ೨೦೧೪ ರಿಂದ ೨೦೧೭ನೇ ಸಾಲಿಗೆ ಸೈಕಲ್ ವಿತರಿಸಲು ಸರ್ಕಾರ ಎಷ್ಟು ಅನುದಾನ ಬಿಡುಗಡೆ ಮಾಡಿದೆ ; ಗುತ್ತಿಗೆ ನೀಡಲು ಇರುವ ಮಾನದಂಡಗಳೇನು ; ಯಾವ ಯಾವ ಕಂಪನಿಗಳಿಗೆ ಗುತ್ತಿಗೆ ನೀಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಕೊಕಟನೂರು ವ್ಯಾಪ್ತಿಗೆ ಸೈಕಲ್ ವಿತರಿಸಿದ ಗುತ್ತಿಗೆದಾರರು ಯಾರು ; ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಸೈಕಲ್‌ಗಳನ್ನು ವಿತರಿಸಲಾಗಿದೆ ; ಇದಕ್ಕೆ ಸರ್ಕಾರ ಭರಿಸಿದ ಮೊತ್ತವೆಷ್ಟು; ಇಲ್ಲಿ ವಿತರಿಸಿದ ಸೈಕಲ್‌ಗಳು ತೀರ ಕಳಪೆ ಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಯಾರು ಹೊಣೆ ; ಇವರ ವಿರುದ್ಧ ಏನು ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಅಕ್ರಮ ಮರಳು ದಂಧೆಯಿಂದ ಮರಳು ದುಬಾರಿಯಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೭೭ (೬೮೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಹೊಸ ಮಾರ್ಗಸೂಚಿ ಪ್ರಕಟಿಸಿದ್ದರೂ, ಅಕ್ರಮ ಮರಳು ದಂಧೆ ಎಗ್ಗಿಲ್ಲದೆ ಸಾಗಿರುವುದು, ಜನಸಾಮಾನ್ಯರಿಗೆ ಮರಳು ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರದ ಹೊಸ ಮಾರ್ಗಸೂಚಿಗಳೇನು ; ಜನಸಾಮಾನ್ಯರು ಮನೆ ಕಟ್ಟಿಕೊಳ್ಳಲು ಎಷ್ಟು ಪ್ರಮಾಣದ ಮರಳನ್ನು ಶೇಖರಿಸಿಕೊಳ್ಳಬಹುದು ಹಾಗೂ ಹೇಗೆ ಸಾಗಿಸಬಹುದು ; ಅದಕ್ಕಾಗಿ ಅವರಿಗೆ ರೂಪಿಸಿರುವ ನಿಯಮಗಳೇನು ;

(ಇ) ಮರಳು ಮಾಫಿಯಾ ರಾತ್ರಿ ವೇಳೆಯಲ್ಲಿ ತುಂಬಾ ಚಟುವಟಿಕೆ ನಡೆಸುತ್ತಿದ್ದು, ತಡೆಯಲು ಬಂದ ಸರ್ಕಾರಿ ಅಧಿಕಾರಿಗಳ ಮೇಲೆ ಹಲ್ಲೆ ಪ್ರಕರಣಗಳು ಹೆಚ್ಚಾಗುತ್ತಿರುವುದನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕಠಿಣ ಕ್ರಮಗಳೇನು ;

(ಈ) ಇಂತಹ ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆಯಾಗಿದೆ ; ಬಾಕಿ ಇರುವ ಪ್ರಕರಣಗಳೆಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಮಹಿಳಾ ಉದ್ಯಮಿಗಳನ್ನು ಮುಖ್ಯವಾಹಿನಿಗೆ ತರುವಲ್ಲಿ ವಿಫಲವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೭೮ (೬೮೨) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉದ್ಯೋಗ ಸೃಷ್ಟಿಸುವ ನಿಟ್ಟಿನಲ್ಲಿ ಮಹಿಳಾ ಉದ್ಯಮಿಗಳನ್ನು ಮುಖ್ಯವಾಹಿನಿಗೆ ತರುವಲ್ಲಿ ಸರ್ಕಾರವು ಹಿಂದೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಹಿಳಾ ಉದ್ಯಮಿಗಳನ್ನು ಉತ್ತೇಜಿಸುವ ಹಿನ್ನೆಲೆಯಲ್ಲಿ ಸರ್ಕಾರವು ವಿಶೇಷವಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ ; ಸದರಿ ಯೋಜನೆಗಳ ಮಹಿಳಾ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಯಾವ ಯಾವ ವಿಧದ ಯೋಜನೆಗಳಲ್ಲಿ ಮಹಿಳಾ ಉದ್ಯಮಿಗಳು ಸಕ್ರಿಯವಾಗಿ ಭಾಗವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಈ) ಸಣ್ಣ ಕೈಗಾರಿಕೆಗಳಲ್ಲಿ ಮಹಿಳೆಯರು ತೊಡಗಿಸಿಕೊಳ್ಳಲು ಇರಬೇಕಾದ ಅರ್ಹತೆಗಳೇನು ; ಅವರಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳೇನು ; ಹಾಗೂ ಒದಗಿಸಿರುವ ಸಹಕಾರ ಹಾಗೂ ಸವಲತ್ತುಗಳೇನು ? (ವಿವರ ನೀಡುವುದು)

## ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೭೯ (೬೮೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಗ್ರಾಮ ಪಂಚಾಯತ್‌ಗಳಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಕಳೆದ ೩ ವರ್ಷಗಳಿಂದ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಪ್ರತ್ಯೇಕ ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯ ಗ್ರಾಮ ಪಂಚಾಯತ್‌ಗಳಿಗೆ ಕುಡಿಯುವ ನೀರಿನ ನಿರ್ವಹಣೆಗೆ ಕಳೆದ ೩ ವರ್ಷದಲ್ಲಿ ಗ್ರಾಮ ಪಂಚಾಯಿತಿವಾರು ಬಿಡುಗಡೆ ಮಾಡಿರುವ ಅನುದಾನ ಎಷ್ಟು? (ಗ್ರಾಮ ಪಂಚಾಯತ್‌ಗಳವಾರು, ವರ್ಷವಾರು ವಿವರ ನೀಡುವುದು)

## ತುಮಕೂರು ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ತರಗತಿಯಲ್ಲಿನ ಹಾಜರಾತಿ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೮೦ (೬೯೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ೧ನೇ ತರಗತಿಗೆ ಹತ್ತು ವಿದ್ಯಾರ್ಥಿಗಳಿಗಿಂತ ಕಡಿಮೆ ದಾಖಲಾತಿಯಾಗಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇಂತಹ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಕೊರತೆಯನ್ನು ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; (ಶಾಲೆಗಳ ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಅದನ್ನು ಸರಿಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು ?

## ಮರಳಿಗೆ ಕೃತಕ ಅಭಾವ ಸೃಷ್ಟಿಸಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೮೧ (೬೮೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಮರಳು ಸಿಗದೆ ಸರ್ಕಾರಿ ಕಾಮಗಾರಿಗಳು ವಿಳಂಬವಾಗುತ್ತಿರುವುದನ್ನು ಖಂಡಿಸಿ ಜಿಲ್ಲೆಯಾದ್ಯಂತ ಪ್ರತಿಭಟನೆಗಳು ನಡೆಯುತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿ ಮರಳಿನ ಸಂಗ್ರಹವಿದ್ದರೂ ಕೃತಕ ಅಭಾವ ಸೃಷ್ಟಿಸಿರುವುದಕ್ಕೆ ಕಾರಣಗಳೇನು ;

(ಇ) ಹೆಚ್ಚಿನ ಹಣ ಪಡೆದು ಹೊರ ಜಿಲ್ಲೆಗಳಿಗೆ ಮರಳು ಮಾರಾಟ ಮಾಡುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸೂಕ್ತ ಮರಳು ನೀತಿಯನ್ನು ಜಾರಿಗೆ ತಂದು ಸಮರ್ಪಕ ರೀತಿಯಲ್ಲಿ ಮರಳು ವಿತರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ತುಮಕೂರು ಜಿಲ್ಲೆಯ ಗ್ರಾಮಗಳ ವಿವರ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೯೮೨ (೬೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳಿವೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತುರುವೇಕೆರೆ ಕ್ಷೇತ್ರದಲ್ಲಿ ಎಷ್ಟು ಹಳ್ಳಿಗಳಿವೆ ? (ಗ್ರಾಮಗಳ ಹೆಸರು ಸಮೇತ ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ವಸತಿರಹಿತ ಜನರ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೯೮೩ (೬೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ವಸತಿರಹಿತ ಜನರ ಸಂಖ್ಯೆ ಎಷ್ಟು; ಮತ್ತು ಅವರಿಗೆ ವಸತಿ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ವಿವಿಧ ವಸತಿ ಯೋಜನೆಗಳಡಿಯಲ್ಲಿ ಈ ಜಿಲ್ಲೆಯ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜೀವ್ ಗಾಂಧಿ ವಸತಿ ಅಭಿವೃದ್ಧಿ ನಿಗಮದಿಂದ ಈ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಿಂದ ಮಂಜೂರು ಮಾಡಿರುವ ಮನೆಗಳೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾದ ಗ್ರಾಮ ಪಂಚಾಯತಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೯೮೪ (೬೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಲಾದ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; ಈ ಗ್ರಾಮ ಪಂಚಾಯತಿಗಳಿಗೆ ಸುವ್ಯವಸ್ಥಿತವಾದ ಕಟ್ಟಡಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಎಷ್ಟು ಅವಧಿಯೊಳಗಾಗಿ ಸುವ್ಯವಸ್ಥಿತ ಕಟ್ಟಡ ನಿರ್ಮಾಣ ಮಾಡಲಾಗುವುದು ? (ಮಾಹಿತಿ ನೀಡುವುದು)

## ಗ್ರಾಮ ಪಂಚಾಯಿತಿ ಖಾಯಂ ಹುದ್ದೆಗಳು ಮತ್ತು ವೇತನ, ಯೋಜನೆ, ಅನುಷ್ಠಾನದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೮೫ (೭೦೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾದ ಖಾಯಂ ಹುದ್ದೆಗಳಾವುವು ; ಸದರಿ ಹುದ್ದೆಗಳಿಗೆ ನೀಡುತ್ತಿರುವ ವೇತನ ಮತ್ತು ಇತರೆ ಸೌಲಭ್ಯಗಳೇನು ;

(ಆ) ಗ್ರಾಮ ಪಂಚಾಯತ್‌ನ ಯೋಜನೆ ಕಾರ್ಯಕ್ರಮಗಳ ಅನುಷ್ಠಾನದ ಜವಾಬ್ದಾರಿಯನ್ನು ಕಡಿಮೆ ಸಿಬ್ಬಂದಿಯಿಂದ ಸಮರ್ಪಕವಾಗಿ ನಿರ್ವಹಿಸಲಾಗದ ಒತ್ತಡ ಸೃಷ್ಠಿಯಾಗಿರುವುದು ನಿಜವೇ ;

(ಇ) ಇಲಾಖೆಯ ಕಾರ್ಯಕ್ರಮ ಸಮರ್ಪಕವಾಗಿ ಅನುಷ್ಠಾನಗೊಳಿಸಲು, ಗ್ರಾಮ ಪಂಚಾಯತ್‌ಗಳ ಸಿಬ್ಬಂದಿ ಸಂಖ್ಯೆಗಳನ್ನು ಹೆಚ್ಚು ಮಾಡಲು, ಪ್ರತಿ ಗ್ರಾಮ ಪಂಚಾಯತ್‌ಗಳಿಗೆ ಲೆಕ್ಕ ಸಹಾಯಕರು ನೀಡಲು, ತಾಲ್ಲೂಕು ಮಟ್ಟದಲ್ಲಿ ವಿವಿಧ ಯೋಜನೆಗಳಿಗೆ ಹೆಚ್ಚುವರಿ ಸಹಾಯಕ ನಿರ್ದೇಶಕರ ಹುದ್ದೆ ಗ್ರಾಮೀಣಾಭಿವೃದ್ಧಿ ಅಧಿಕಾರಿ ಹುದ್ದೆ ಸೃಜನೆಯ ಅವಶ್ಯಕತೆ ಸರ್ಕಾರ ಗಮನಿಸಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಈ) ಅನೇಕ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯನ್ನು ನಿರ್ವಹಿಸುವ ಗ್ರಾಮ ಪಂಚಾಯತ್‌ಗಳಲ್ಲಿನ ಪಿ.ಡಿ.ಓ. ಹುದ್ದೆಯನ್ನು

ಗ್ರೂಪ್ ಬಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಕಳೆದ ಒಂದೂವರೆ ವರ್ಷದಿಂದ ಬಾಕಿ ಇರಲು ಕಾರಣವೇನು ; ಸರ್ಕಾರ ಈ ಬಗ್ಗೆ ಯಾವ ರೀತಿ ಕ್ರಮ ಕೈಗೊಳ್ಳಲಿದೆ ;

(ಉ) ಹೆಚ್ಚುವರಿ ಹುದ್ದೆ ಸೃಜನೆ, ಖಾಲಿ ಹುದ್ದೆಗಳ ಭರ್ತಿ, ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್‌ನಲ್ಲಿ ಅನ್ಯ ಇಲಾಖೆ ಅಧಿಕಾರಿಗಳ ಪ್ರಭಾರ ನಿಲ್ಲಿಸಿ ನೇರ ನೇಮಕಾತಿಯಲ್ಲಿ ಭರ್ತಿ ಮಾಡುವುದು, ಸೇರಿದಂತೆ ಇಲಾಖೆಯಲ್ಲಿನ ಕಾರ್ಯಕ್ರಮಗಳ ಅನುಷ್ಠಾನವನ್ನು ವ್ಯವಸ್ಥಿತವಾಗಿ ನಿರ್ವಹಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸರ್ಕಾರಿ ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೮೬ (೭೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಸಂಖ್ಯೆ ಎಷ್ಟು ;

(ಆ) ೧ ರಿಂದ ೧೦ನೇ ತರಗತಿಯವರೆಗೆ ಪ್ರತಿ ತರಗತಿಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಗಂಡು ಮತ್ತು ಹೆಣ್ಣು ಹಾಗೂ ಜಿಲ್ಲಾವಾರು ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ವಿವರ ನೀಡುವುದು)

(ಇ) ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಒಟ್ಟು ಸಂಖ್ಯೆ ಎಷ್ಟು ;

(ಈ) ವಿದ್ಯಾರ್ಥಿಗಳ ಸಂಖ್ಯೆಗೆ ತಕ್ಕಂತೆ ಅಗತ್ಯ ಸಂಖ್ಯೆಯ ಶಿಕ್ಷಕರು ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣ ಗುಣಮಟ್ಟ ಹೆಚ್ಚಿಸಲು ಹಾಗೂ ಅಗತ್ಯ ಸಂಖ್ಯೆಯ ಶಿಕ್ಷಕರ ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವಿವಿಧ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೯೮೭ (೨೦೫) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷದಲ್ಲಿ ವಸತಿ ಇಲಾಖೆಯಿಂದ ವಿವಿಧ ವಸತಿ ಯೋಜನೆಯುಡಿಯುಲ್ಲಿ ಮಂಜೂರಾದ ಮನೆಗಳೆಷ್ಟು ; ನಿರ್ಮಾಣವಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ವಸತಿ ಯೋಜನೆಗಳ ಮನೆ ನಿರ್ಮಾಣಕ್ಕೆ ಭೂ ಪರಿವರ್ತನೆ ಕಡ್ಡಾಯವೇ ; ಭೂ ಪರಿವರ್ತನೆಯಿಂದ ವಿನಾಯಿತಿ ನೀಡಿ ಆದೇಶ ಹೊರಡಿಸಲಾಗಿದೆಯೇ ; (ಪ್ರತಿ ಒದಗಿಸುವುದು)

(ಇ) ವಸತಿ ಯೋಜನೆಯ ಮನೆ ನಿರ್ಮಾಣಕ್ಕೆ ಅನುಮತಿ ನೀಡುವಾಗ ಗ್ರಾಮ ಪಂಚಾಯತ್‌ಗಳು ಭೂ ಪರಿವರ್ತನೆಯಿಂದ ವಿನಾಯಿತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಸರಕಾರಿ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆಯ ಬಗ್ಗೆ

**ಶ್ರೀ ಎಂ.ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೮ (೭೦೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರಕಾರಿ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆಗೆ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯ ಸರಕಾರಿ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉತ್ತಮ ಗುಣಮಟ್ಟದ ಸುಸಜ್ಜಿತ ಪ್ರಥಮ ಚಿಕಿತ್ಸೆ ಪೆಟ್ಟಿಗೆಗಳು ಲಭ್ಯವಿಲ್ಲದೆ ಇರುವುದನ್ನು ಗಮನಿಸಲಾಗಿದೆಯೇ;

(ಇ) ಕೆಲವು ಖಾಸಗಿ ಸಂಸ್ಥೆಯ ಬಸ್ಸುಗಳಲ್ಲಿ ಈಗಾಗಲೇ ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಸಿಸಿ ಕ್ಯಾಮರಾ ಅಳವಡಿಸಲಾಗಿದ್ದು, ಸರ್ಕಾರಿ ಬಸ್ಸುಗಳಲ್ಲಿಯೂ ಅಳವಡಿಸಲು ಇರುವ ತೊಡಕುಗಳೇನು;

(ಈ) ರಾಜ್ಯ ಸರಕಾರಿ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಸಿಸಿ ಕ್ಯಾಮರಾ ಅಳವಡಿಸುವುದು, ಉತ್ತಮ ಗುಣಮಟ್ಟದ ಸುಸಜ್ಜಿತ ಪ್ರಥಮ ಚಿಕಿತ್ಸೆ ಪೆಟ್ಟಿಗೆ ಮತ್ತು ಬಸ್ಸುಗಳಲ್ಲಿ ಸ್ವಚ್ಚತೆ ಕಾಪಾಡಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ? (ವಿವರ ಒದಗಿಸುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಬಗ್ಗೆ

**ಶ್ರೀ ಎಂ.ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೯ (೭೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ ಎಷ್ಟು; ವಿಷಯವಾರು ಹಾಗೂ ಜಿಲ್ಲಾವಾರು ಹುದ್ದೆಗಳ ವಿವರಗಳನ್ನು ನೀಡುವುದು;

(ಆ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಾಗ ನೇರ ನೇಮಕಾತಿ ಹಾಗೂ ಪ್ರೌಢ ಶಾಲಾ ಶಿಕ್ಷಕ ವೃಂದದಿಂದ ನೀಡಲಾಗುವ ಬಡ್ತಿಗಳ ಅನುಪಾತವೆಷ್ಟು;

(ಈ) ಪ್ರೌಢ ಶಾಲಾ ಶಿಕ್ಷಕ ವೃಂದದಿಂದ ನೀಡಲಾಗುವ ಬಡ್ತಿಯ ಸಂದರ್ಭದಲ್ಲಿ ಅರ್ಹತೆಯಾಗಿ ಸ್ನಾತಕೋತ್ತರ ಪದವಿಯ ಅಂಕಗಳಲ್ಲಿ ಕನಿಷ್ಠ ಅಂಕಗಳನ್ನು ನಿಗಧಿಪಡಿಸಲಾಗಿದೆಯೇ;

(ಉ) ಪ್ರೌಢಶಾಲಾ ಶಿಕ್ಷಕ ವೃಂದದಿಂದ ನೀಡಲಾಗುವ ಬಡ್ತಿಯ ಸಂದರ್ಭದಲ್ಲಿ ಅರ್ಹತಾ ಪರೀಕ್ಷೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಉದ್ದೇಶಿಸಲಾಗಿದೆಯೇ;

(ಊ) ಪ್ರೌಢ ಶಾಲಾ ಶಿಕ್ಷಕ ವೃಂದದಲ್ಲಿ ಪದವಿ ಪೂರ್ವ ಉಪನ್ಯಾಸಕರ ಹುದ್ದೆಯ ಬಡ್ತಿಗಾಗಿ ಜ್ಯೇಷ್ಠತಾ ಪಟ್ಟಿ ಮಾಡಲಾಗಿದೆಯೇ? (ಮಾಡಿದ್ದರೆ ವಿಷಯವಾರು ಹಾಗೂ ಜಿಲ್ಲಾವಾರು ಪಟ್ಟಿ ನೀಡುವುದು)

## ಪ್ರಾಥಮಿಕ ಶಾಲೆಯ ದಾಖಲಾತಿಗೆ ಮಕ್ಕಳ ವಯೋಮಿತಿಯ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೯೦ (೭೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಾಥಮಿಕ ಶಾಲೆಗೆ (೧ನೇ ತರಗತಿಗೆ) ದಾಖಲಾಗಲು ಮಕ್ಕಳಿಗೆ ನಿಗಧಿಪಡಿಸಿರುವ ವಯೋಮಿತಿ ಎಷ್ಟು; (ಕನಿಷ್ಟ ಮತ್ತು ಗರಿಷ್ಟ)

(ಆ) ಈ ವಯೋಮಿತಿಯನ್ನು ಯಾವ ಸಂದರ್ಭದಲ್ಲಿ ಸಡಿಲಿಸಬಹುದು;

(ಇ) ಸದರಿ ವಯೋಮಿತಿಯನ್ನು ಯಾವ ಆಧಾರದ ಮೇಲೆ ಮತ್ತು ಯಾವ ವರ್ಷ ನಿಗಧಿಪಡಿಸಲಾಗಿದೆ;

(ಈ) ಸದರಿ ವಯೋಮಿತಿಯನ್ನು ಬದಲಾವಣೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ?

## ಸಹಾಯಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಪದೋನ್ನತಿ ಬಗ್ಗೆ

**ಶ್ರೀ ಕೆ.ವಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೯೯೧ (೭೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಹಾಯಕ ನಿರ್ದೇಶಕರು, ಗ್ರಾಮೀಣ ಉದ್ಯೋಗ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ್ ಹುದ್ದೆಗೆ ಪದೋನ್ನತಿ ಹೊಂದಲು ಹೊಂದಿರಬೇಕಾದ ಶೈಕ್ಷಣಿಕ ಅರ್ಹತೆಯೇನು;

(ಆ) ಸೂಕ್ತ ಶೈಕ್ಷಣಿಕ ಅರ್ಹತೆಯಿಲ್ಲದಿದ್ದರೂ ಸದರಿ ಹುದ್ದೆಗಳಿಗೆ ಪದೋನ್ನತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಇಲ್ಲಿಯವರೆಗೂ ಸದರಿ ಹುದ್ದೆಗಳಿಗೆ ಪದೋನ್ನತಿ ಪಡೆದ ಅಭ್ಯರ್ಥಿಗಳ ಶೈಕ್ಷಣಿಕ ಅರ್ಹತೆಯೇನು? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದ ವಸತಿ ರಹಿತ/ನಿವೇಶನ ರಹಿತ ಕುಟುಂಬಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೯೧೨ (೬೦೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ವೆ ಕಾರ್ಯ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ವಸತಿ ರಹಿತ ಮತ್ತು ನಿವೇಶನ ರಹಿತ ಕುಟುಂಬಗಳ ಸಂಖ್ಯೆ ಎಷ್ಟು;

(ಆ) ಹಾಗಿದ್ದರೆ, ಕಳೆದ ನಾಲ್ಕು ವರ್ಷಗಳಲ್ಲಿ ೨೦೧೩ ರಿಂದ ೨೦೧೭ರವರೆಗೆ ಹಂಚಿಕೆ ಮಾಡಿರುವ ವಸತಿ ಅಥವಾ ನಿವೇಶನಗಳ ಒಟ್ಟು ಸಂಖ್ಯೆ ಎಷ್ಟು? (ವರ್ಷಾವಾರು ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿರುವ ಖ್ವಾರೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೩ (೬೧೪) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕಲ್ಲು ಖ್ವಾರೆಗಳ ಸಂಖ್ಯೆ ಎಷ್ಟು;

(ಆ) ಪರವಾನಗಿ ನೀಡಲಾಗಿರುವ ಖ್ವಾರೆಗಳ ಪೈಕಿ ಖಾಸಗಿ ಸಂಸ್ಥೆಗಳು ಹಾಗೂ ಸರ್ಕಾರದ ವ್ಯಾಪ್ತಿಯಲ್ಲಿರುವ ಖ್ವಾರೆಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)

(ಇ) ಸದರಿ ಖ್ವಾರೆಗಳಲ್ಲಿ ೨೦೧೬–೧೭ನೇ ಸಾಲಿನಲ್ಲಿ ಉತ್ಪಾದಿಸಲಾಗಿರುವ ಸೈಜ್‌ಕಲ್ಲು, ದಪ್ಪ ಜಲ್ಲಿ–40mm ಸಣ್ಣ ಜಲ್ಲಿ–20mm ಮತ್ತು ಕಲ್ಲಿನ ಪುಡಿಗಳು ಎಷ್ಟು ಮೆಟ್ರಿಕ್ ಟನ್‌ನಷ್ಟು ಉತ್ಪಾದನೆ ಮಾಡಲಾಗಿದೆ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ/ಖಾಸಗಿ ಪದವಿ ಕಾಲೇಜುಗಳ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೪ (೬೧೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಸರ್ಕಾರಿ/ಖಾಸಗಿ ಪದವಿ ಕಾಲೇಜುಗಳಿವೆ; (ವಿವರ ಒದಗಿಸುವುದು)

(ಆ) ಸದರಿ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು ಭರ್ತಿಯಾಗಿದೆಯೇ; ಹಾಗೂ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳೆಷ್ಟು; (ವಿವರ ಒದಗಿಸುವುದು)

(ಇ) ಗ್ರಾಮಾಂತರ ಪ್ರದೇಶದಲ್ಲಿ ಇರುವ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅದರಲ್ಲೂ ಇಂಗ್ಲೀಷ್ ಜ್ಞಾನದಲ್ಲಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಹೆಚ್ಚಿನ ಜ್ಞಾನಾರ್ಜನೆ ಪಡೆಯಲು ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ?

## ಕುಂದಾಪುರ ಹಾಗೂ ಕಾರ್ಕಳ ಪುರಸಭೆಗೆ 'ನರ್ಮ್' ವಿಸ್ತರಣೆ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೫ (೬೪೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭಾ ವ್ಯಾಪ್ತಿ ಮತ್ತು ಅದರ ಅಕ್ಕಪಕ್ಕದ ಗ್ರಾಮದ ಜನರು ತಮ್ಮ ದಿನನಿತ್ಯದ ವ್ಯವಹಾರಕ್ಕೆ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕೆ ಕುಂದಾಪುರ ನಗರವನ್ನು

ಅವಲಂಭಿಸಿದ್ದು, ಜನರ ಬೇಡಿಕೆಗೆ ಅನುಗುಣವಾಗಿ ಸರ್ಕಾರದ ನರ್ಮ್ ಬಸ್ಸು ಸೇವೆ ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಜನರ ಬೇಡಿಕೆ ಮತ್ತು ಅತಿ ಅವಶ್ಯಕತೆಯಿದ್ದರೂ ಬಸ್ಸು ಸೇವೆ ಒದಗಿಸದಿರಲು ಕಾರಣವೇನು;

(ಆ) ಉಡುಪಿ ಜಿಲ್ಲೆಯ ಕಾರ್ಕಳ ಪುರಸಭಾ ವ್ಯಾಪ್ತಿಯಲ್ಲಿ ಮತ್ತು ಅದರ ಅಕ್ಕಪಕ್ಕದ ಗ್ರಾಮದ ಜನರು ತಮ್ಮ ದಿನನಿತ್ಯದ ವ್ಯವಹಾರಕ್ಕೆ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕೆ ಕಾರ್ಕಳ ನಗರವನ್ನು ಅವಲಂಭಿಸಿದ್ದು, ಜನರ ಬೇಡಿಕೆಗೆ ಅನುಗುಣವಾಗಿ ಸರ್ಕಾರದ 'ನರ್ಮ್' ಬಸ್ಸು ಸೇವೆ ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಜನರ ಬೇಡಿಕೆ ಮತ್ತು ಅತಿ ಅವಶ್ಯಕತೆಯಿದ್ದರೂ ಬಸ್ಸು ಸೇವೆ ಒದಗಿಸದಿರಲು ಕಾರಣವೇನು?

## ವಸತಿ ಯೋಜನೆಯ ಫಲಾನುಭವಿಗಳ ಮರು ಆಯ್ಕೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೬ (೬೪೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಸುಮಾರು ೧೫ ವರ್ಷಕ್ಕಿಂತಲೂ ಹಿಂದೆ ಸರ್ಕಾರದ ವಸತಿ ಯೋಜನೆಯಡಿ ಸಹಾಯಧನ ಪಡೆದು ನಿರ್ಮಿಸಿದ ಮನೆಗಳು, ಪ್ರಸ್ತುತ ಶಿಥಿಲಗೊಂಡು ವಾಸಯೋಗ್ಯವಾಗಿರದೇ ಅಂತಹ ಫಲಾನುಭವಿಗಳ ಹೊಸ ಮನೆಗಳಿಗೆ ಬೇಡಿಕೆ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸ್ಥಳೀಯವಾಗಿ ವಾಸ್ತವಾಂಶವನ್ನು ಆಧರಿಸಿ ಅಧಿಕಾರಿಗಳು ನೀಡುವ ತಾಂತ್ರಿಕ ವರದಿ ಹಾಗೂ ದಾಖಲಾತಿಯ ಆಧಾರದಲ್ಲಿ ತೀರಾ

ಅರ್ಹ ಹಾಗೂ ತುರ್ತು ಅವಶ್ಯಕತೆ ಹೊಂದಿದ ಫಲಾನುಭವಿಗಳಿಗೆ ಮನೆ ಮಂಜೂರು ಮಾಡಲು ಸರ್ಕಾರವು ವಿಶೇಷ ಮಂಜೂರಾತಿಯನ್ನು ನೀಡಲಿದೆಯೇ; ಇಂತಹ ಪ್ರಕರಣಗಳಲ್ಲಿ ಸರ್ಕಾರದ ನಿರ್ಧಾರವೇನು?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಮತ್ತು ಮುಖ್ಯ ಮಂತ್ರಿ ಗ್ರಾಮ ಸಡಕ್ ಯೋಜನೆ ರಸ್ತೆಯ ನಿರ್ವಹಣೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೭ (೬೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೬ ವರ್ಷಗಳಿಂದ ಉಡುಪಿ ಜಿಲ್ಲೆಯಲ್ಲಿ ಇಲಾಖೆಯಿಂದ ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ ಹಾಗೂ ಮುಖ್ಯ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ನಿರ್ಮಿಸಲಾದ ರಸ್ತೆಗಳು ಯಾವುವು; ಅವುಗಳ ವಿಸ್ತೀರ್ಣವೆಷ್ಟು; ತಗಲಿದ ವೆಚ್ಚವೆಷ್ಟು; ಈ ರಸ್ತೆಗಳನ್ನು ನಿರ್ಮಿಸಿದ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ಯಾವುದು; (ವರ್ಷವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಈ ರಸ್ತೆಗಳ ನಿರ್ವಹಣೆಯಿಲ್ಲದೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರಸ್ತೆಗಳ ನಿರ್ವಹಣೆಗೆ ಸರ್ಕಾರದಿಂದ ಬಿಡುಗಡೆಯಾದ ಮತ್ತು ಬಳಕೆಯಾದ ಅನುದಾನದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ರಸ್ತೆಗಳ ನಿರ್ವಹಣೆಗೆ ಮಾರ್ಗಸೂಚಿ ಹೊರಡಿಸಲಾಗಿದೆಯೇ; (ಪ್ರತಿ ಒದಗಿಸುವುದು)

## ಬಾಪೂಜಿ ಸೇವಾ ಕೇಂದ್ರಗಳಿಗೆ ಸಿಬ್ಬಂದಿ ಒದಗಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೮ (೬೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗ್ರಾಮ ಪಂಚಾಯತ್‌ಗಳ ಕಛೇರಿ ಆಡಳಿತದ ಪರಿಣಾಮಕಾರಿ ಕರ್ತವ್ಯಕ್ಕೆ ಹಿಂದಿನ ಸಿಬ್ಬಂದಿ ವರ್ಗದ ಮಾದರಿಗೆ ಡಾಟಾ ಎಂಟ್ರಿ ಆಪರೇಟರ್ ಹುದ್ದೆ ಸೇರ್ಪಡೆಯ ಬಗ್ಗೆ ಸರ್ಕಾರದ ನಿಲುವೇನು;

(ಆ) ಗ್ರಾಮ ಪಂಚಾಯತ್ ಬಾಪೂಜಿ ಸೇವಾ ಕೇಂದ್ರದಲ್ಲಿ ಅನುಮೋದಿತ ಸಿಬ್ಬಂದಿ ವರ್ಗಕ್ಕೆ ಹೆಚ್ಚುವರಿಯಾಗಿ ಡಾಟಾ ಎಂಟ್ರಿ ಆಪರೇಟರ್ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹೌದಾದಲ್ಲಿ, ಇವರಿಗೆ ಸೇವಾ ಭದ್ರತೆಯನ್ನು ಒದಗಿಸುವ ಬಗ್ಗೆ ಸರ್ಕಾರದ ಕ್ರಮವೇನು;

(ಇ) ಬಾಪೂಜಿ ಸೇವಾ ಕೇಂದ್ರದಲ್ಲಿ ಆರ್.ಟಿ.ಸಿ ವಿತರಣೆಯಿಂದ ಸಂಗ್ರಹಿತ ಮೊತ್ತದಲ್ಲಿ ಕೇವಲ ೨.೫೦ನ್ನು ನೀಡುವುದರಿಂದ, ಗ್ರಾಮ ಪಂಚಾಯತ್‌ಗೆ ಆರ್ಥಿಕ ಹೊಡೆತ ಬೀಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಆದೇಶಕ್ಕೆ ಇಲಾಖೆ ಸಮ್ಮತಿಯನ್ನು ಪಡೆಯಲಾಗಿದೆಯೇ?

## ಶುದ್ಧ ಕುಡಿಯುವ ನೀರಿನ ಘಟಕಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೯ (೭೧೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆ ವ್ಯಾಪ್ತಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ ಗ್ರಾಮವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಕಾಮಗಾರಿ ಮುಗಿದ ಘಟಕಗಳ ಸಂಖ್ಯೆ ಎಷ್ಟು ಹಾಗೂ ಮುಗಿಯದೆ ಇರುವ ಘಟಕಗಳ ಸಂಖ್ಯೆ ಎಷ್ಟು; ಕಾಮಗಾರಿ ಮುಗಿದ ಘಟಕಗಳ ಪೈಕಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಕಾರ್ಯನಿರ್ವಹಿಸದೆ ಇರುವ ಘಟಕಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ಗ್ರಾಮವಾರು ಮಾಹಿತಿ ನೀಡುವುದು)

(ಇ) ಕಾರ್ಯನಿರ್ವಹಿಸದೆ ಇರಲು ಕಾರಣಗಳೇನು; ಕುಡಿಯುವ ನೀರಿನ ಘಟಕ ನಿರ್ಮಿಸಿ ಜನರಿಗೆ ಉಪಯೋಗವಾಗದೆ ಸರ್ಕಾರಿ ಹಣ ಪೋಲು ಮಾಡಿರುವವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಯಾವ ಕಂಪನಿಯವರಿಗೆ ಟೆಂಡರ್ ನೀಡಲಾಗಿದೆ; ಯಾವ ಮಾನದಂಡಗಳ ಆಧಾರದ ಮೇಲೆ ಟೆಂಡರ್ ನೀಡಲಾಗಿದೆ; ಒಟ್ಟಾರೆ ಯೋಜನೆಗೆ ಬಿಡುಗಡೆ ಮಾಡಿದ ಅನುದಾನವೆಷ್ಟು? (ಜಿಲ್ಲಾವಾರು/ ತಾಲ್ಲೂಕುವಾರು/ಗ್ರಾಮವಾರು ಮಾಹಿತಿ ನೀಡುವುದು)

## ಪ್ರಯಾಣಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೦ (೭೦೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ಸು ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ನಿಲ್ದಾಣಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಜಿಲ್ಲೆಯ ಎಷ್ಟು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ಸು ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುವುದಿಲ್ಲ ಹಾಗೂ ಯಾವ ಕಾರಣಕ್ಕೆ ಕುಡಿಯುವ ನೀರಿನ ವ್ಯವಸ್ಥೆ ಮಾಡಿರುವುದಿಲ್ಲ; (ವಿವರ ನೀಡುವುದು)

(ಇ) ಅನೇಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ಸು ನಿಲ್ದಾಣಗಳಲ್ಲಿ ಸ್ವಚ್ಚತೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ; ಹಾಗಾದರೆ ಸರ್ಕಾರ ಯಾವ ಕ್ರಮಕೈಗೊಂಡಿದೆ; (ವಿವರ ನೀಡುವುದು)

(ಈ) ಜಿಲ್ಲೆಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣದಲ್ಲಿ ಕುಡುಕರು ಮತ್ತು ಭೀಕ್ಷಕರ ಸಂಖ್ಯೆ ಹೆಚ್ಚಾಗಿ ಪ್ರಯಾಣಿಕರಿಗೆ ತೊಂದರೆ ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದೆಯೇ; ಹಾಗಾದರೆ ಸರ್ಕಾರ ಈ ಕುರಿತು ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## VBDT ದಾವಣಗೆರೆ ಕಾಲೇಜಿನ ಭೋದಕೇತರ ಸಿಬ್ಬಂದಿಗಳ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೧ (೭೦೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಟಿಯು ಬೆಳಗಾವಿಯ ಘಟಕ ಕಾಲೇಜಾದ ಯು.ಬಿ.ಡಿ.ಟಿ. ದಾವಣಗೆರೆ ಕಾಲೇಜಿಗೆ ೨೦೧೩–೧೪ರಲ್ಲಿ ೧೧೦ ಭೋದಕೇತರ ಸಿಬ್ಬಂದಿಗೆ ಆದೇಶ ಹೊರಡಿಸಿ (ಆದೇಶ ಸಂ.ವತಾವಿ/ಡಿಪಿಎಆರ್/ ೨೦೧೨–೧೩/೭೩೦ ಯುಬಿಡಿಟಿ ಕಾಲೇಜ್ ದಾವಣಗೆರೆ) ಲಿಖಿತ ಪರೀಕ್ಷೆ ಮತ್ತು ಸಂದರ್ಶನ ಮುಗಿಸಿ ೩ ವರ್ಷಗಳು ಕಳೆದರೂ ಈವರೆವಿಗೂ ಅದರ ಬಗ್ಗೆ ಯಾವುದೇ ಮಾಹಿತಿ ಇಲ್ಲದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಈ ಬಗ್ಗೆ ಪರಿಶೀಲಿಸಿ, ಫಲಿತಾಂಶ ಪ್ರಕಟಿಸಿ, ಯಾವುದೇ ಕಾರಣಕ್ಕೂ ಹೊಸ ನೇಮಕಾತಿ ಆದೇಶ ಹೊರಡಿಸಿದ್ದಲ್ಲಿ, ಈಗಾಗಲೇ ಹಿಂದೆ ವಯೋಮಿತಿ ಆಧಾರದಲ್ಲಿ ಅರ್ಜಿ ಸಲ್ಲಿಸಿರುವ, ವಯೋಮಿತಿ ಮೀರಿರುವ ಅರ್ಹ ಅಭ್ಯರ್ಥಿಗಳಿಗೆ ಅವಕಾಶ ಕಲ್ಪಿಸಿಕೊಡುವ ಕುರಿತು ಸರ್ಕಾರದ ಕ್ರಮವೇನು? (ಸ್ಪಷ್ಟನೆ ನೀಡುವುದು)

## ಪ್ರೌಢ ಶಾಲೆ ಮತ್ತು ಪಿ.ಯು. ಕಾಲೇಜುಗಳಲ್ಲಿ ಖಾಲಿ ಹುದ್ದೆ ತುಂಬುವ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೦೦೨ (೬೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕ ಮತ್ತು ಉಪನ್ಯಾಸಕರ ಹುದ್ದೆಗಳು ಖಾಲಿ ಇದೆ;

(ಆ) ಕರ್ನಾಟಕ ರಾಜ್ಯ ಸರ್ಕಾರವು ಖಾಲಿ ಹುದ್ದೆಗಳನ್ನು ತುಂಬಲು ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ;

(ಇ) ಕರ್ನಾಟಕದ ರಾಜ್ಯದಲ್ಲಿ ಯಾವ ಸಾಲಿನವರೆಗೆ ಖಾಸಗಿ ಶಾಲೆಗಳನ್ನು ಅನುದಾನದ ವ್ಯಾಪ್ತಿಗೆ ಒಳಪಡಿಸಲಾಗಿದೆ; ಪ್ರಸಕ್ತ ಸಾಲಿನಲ್ಲಿ ಖಾಸಗಿ ಶಾಲೆಗಳನ್ನು ಅನುದಾನದ ವ್ಯಾಪ್ತಿಗೆ ತರುವ ಉದ್ದೇಶ ಸರ್ಕಾರಕ್ಕೆ ಇರುತ್ತದೆಯೇ;

(ಈ) ರಾಜ್ಯ ಸರ್ಕಾರದ ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾಲಾನುಕಾಲಕ್ಕೆ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಬಡ್ತಿಯನ್ನು ನೀಡಲಾಗಿದೆಯೇ; ಇಲ್ಲವಾದಲ್ಲಿ, ರಾಜ್ಯ ಸರ್ಕಾರ ಪ್ರಸಕ್ತ ಸಾಲಿನಲ್ಲಿ ಬಡ್ತಿಯನ್ನು ನೀಡುತ್ತದೆಯೇ;

(ಉ) ರಾಜ್ಯ ಸರ್ಕಾರವು ಶಾಲಾ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಆರೋಗ್ಯ ಮತ್ತು ವಿಮಾ ಸೌಲಭ್ಯದ ಸೌಕರ್ಯವನ್ನು ವಿಸ್ತಾರಗೊಳಿಸುವ ಉದ್ದೇಶವನ್ನು ಹೊಂದಿದೆಯೇ; ಖಾಸಗಿ ಅನುದಾನಿತ ಶಾಲೆಗಳ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ಆರೋಗ್ಯ ಸಂಜೀವಿನಿ/ಜ್ಯೋತಿ ಸಂಜೀವಿನಿ ಸೌಲಭ್ಯದ ಮೂಲಕ ಆರೋಗ್ಯ ಭದ್ರತೆಯನ್ನು ನೀಡುವುದೆ;

(ಊ) ರಾಜ್ಯ ಸರ್ಕಾರವು ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಿದೆ?

## ರಾಷ್ಟ್ರೀಯ ಉಚ್ಛತಾ ಶಿಕ್ಷಣ ಅಭಿಯಾನದ ಅನುದಾನದ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೧೦೦೩ (೬೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರಿಯ ಉನ್ನತ ಶಿಕ್ಷಣ ನೀತಿಯ ಅಡಿಯಲ್ಲಿ ರಾಷ್ಟ್ರೀಯ ಉಚ್ಛತಾ ಶಿಕ್ಷಣ ಅಭಿಯಾನದ ಮೂಲಕ ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಕ್ಕೆ ಇಲ್ಲಿಯವರೆಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿರುತ್ತದೆ; ೨೦೧೬-೧೭ನೇ ಸಾಲಿನಲ್ಲಿ ಈ ಯೋಜನೆಯಡಿಯಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿರುತ್ತದೆ;

(ಆ) ರಾಜ್ಯ ಸರ್ಕಾರವು ರಾಷ್ಟ್ರೀಯ ಉಚ್ಛತಾ ಶಿಕ್ಷಣ ಅಭಿಯಾನದಡಿಯಲ್ಲಿ ಎಷ್ಟು ವಿಶ್ವವಿದ್ಯಾಲಯಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆ ಮಾಡಿರುತ್ತದೆ; ಹಣವನ್ನು ಪಡೆದಿರುವ ವಿಶ್ವವಿದ್ಯಾಲಯಗಳು ಹಣವನ್ನು ಸಮರ್ಪಕವಾಗಿ ಬಳಕೆ ಮಾಡಿರುವ ಕುರಿತು ವಿನಿಯೋಗ ದೃಢೀಕರಣ ಪತ್ರವನ್ನು (Utilization Certificate) ನೀಡಿರುತ್ತವೆಯೇ;

(ಇ) ರಾಷ್ಟ್ರೀಯ ಉಚ್ಛತಾ ಶಿಕ್ಷಣ ಅಭಿಯಾನದಡಿಯಲ್ಲಿ ರಾಜ್ಯ ಸರ್ಕಾರವು ಲ್ಯಾಪ್‌ಟ್ಯಾಪ್‌ಗಳನ್ನು ಖರೀದಿ ಮಾಡಲು ಪದವಿ ಕಾಲೇಜುಗಳಿಗೆ ಅನುಮತಿ ನೀಡಿರುತ್ತದೆಯೇ; ಅನುಮತಿ ನೀಡಿದ್ದಲ್ಲಿ, ಎಷ್ಟು ಲ್ಯಾಪ್‌ಟ್ಯಾಪ್‌ಗಳನ್ನು ಖರೀದಿ ಮಾಡಲಾಗಿರುತ್ತದೆ;

(ಈ) ಕೇಂದ್ರ ಸರ್ಕಾರದ ಅನುದಾನದಲ್ಲಿ ಲ್ಯಾಪ್‌ಟ್ಯಾಪ್‌ಗಳನ್ನು ಖರೀದಿ ಮಾಡಲು ಅನುಮತಿ ನೀಡಿದ್ದಲ್ಲಿ, ಅಧಿಕೃತ ಕಂಪನಿಯಿಂದ ಖರೀದಿಸಲಾಗಿದೆಯೇ ; ಖರೀದಿ ಮಾಡಿದ್ದಲ್ಲಿ, ಮಾರುಕಟ್ಟೆ ದರಕ್ಕೆ ಅನುಗುಣವಾಗಿದೆಯೇ ; ಮತ್ತು ಎಲ್ಲಾ ಲ್ಯಾಪ್‌ಟ್ಯಾಪ್‌ಗಳಿಗೆ ಖಾತರಿ ಪತ್ರವನ್ನು ನೀಡಲಾಗಿದೆಯೇ ?

## ಚಿತ್ರದುರ್ಗ ತಾಲ್ಲೂಕಿನ ಸರ್ಕಾರಿ ಶಾಲೆಗಳಲ್ಲಿ ಇಂಗ್ಲೀಷ್ ಶಿಕ್ಷಕರ ಹುದ್ದೆ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೪ (೬೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ತಾಲ್ಲೂಕಿನಲ್ಲಿ ಇರುವ ಸರ್ಕಾರಿ ಶಾಲೆಗಳಲ್ಲಿ ಮಂಜೂರಾದ ಸರ್ಕಾರಿ ಇಂಗ್ಲೀಷ್ ಶಿಕ್ಷಕರ ಹುದ್ದೆಗಳು ಎಷ್ಟು;

(ಆ) ಇದರಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಇಂಗ್ಲೀಷ್ ಶಿಕ್ಷಕರ ಹುದ್ದೆಗಳು ಎಷ್ಟು;

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಇಲಾಖೆ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)

## ಪಂಚಾಯ್ತಿಗಳ ವ್ಯಾಪ್ತಿಗೆ ಬರುವ ಬೀದಿ ದೀಪಗಳಿಗೆ ಎಲ್ಇಡಿ ದೀಪಗಳ ಅಳವಡಿಕೆ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೫ (೬೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯುತ್ ಮಿತವ್ಯಯದ ದೃಷ್ಟಿಯಿಂದ ಕಳೆದ ಮೂರು ವರ್ಷಗಳಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಬರುವ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬೀದಿ ದೀಪಗಳಿಗೆ ಅಳವಡಿಸಲಾಗಿರುವ ಎಲ್ಇಡಿ ಲೈಟುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಎಲ್ಇಡಿ ಲೈಟುಗಳ ಖರೀದಿಗೆ ಈ ಮೂರು ವರ್ಷಗಳಲ್ಲಿ ವೆಚ್ಚ ಮಾಡಲಾದ ಅನುದಾನ ಎಷ್ಟು? (ಮಾಹಿತಿ ನೀಡುವುದು)

## ಆರ್ ಟಿ ಇ ಸೀಟುಗಳ ಪ್ರವೇಶಕ್ಕೆ ಪರೀಕ್ಷಾರ್ಥ ಅರ್ಜಿ ಸ್ವೀಕಾರ ಪ್ರಕ್ರಿಯೆಯಲ್ಲಿ ತಾಂತ್ರಿಕ ದೋಷ ಉಂಟಾಗಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೦೬ (೬೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ೨೦೧೮–೧೯ನೇ ಸಾಲಿನ ಶಿಕ್ಷಣ ಹಕ್ಕು ಕಾಯ್ದೆ (ಆರ್ ಟಿ ಇ) ಸೀಟುಗಳ ಪ್ರವೇಶಕ್ಕೆ ಶಿಕ್ಷಣ ಇಲಾಖೆಯಿಂದ ಪರೀಕ್ಷಾರ್ಥ ಅರ್ಜಿ ಸ್ವೀಕಾರ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಪ್ರಾರಂಭವಾಗಿದ್ದಲ್ಲಿ, ಯಾವ ದಿನ ಪ್ರಾರಂಭಿಸಲಾಯಿತು;

(ಆ) ಅರ್ಜಿ ಸಲ್ಲಿಕೆಯ ಪ್ರಕ್ರಿಯೆಯಲ್ಲಿ ತಾಂತ್ರಿಕ ದೋಷ ಉಂಟಾಗಿ ಪೋಷಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ತಾಂತ್ರಿಕ ದೋಷವನ್ನು ಪರಿಹರಿಸುವ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ;

(ಈ) ಬೆಂಗಳೂರು ನಗರ ಜಿಲ್ಲೆಯಲ್ಲಿ ಒಟ್ಟು ಎಷ್ಟು ಆರ್ ಟಿ ಇ ಸೀಟುಗಳಿವೆ; ಒಟ್ಟು ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ?

## ಸರ್ಕಾರಿ ಶಾಲೆಗಳ ಮಕ್ಕಳಿಗೆ ನೀಡುವ ಮಾದರಿಯಲ್ಲಿಯೇ ಸರ್ಕಾರಿ ಅನುದಾನಿತ ಶಾಲೆಗಳ ಮಕ್ಕಳಿಗೂ ಸಮವಸ್ತ್ರ ಮತ್ತು ಷೂಗಳನ್ನು ನೀಡುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೦೭ (೬೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಶಾಲೆಗಳಲ್ಲಿನ ಮಕ್ಕಳಿಗೆ ಸಮವಸ್ತ್ರ ಮತ್ತು ಷೂಗಳನ್ನು ನೀಡಲಾಗುತ್ತಿದೆಯೇ; ನೀಡಲಾಗುತ್ತಿದ್ದಲ್ಲಿ, ಎಷ್ಟನೇ ತರಗತಿಯವರೆಗೆ ನೀಡಲಾಗುತ್ತಿದೆ; (ವಿವರ ನೀಡುವುದು)

(ಆ) ಸರ್ಕಾರದಿಂದ ಅನುದಾನಿತ ಶಾಲೆಗಳ ಮಕ್ಕಳಿಗೆ ಸಮವಸ್ತ್ರ ಮತ್ತು ಷೂಗಳನ್ನು ನೀಡಲಾಗುತ್ತಿದೆಯೇ; (ನೀಡಲಾಗುತ್ತಿದ್ದಲ್ಲಿ, ವಿವರ ನೀಡುವುದು)

(ಇ) ನೀಡಲಾಗುತ್ತಿಲ್ಲವಾದಲ್ಲಿ, ಕಾರಣವೇನು;

(ಈ) ಸರ್ಕಾರಿ ಅನುದಾನಿತ ಶಾಲೆಗಳ ಮಕ್ಕಳಿಗೂ ಸಮವಸ್ತ್ರ ಮತ್ತು ಷೂಗಳನ್ನು ನೀಡುವ ಕುರಿತು ಸರ್ಕಾರದ ನಿಲುವೇನು?

## ಶಾಲಾ ಮಕ್ಕಳ ಪುಸ್ತಕಗಳ ಚೀಲದ ತೂಕವು ಅತ್ಯಂತ ಜಾಸ್ತಿಯಿದ್ದು, ಇದರಿಂದ ಮಕ್ಕಳಲ್ಲಿ ಉಂಟಾಗಿರುವ ದೈಹಿಕ ತೊಂದರೆಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೦೮ (೬೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೦೬ರ ಮಕ್ಕಳ ಶಾಲಾ ಚೀಲ ಕಾಯ್ದೆ ಕುರಿತು ವಿವರ ನೀಡುವುದು;

(ಆ) ಶಾಲಾ ಚೀಲದ ತೂಕವು ಮಕ್ಕಳ ತೂಕದ ಶೇಕಡಾ ೧೦ ರಷ್ಟನ್ನು ಮೀರಿರಬಾರದು ಎಂದು ನಿಯಮವಿರುವುದು ನಿಜವೇ;

(ಇ) ಈಗಿನ ಪ್ರಾಥಮಿಕ ಶಿಕ್ಷಣ ಪಡೆಯುತ್ತಿರುವ ಶಾಲಾ ಮಕ್ಕಳು ಅಂದಾಜು ಎಷ್ಟು ತೂಕದ ಪುಸ್ತಕದ ಚೀಲವನ್ನು ಹೊರುತ್ತಿದ್ದಾರೆ;

(ಈ) ಇದರಿಂದಾಗಿ ಮಕ್ಕಳಲ್ಲಿ ಯಾವ ರೀತಿಯ ತೊಂದರೆ ಕಂಡು ಬಂದಿದೆ; ಈ ಕುರಿತು ಯಾವುದಾದರೂ ಪರಿಶೀಲನೆ ಅಥವಾ ತಪಾಸಣೆ ನಡೆಸಲಾಗಿದೆಯೇ; (ವಿವರ ನೀಡುವುದು)

(ಉ) ಮಕ್ಕಳ ಪುಸ್ತಕದ ಭಾರವನ್ನು ಕಡಿಮೆ ಮಾಡುವ ಸಂಬಂಧ ಯಾವ ರೀತಿಯ ಕ್ರಮಕೈಗೊಳ್ಳಲಾಗುವುದು?

## ಶೌಚಾಲಯಗಳ ಕೊರತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೯ (೬೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಎಲ್ಲೆಲ್ಲಿ ಇದರ ಕೊರತೆ ಇದೆ; (ವಿಧಾನಸಭಾವಾರು, ಶಾಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಯಾವ ಲೆಕ್ಕಶೀರ್ಷಿಕೆಯಡಿಯಲ್ಲಿ ಶಾಲಾ ಶೌಚಾಲಯ ನಿರ್ಮಾಣಕ್ಕಾಗಿ ಹಣ ಬಿಡುಗಡೆ ಮಾಡಿರುತ್ತದೆ; (ವರ್ಷವಾರು, ವಿಧಾನಸಭಾವಾರು ಸಂಪೂರ್ಣ ವಿವರ ನೀಡುವುದು)

(ಈ) ಶೌಚಾಲಯಗಳು ನಿರ್ಮಾಣ ಮಾಡಿದ್ದಲ್ಲಿ, ಅವುಗಳಿಗೆ ತಗುಲಿರುವ ವೆಚ್ಚ ಎಷ್ಟು; ಯಾವ ಯಾವ ಅನುದಾನದಡಿಯಲ್ಲಿ ಗುತ್ತಿಗೆದಾರರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ? (ಶೌಚಾಲಯವಾರು ಸಂಪೂರ್ಣ ವಿವರ ನೀಡುವುದು)

## ಗಣಿತ ಉಪನ್ಯಾಸಕರನ್ನು ವೇತನ ಅನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೦ (೬೪೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿ.ಯು ಕಾಲೇಜುಗಳ ವಿಜ್ಞಾನ ವಿಭಾಗದ ಗಣಿತಶಾಸ್ತ್ರ ಉಪನ್ಯಾಸಕರ ಹುದ್ದೆಗಳನ್ನು ವೇತನ ಅನುದಾನಕ್ಕೆ ಪರಿಗಣಿಸದಿರುವುದಕ್ಕೆ ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಗಣಿತ ವಿಷಯವು ವಿಜ್ಞಾನ ವಿಭಾಗಕ್ಕೆ ಸಂಬಂಧಿಸಿದೆಯೇ ಅಥವಾ ಇಲ್ಲವೇ; ಇದ್ದಲ್ಲಿ, ಈ ಉಪನ್ಯಾಸಕರ ಹುದ್ದೆಗಳನ್ನು ಅನುದಾನಕ್ಕೆ ಒಳಪಡಿಸುವುದೂ ಸಹ ಅವಶ್ಯಕವೆನ್ನಿಸುತ್ತದೆಯೇ; (ವಿವರವಾಗಿ ಸ್ಪಷ್ಟಪಡಿಸುವುದು)

(ಇ) ಸರ್ಕಾರವು ಗಣಿತ ಉಪನ್ಯಾಸಕರನ್ನು ವೇತನ ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯನ್ನು ಪುನಃ ಪರಿಗಣಿಸುವುದೇ; ಈ ಪರಿಗಣನೆಗೆ ತೆಗೆದುಕೊಳ್ಳಲು ನಿಗಧಿಪಡಿಸುವ ಕಾಲಮಿತಿ ಏನು?

## ವಸತಿ ರಹಿತರ ಸಮೀಕ್ಷೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೧ (೬೫೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ವಸತಿ ರಹಿತರ ಸಮೀಕ್ಷೆಯನ್ನು ನಡೆಸಲಾಗಿದೆಯೇ; (ಗ್ರಾಮ ಪಂಚಾಯತಿಗಳವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಸತಿ ಇಲಾಖೆಯಿಂದ ಎಷ್ಟು ನಿರಾಶ್ರಿತರಿಗೆ ಸರ್ಕಾರದ ವಿವಿಧ ಯೋಜನೆಗಳಲ್ಲಿ ಮನೆಗಳನ್ನು ನೀಡಲಾಗಿದೆ; ನೀಡಿದ್ದಲ್ಲಿ, ಫಲಾನುಭವಿಗಳ ಹೆಸರುಗಳೊಂದಿಗೆ ಗ್ರಾಮ ಪಂಚಾಯತಿಗಳವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು);

(ಇ) ಸರ್ಕಾರದ ಮುಂದಿರುವ ಕಾರ್ಯ ಯೋಜನೆಗಳು ಯಾವುವು? (ಸಂಪೂರ್ಣ ವಿವರಗಳನ್ನು ನೀಡುವುದು)

## ನಿರ್ಮಲ ಭಾರತ ಅಭಿಯಾನ ಯೋಜನೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೨ (೬೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಮಂಜೂರಾಗಿರುವ ಶೌಚಾಲಯಗಳೆಷ್ಟು; (ತಾಲ್ಲೂಕು ಮತ್ತು ಗ್ರಾಮ ಪಂಚಾಯತ್‌ಗಳವಾರು ವಿವರ ನೀಡುವುದು)

(ಆ) ಮಂಜೂರಾದ ಶೌಚಾಲಯಗಳನ್ನು ಸಮರ್ಪಕವಾಗಿ ಬಳಕೆ ಮಾಡಲಾಗಿದೆಯೇ; ಯಾವ ಮಾನದಂಡದಡಿಯಲ್ಲಿ ಶೌಚಾಲಯಗಳನ್ನು ಹಂಚಿಕೆ ಮಾಡಲಾಗಿದೆ; ಹಂಚಿಕೆ ಮಾಡಿದ್ದಲ್ಲಿ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು;

(ಇ) ಸದರಿ ಯೋಜನೆಯಡಿ ಶೌಚಾಲಯಗಳನ್ನು ನಿರ್ಮಿಸಲು ಇರುವ ಮಾನದಂಡಗಳೇನು;

(ಈ) ರಾಜ್ಯದಲ್ಲಿ, ಪ್ರಸ್ತುತ ನಿರ್ಮಲ ಭಾರತ ಯೋಜನೆಯಡಿ ಶೌಚಾಲಯ ನಿರ್ಮಿಸಿಕೊಳ್ಳಲು ವಿಧಿಸಿರುವ ವಾರ್ಷಿಕ ಗುರಿ ಎಷ್ಟು? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೩ (೬೫೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಗುಮಾಸ್ತರು, ಎಲೆಕ್ಟ್ರಿಷಿಯನ್ ಮತ್ತು ಇನ್ನಿತರ ಹುದ್ದೆಗಳಲ್ಲಿ ಹಿಂದಿನ ವಿದ್ಯಾರ್ಹತೆ, ಎಸ್.ಎಸ್.ಎಲ್.ಸಿ. (ಪ್ರೌಢ ಶಿಕ್ಷಣ) ಹೊಂದಿದ್ದು, ಸೇವೆಗೆ ಸೇರಿ ಸುಮಾರು ೧೦ ರಿಂದ ೧೫ ವರ್ಷಕ್ಕೂ ಹೆಚ್ಚು ಸೇವೆ ಪೂರೈಸಿದ್ದು, ಇಂತಹವರನ್ನು ಇದುವರೆಗೂ ಖಾಯಂ ಹುದ್ದೆಗೆ ಒಳಪಡಿಸದೆ ಇರಲು ಕಾರಣಗಳೇನು ; ಅನುಮೋದನೆಗೆ ಒಳಪಡದ ಸಿಬ್ಬಂದಿಗಳ

ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿಗಳವಾರು ಸಿಬ್ಬಂದಿಗಳ ಸೇವಾ ಅವಧಿ, ಹೆಸರು ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಹಾಗೆ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗಳಿಗೆ ಪಿ.ಎಫ್. ಮತ್ತು ಇತರ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ, ಇಲ್ಲವಾದಲ್ಲಿ ಕಾರಣಗಳೇನು ;

(ಇ) ಗ್ರಾಮ ಪಂಚಾಯತಿಗಳಲ್ಲಿ ೧೦/೧೫ ವರ್ಷಗಳಿಗೂ, ಹೆಚ್ಚು ಅವಧಿಯಿಂದ ಸೇವೆ ಸಲ್ಲಿಸಿರುತ್ತಿರುವ ಸಿಬ್ಬಂದಿಗಳ ಅನುಮೋದನೆಗೆ ಯಾವ್ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) ಉದ್ಯೋಗ ಭದ್ರತೆ ಸೌಲಭ್ಯ ಮತ್ತು ಕಾರ್ಮಿಕ ಕಾಯಿದೆಯನ್ನು ಒಪ್ಪಿ ಗೌರವಿಸಬೇಕಾದ್ದು ಇಲಾಖೆಯ ಹೊಣೆಯಲ್ಲವೇ; ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ಈ ಇಲಾಖೆಯಲ್ಲಿ ೧೦ ರಿಂದ ೧೫ ವರ್ಷಗಳಿಗೂ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವವರನ್ನು ಎಷ್ಟು ಕಾಲಮಿತಿಯೊಳಗೆ ಖಾಯಂ ಮಾಡಲಾಗುವುದು? (ವಿವರ ನೀಡುವುದು)

## ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಕಾಲೇಜ್ ಆಫ್ ವಿಜ್ಯುಯಲ್ ಆರ್ಟ್ಸ್‌ಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಕೆ.ಬಿ. ಶಾಣಪ್ಪ (ನಾಮನಿರ್ದೇಶನ ಹೊಂದಿದವರು) :–**

೧೦೧೪ (೬೦೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾಲೇಜ್ ಆಫ್ ವಿಜ್ಯುವಲ್ ಆರ್ಟ್ಸ್, ಕಲಬುರಗಿ ಕಟ್ಟಡ ಕಾಮಗಾರಿಗಾಗಿ ಅನುದಾನ ಕೋರಿ ಸರ್ಕಾರಕ್ಕೆ ಅರ್ಜಿ ಸ್ವೀಕೃತವಾಗಿದೆಯೇ ;

(ಆ) ಕಾಲೇಜ್ ಆಫ್ ವಿಜ್ಯುವಲ್ ಆರ್ಟ್ಸ್, ಕಲಬುರಗಿ ಇವರ ಕೋರಿಕೆಯ ಮೇರೆಗೆ ಕಟ್ಟಡ ಕಾಮಗಾರಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಬಿಡುಗಡೆ ಮಾಡದಿದ್ದಲ್ಲಿ, ಅದಕ್ಕೆ ಕಾರಣವೇನು; ಇಲ್ಲದಿದ್ದಲ್ಲಿ, ಬಿಡುಗಡೆ ಮಾಡಲಾಗುವುದು ಯಾವಾಗ ? (ವಿವರ ಒದಗಿಸುವುದು)

## ಅವಧಿ ಮೀರಿದ ಬಸ್‌ಗಳ ಸಂಚಾರವನ್ನು ತಡೆದು ಹೊಸ ಬಸ್‌ಗಳ ಕಾರ್ಯ ಜಾರಿಗೆ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೫ (೬೧೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಎಲ್ಲಾ ಡಿಪೋಗಳಲ್ಲಿ ಇರುವ ಬಸ್‌ಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಹತ್ತು ವರ್ಷಗಳಿಗೆ ಮೀರಿದ ಹಾಗೂ ೭ ಲಕ್ಷ ಕಿ.ಮೀ ಗೂ ಅಧಿಕ ಸಂಚಾರ ಮಾಡಿರುವ ಬಸ್‌ಗಳ ಸಂಖ್ಯೆ ಎಷ್ಟು ;

(ಆ) ಬಸ್‌ಗಳಲ್ಲಿ ತುರ್ತು ಸಂದರ್ಭದಲ್ಲಿ ಬಳಸಲು ಬೇಕಾಗುವ ಪ್ರಥಮ ಚಿಕಿತ್ಸಾ ಪೆಟ್ಟಿಗೆ ಇಡಲು ಇರುವ ಮಾನದಂಡಗಳೇನು ; (ಸರ್ಕಾರಿ ಆದೇಶ ಇದ್ದಲ್ಲಿ ಒದಗಿಸುವುದು)

(ಇ) ಅವಧಿ ಮೀರಿದ ಹಳೆಯ ಬಸ್‌ಗಳನ್ನು ಯಾವ ರೀತಿಯಲ್ಲಿ ವಿಲೇ ಮಾಡಲಾಗುತ್ತದೆ ? (ವಿವರ ನೀಡುವುದು)

## ಹೊರ ರಾಜ್ಯದಿಂದ ಬರುವ ವಾಹನಗಳಿಗೆ ಪರವಾನಿಗೆ ಶುಲ್ಕ ನಿಗಧಿ ಮಾಡುವ ಬಗ್ಗೆ

**ಶ್ರೀ ಸುನಿಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೬ (೬೧೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಮ್ಮ ರಾಜ್ಯದಿಂದ ಬೇರೆ ರಾಜ್ಯಕ್ಕೆ ವಾಹನಗಳು ಹೋಗಬೇಕಾದಲ್ಲಿ ಪಾವತಿಸಬೇಕಾಗಿರುವ ಪರವಾನಗಿ ಶುಲ್ಕ ಎಷ್ಟು ; (ಪಕ್ಕದ ರಾಜ್ಯಗಳ ಮಾಹಿತಿ ನೀಡುವುದು)

(ಆ) ಬೇರೆ ರಾಜ್ಯದಿಂದ ನಮ್ಮ ರಾಜ್ಯಕ್ಕೆ ಬರುವ ವಾಹನಗಳಿಗೆ ಎಷ್ಟು ಪರವಾನಗಿ ಶುಲ್ಕ ಪಾವತಿಸಬೇಕಾಗಿದೆ ; (ಮಾಹಿತಿ ನೀಡುವುದು)

(ಇ) ಒಂದು ವೇಳೆ ಬೇರೆ ರಾಜ್ಯದಿಂದ ನಮ್ಮ ರಾಜ್ಯಕ್ಕೆ ಬರುವ ವಾಹನಗಳಿಗೆ ಪರವಾನಗಿ ಶುಲ್ಕ ಇಲ್ಲವೆಂದಾದಲ್ಲಿ, ಇದರಿಂದ ಸರ್ಕಾರಕ್ಕೆ ನಷ್ಟವಾಗುವುದಿಲ್ಲವೆ ; ಈ ಬಗ್ಗೆ ಸರ್ಕಾರದ ನಿಲುವೇನು?

## ಸರಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಹ ಶಿಕ್ಷಕರು ಹಾಗೂ ದೈಹಿಕ ಶಿಕ್ಷಕರ ಪದೋನ್ನತಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೦೧೭ (೬೯೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಸರಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಸ್ನಾತಕೋತ್ತರ ಪದವಿಯನ್ನು ಹೊಂದಿರುವ ಸಹ ಶಿಕ್ಷಕರು ಮತ್ತು ದೈಹಿಕ ಶಿಕ್ಷಕರನ್ನು ಪದವಿ ಪೂರ್ವ ವಿಭಾಗಕ್ಕೆ ಉಪನ್ಯಾಸಕರನ್ನಾಗಿ ಪದೋನ್ನತಿ ನೀಡುವ ಪ್ರಕ್ರಿಯೆ ಕಳೆದ ೨-೩ ವರ್ಷಗಳಿಂದ ಸ್ಥಗಿತಗೊಂಡಿರುವುದು ನಿಜವೇ, ಹಾಗಿದ್ದಲ್ಲಿ, ಪದೋನ್ನತಿ ಪ್ರಕ್ರಿಯೆಯನ್ನು ಯಾವ ದಿನಾಂಕದಿಂದ ನಿಲ್ಲಿಸಲಾಗಿದೆ;

(ಆ) ಈ ರೀತಿಯ ಪದೋನ್ನತಿ ನೀಡುವ ಪ್ರಕ್ರಿಯೆ ಸ್ಥಗಿತಗೊಳಿಸಲು ಕಾರಣವೇನು ; (ವಿವರ ನೀಡುವುದು)

(ಇ) ಪದೋನ್ನತಿ ನೀಡಲು ಸ್ನಾತಕೋತ್ತರ ಪದವಿಯಲ್ಲಿ ಶೇಕಡ ೫೫ ಅಂಕಗಳನ್ನು ಪಡೆದಿರಬೇಕು ಎಂಬ ನಿಯಮಗಳ ಆದೇಶವನ್ನು ಯಾವ ದಿನಾಂಕದಂದು ಹೊರಡಿಸಲಾಗಿದೆ ; ಸದರಿ ಆದೇಶವನ್ನು ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಹೊರಡಿಸಿದ್ದು ನಿಜವೇ;

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಹುದ್ದೆಗಳ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):-**

೧೦೧೮ (೭೧೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ೩ ಸ್ಥಳಗಳಲ್ಲಿ ಮಂಜೂರಾದ, ಸರ್ಕಾರಿ ಹುದ್ದೆಗಳೆಷ್ಟು ; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು, ವಿವರ ನೀಡುವುದು)

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ನಿಯೋಜನೆಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಮೂಲ ಹುದ್ದೆ- ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಯ ವಿವರ ನೀಡುವುದು) ನಿಯಮ ಮೀರಿ ಅರ್ಹತೆ ಇಲ್ಲದವರಿಗೆ ಉನ್ನತ ಹುದ್ದೆಯ ಪ್ರಭಾರ ನೀಡಿರುವುದು ನಿಜವೇ ;

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಅನ್ಯ ಇಲಾಖೆಯಿಂದ ವಿಲೀನಗೊಂಡ ಅಧಿಕಾರಿ ಮತ್ತು ನೌಕರರ ಸಂಖ್ಯೆ ಎಷ್ಟು ; ( ಈ ಸಂಬಂಧ ಆದೇಶ ಮತ್ತು ಸುತ್ತೋಲೆಗಳಿದ್ದಲ್ಲಿ ಪ್ರತಿ ನೀಡುವುದು)

(ಈ) ನಿಯಮ ೩೨ ರಡಿ ಗ್ರಾಮ ಪಂಚಾಯತ್ ಕಾರ್ಯದರ್ಶಿ ಹುದ್ದೆಯಿಂದ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಪದೋನ್ನತಿ ಪಡೆದ ನೌಕರರ ಸಂಖ್ಯೆ ಎಷ್ಟು ;

(ಉ) ಗ್ರಾಮ ಪಂಚಾಯತ್ ನೌಕರರಿಗೆ ನಿಯಮ ಮೀರಿ ಅರ್ಹತೆ ಇಲ್ಲದವರಿಗೆ ೩-೪ ಪದೋನ್ನತಿ ನೀಡಿರುವುದು ನಿಜವೇ ; ನಿಜವಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಊ) ಪದೋನ್ನತಿ ನಿಯಮ ಮೀರಿ ಅನರ್ಹರಿಗೆ ಉನ್ನತ ಹುದ್ದೆಯ ಪ್ರಭಾರದ ಕುರಿತು ತನಿಖೆ ನಡೆಸಲಾಗಿದೆಯೇ ;

(ಋ) ಪದೋನ್ನತಿ, ಉನ್ನತ ಹುದ್ದೆಯ ಪ್ರಭಾರದ ಕುರಿತು ಸಮಗ್ರ ಉನ್ನತ ಮಟ್ಟದ ತನಿಖೆ ನಡೆಸುವ ಕುರಿತು ಸರ್ಕಾರದ ನಿಲುವೇನು; ಈ ಕುರಿತು ಯಾವ ಹಂತದಲ್ಲಿ ಕ್ರಮ ಕೈಗೊಳ್ಳಲಿದೆ ?

## ಕೈಗಾರಿಕೆಯನ್ನು ಉತ್ತೇಜಿಸಲು "ಇನ್‌ವೆಸ್ಟ್ ಕರ್ನಾಟಕ" ಎಂಬ ಕಂಪನಿ ರಚಿಸುವ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೧೯ (೭೫೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದಲ್ಲಿ ಕೈಗಾರಿಕೆಯನ್ನು ಉತ್ತೇಜಿಸಲು, ಯೋಜನಾ ಪ್ರಸ್ತಾವನೆಗಳನ್ನು ಅಭಿವೃದ್ಧಿಪಡಿಸಲು ಹಾಗೂ ಮಾರುಕಟ್ಟೆ ಇಂಟೆಲಿಜೆನ್ಸ್ ಅಭಿವೃದ್ಧಿಪಡಿಸಲು "ಇನ್‌ವೆಸ್ಟ್ ಕರ್ನಾಟಕ" ಎಂಬ ಕಂಪನಿಯನ್ನು ರಚಿಸಲಾಗಿದ್ದು, ಇದರಡಿ ರಾಜ್ಯದ ಯಾವ ಯಾವ ಪಟ್ಟಣಗಳನ್ನು ಕೈಗಾರಿಕಾ ಪ್ರದೇಶಗಳೆಂದು ಘೋಷಿಸಲಾಗಿದೆ ;

(ಆ) ಪ್ರಸ್ತುತ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸಲು ಎಷ್ಟು ಹಣವನ್ನು ಒದಗಿಸಲಾಗಿದೆ ;

(ಇ) ಕೈಗಾರಿಕೆ ಪ್ರದೇಶಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ?

## ಹಳೆ ವಾಹನಗಳ ನಿಷೇಧದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೦ (೭೩೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇಶದ ಅತಿ ಹೆಚ್ಚು ಮಾಲಿನ್ಯಗೊಂಡಿರುವ ನಗರಗಳಲ್ಲಿ ಬೆಂಗಳೂರು ಎಷ್ಟನೇ ಸ್ಥಾನದಲ್ಲಿದೆ ; ಅದಕ್ಕೆ ಕಾರಣವೇನು ;

(ಆ) ಬೆಂಗಳೂರಿನ ವಾಯು ಮಾಲಿನ್ಯಕ್ಕೆ ಯಾವ ಯಾವ ಅಂಶಗಳು ಪ್ರಮುಖವಾಗಿದೆ.

(ಇ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ (ಕೆ.ಎಸ್.ಪಿ.ಸಿ.ಬಿ) ಐದು ವರ್ಷಗಳ ಹಿಂದೆ ೧೫ ವರ್ಷಗಳ ಹಳೆಯ ವಾಹನಗಳನ್ನು ನಿಷೇಧಿಸುವಂತೆ, ಸಾರಿಗೆ ಇಲಾಖೆಗೆ ಶಿಫಾರಸ್ಸು ಮಾಡಿರುತ್ತದೆಯೇ ? ಮಾಡಿದ್ದಲ್ಲಿ, ಸಾರಿಗೆ ಇಲಾಖೆ ಇದನ್ನು ಜಾರಿಗೊಳಿಸದೆ ಇರಲು ಕಾರಣವೇನು : (ವಿವರ ನೀಡುವುದು)

(ಈ) ವಾಯುಮಾಲಿನ್ಯ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ವಿಕಲಚೇತನರ ಬಸ್ ಪಾಸ್ ದುರುಪಯೋಗದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೧ (೭೩೯) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಗವಿಕಲರಿಗೆ ನೀಡುವ ರಿಯಾಯಿತಿ ದರದ ಬಸ್‌ಪಾಸ್‌ಗೆ ಇರುವ ಮಾನದಂಡವೇನು ;

(ಆ) ದೈಹಿಕವಾಗಿ ಸದೃಢವಾಗಿರುವವರು ವಿಶೇಷ ಚೇತನ ಪಾಸ್ ಹೊಂದಿರುವುದು ಸರಿಯೇ ; ಅವರ ವಿರುದ್ಧ ತೆಗೆದುಕೊಂಡ ಕ್ರಮವೇನು ;

(ಇ) ಇಲ್ಲಿಯವರೆಗೆ ಎಷ್ಟು ಅಕ್ರಮ ವಿಶೇಷ ಚೇತನ ಪಾಸ್ ಜಪ್ತಿ ಮಾಡಲಾಗಿದೆಯೇ ;

(ಈ) ಅಧಿಕಾರಿಗಳು, ವೈದ್ಯರ ನಕಲಿ ಸಹಿ, ಸೀಲ್ ಬಳಸಿ ಅಕ್ರಮವಾಗಿ ಅಂಗವಿಕಲರಿಗೆ ನೀಡುವ ರಿಯಾಯಿತಿ ದರದ ಬಸ್ ಪಾಸ್ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ರೀತಿ ನಕಲಿ ಪಾಸ್ ಹೊಂದಿರುವವರ ಮತ್ತು ಇದಕ್ಕೆ ಸಹಕರಿಸಿರುವವರ ವಿರುದ್ಧ ತೆಗೆದುಕೊಂಡ ಕಠಿಣ ಕ್ರಮವೇನು?

## ಪಠ್ಯ ಪುಸ್ತಕ ರಚನೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಆಯ್ಕೆಯಾದವರು) :–**

೧೦೨೨ (೭೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿ ೧ ರಿಂದ ೧೦ನೇ ತರಗತಿಯವರೆಗೆ ಇರುವ ಪಠ್ಯ ಪುಸ್ತಕಗಳನ್ನು ಯಾವಾಗ ರಚಿಸಲಾಗಿದೆ ;

(ಆ) ಪಠ್ಯ ಪುಸ್ತಕಗಳನ್ನು ರಾಜ್ಯ ಶಿಕ್ಷಣ ನೀತಿ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ ಯಾವ ಆಧಾರದ ಮೇಲೆ ರಚಿಸಲಾಗುತ್ತದೆ ; (ವಿವರ ನೀಡುವುದು)

(ಇ) ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ವರದಿಯಾಗಿರುವಂತೆ ಪಠ್ಯಪುಸ್ತಕಗಳನ್ನು ಪರಿಷ್ಕರಿಸಲಾಗಿದೆಯೇ ; ಹೌದು ಎಂದಾದರೆ ಪಠ್ಯ ಪುಸ್ತಕಗಳಲ್ಲಿ ಏನನ್ನು ಪರಿಷ್ಕರಿಸಲಾಗಿದೆ ; (ವಿವರ ನೀಡುವುದು)

(ಈ) ಹೊಸ ಪಠ್ಯಪುಸ್ತಕಗಳ ಪರಿಷ್ಕರಣೆಯಿಂದ ಶಿಕ್ಷಕರಿಗೆ ಪೂರ್ವಭಾವಿ ತರಬೇತಿ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## JNURM ಯೋಜನೆ ಅಡಿಯಲ್ಲಿ ಬಸ್ಸುಗಳ ಖರೀದಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೩ (೭೩೭) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ( JNURM) ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ರಾಜ್ಯಕ್ಕೆ ಎಷ್ಟು ಬಸ್ಸುಗಳನ್ನು ಖರೀದಿಸಲಾಗಿದೆ ; ಇನ್ನು ಎಷ್ಟು ಬಸ್ಸುಗಳನ್ನು ಖರೀದಿಸಬೇಕಾಗಿದೆ; (ವಿವರ ನೀಡುವುದು)

(ಆ) ಈ ಬಸ್ಸುಗಳು ರಾಜ್ಯದ ಯಾವ ಯಾವ ಜಿಲ್ಲೆಯಲ್ಲಿ ಸಂಚರಿಸುತ್ತಿವೆ;

(ಇ) ಕೇಂದ್ರದ ಯೋಜನೆಯ ಅವಧಿ ೨೦೧೭ರ ಮಾರ್ಚ್ ಅಂತ್ಯಕ್ಕೆ ಪೂರ್ಣಗೊಳ್ಳಲಿದೆ, ಅದಕ್ಕೂ ಮುನ್ನ ರಾಜ್ಯ ಸರ್ಕಾರ ಹಿಂದಿನ ಅನುದಾನ ಬಳಸಿಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೈಗಾರಿಕೆಗಳಿಗೆ ನೀಡಿರುವ ಸಾಲ ಮರುಪಾವತಿ ಬಾಕಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೪ (೭೩೮) ಮಾನ್ಯ ಸಣ್ಣ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೈಗಾರಿಕೆಗಳಿಗೆ ಉತ್ತೇಜನ ಹಾಗೂ ಮೂಲಸೌಲಭ್ಯ ಅಭಿವೃದ್ಧಿಗೆ ಆದ್ಯತೆ ನೀಡುತ್ತಿರುವ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ನಿಗಮಕ್ಕೆ ಸುಸ್ತಿದಾರ ಉದ್ಯಮಿಗಳು ಅಸಲು ಸೇರಿ ಪಾವತಿಸಬೇಕಾದ ಬಡ್ಡಿ ಮೊತ್ತ ಎಷ್ಟು ; (ಹೆಸರು, ಬಾಕಿ ದಿನಾಂಕ ಸಹಿತ ಅಸಲು, ಬಡ್ಡಿ ಚಕ್ರಬಡ್ಡಿಯ ವಿವರ ನೀಡುವುದು)

(ಆ) ಈ ಸಂಸ್ಥೆಯಿಂದ ಹಣ ಹಿಂತಿರುಗಿಸಲಾಗದೆ ಇರುವವರ ಮೇಲೆ ನ್ಯಾಯಾಲಯದಲ್ಲಿ ಮೊಕದ್ದಮೆಗಳು ಬಾಕಿ ಇವೆ ;

(ಇ) ಸಂಸ್ಥೆಯು ೨೦೧೨ ರಿಂದ ೨೦೧೬ರವರೆಗೆ ಜಾರಿಗೊಳಿಸಿದ್ದ "ಒನ್ ಟೈಮ್ ಸೆಟ್ಲಮೆಂಟ್ (ಒಟಿಎಸ್) ನಿಂದ ಒಟ್ಟು ಎಷ್ಟು ಸಾಲ ವಸೂಲಿಯಾಗಿದೆ ;

(ಈ) ಈ ಸಂಸ್ಥೆಯಿಂದ ಹಣ ಪಡೆದವರು, ಹಣ ಮರು ಪಾವತಿಸದಿರಲು ಮೂಲ ಕಾರಣಗಳೇನು ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಅಗ್ನಿಶಮನ ಉಪಕರಣ ಅಳವಡಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೦೨೫ (೬೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ರಸ್ತೆ ಸಾರಿಗೆ, ಖಾಸಗಿ ಬಸ್ಸುಗಳು, ಟೆಂಪೋ ಮತ್ತು ಲಾರಿಗಳಲ್ಲಿ ಕಡ್ಡಾಯವಾಗಿ ಅಗ್ನಿಶಮನ ಉಪಕರಣಗಳನ್ನು ಅಳವಡಿಸುವಂತೆ ಕಾನೂನು ರೂಪಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಆ) ಸರ್ಕಾರಿ ಸ್ವಾಮ್ಯದ ನಿಗಮಗಳಲ್ಲಿ ಇರುವ ಬಸ್ಸುಗಳೆಷ್ಟು ; ಅವುಗಳಲ್ಲಿ ಎಷ್ಟು ಬಸ್ಸುಗಳಲ್ಲಿ ಅಗ್ನಿಶಮನ ಉಪಕರಣಗಳನ್ನು ಅಳವಡಿಸಲಾಗಿದೆ; ಅವುಗಳನ್ನು ಅಳವಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರಿ ಸ್ವಾಮ್ಯದ ನಿಗಮದ ಬಸ್ಸುಗಳಲ್ಲಿ ಅಗ್ನಿ ಕಂಡು ಬಂದ ಪ್ರಕರಣಗಳೆಷ್ಟು ; ಈ ಪ್ರಕರಣಗಳು ನಡೆಯಲು ಕಾರಣಗಳೇನು;

(ಈ) ಅಗ್ನಿ ಪ್ರಕರಣಗಳನ್ನು ತಡೆಗಟ್ಟಲು ಸಾರಿಗೆ ಬಸ್ಸುಗಳಲ್ಲಿ ಕಡ್ಡಾಯವಾಗಿ ಪ್ರಯಾಣಿಕರ ಲಗೇಜ್ ತಪಾಸಣೆ ಮಾಡುವ ಪದ್ಧತಿಯನ್ನು ಜಾರಿಗೆ ತರಲಾಗುವುದೇ?

## ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಹೊಸ ಬಸ್ಸುಗಳನ್ನು ಖರೀದಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೦೨೬ (೬೩೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಸೇರಿದಂತೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಾಲ್ಕೂ ವಿಭಾಗಗಳಲ್ಲಿ ಸಾರ್ವಜನಿಕರ ಸಂಚಾರಕ್ಕೆ ಹಾಲಿ ಇರುವ ಬಸ್ಸುಗಳ ಸಂಖ್ಯೆ ಎಷ್ಟು ;

(ಆ) ಸಂಚಾರಕ್ಕೆ ಯೋಗ್ಯವಲ್ಲದ ಎಷ್ಟು ಬಸ್ಸುಗಳನ್ನು ಇದುವರೆಗೂ ಹಿಂತೆಗೆದುಕೊಳ್ಳಲಾಗಿದೆ ;

(ಇ) ಸಾರ್ವಜನಿಕರ ಸಂಚಾರಕ್ಕಾಗಿ ಹೊಸ ಬಸ್ಸುಗಳನ್ನು ಖರೀದಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಈ) ಹೊಸ ಬಸ್ಸುಗಳನ್ನು ಖರೀದಿಸಲು ಅನುಸರಿಸುವ ನಿಯಮಗಳೇನು?

## ತುಂಗಭದ್ರಾ ನದಿ ಪಾತ್ರದ ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೦೨೭ (೬೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ತುಂಗಭದ್ರಾ ನದಿ ಪಾತ್ರದ ಹಳ್ಳಿಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ತೊಂದರೆ ಉಂಟಾಗಿರಲು ಕಾರಣಗಳೇನು ;

(ಇ) ಈ ತೊಂದರೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಬೀದರ್ ಜಿಲ್ಲೆಯ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಬಗ್ಗೆ

**ಶ್ರೀ ವಿಜಯ್‌ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೮ (೭೩೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪನೆ ಮಾಡಲು ವಿಳಂಬವಾಗಲು ಕಾರಣಗಳೇನು ; ಸ್ಥಾಪನೆ ಮಾಡಿರುವ ಘಟಕಗಳಿಗೆ ಖರ್ಚಾದ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ಸಾರಿಗೆ ಬಸ್ಸುಗಳ ಬಗ್ಗೆ

**ಶ್ರೀ ವಿಜಯ್‌ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೨೯ (೭೩೨) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ತಾಲ್ಲೂಕು ಕೇಂದ್ರದಿಂದ ಹಳ್ಳಿಗಳಿಗೆ ಬಸ್ಸುಗಳ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೀದರ್ ಜಿಲ್ಲೆಯಲ್ಲಿ ಸಾರಿಗೆ ಇಲಾಖೆಯ ಅವಧಿ ಮುಗಿದಿರುವ ಬಸ್ಸುಗಳು ಇವೆಯೇ ; ಇದ್ದಲ್ಲಿ, ಸರ್ಕಾರ ಹೊಸ ಬಸ್ ನೀಡಲು ಯಾವ ಕ್ರಮ ಕೈಗೊಂಡಿದೆ ; (ಅವಧಿ ಮುಗಿದ ಬಸ್ಸುಗಳ ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯ ತಾಲ್ಲೂಕುಗಳ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಕುಡಿಯುವ ನೀರು ವಿದ್ಯುತ್ ದೀಪ ಸಿ.ಸಿ. ಕ್ಯಾಮರ ಸೌಲಭ್ಯಗಳು ಇದೆಯೇ ; ಇಲ್ಲದಿದ್ದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ವಿಜಯ್‌ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೦ (೭೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ೧೦ಕ್ಕಿಂತ ಕಡಿಮೆ ದಾಖಲಾತಿ ಇರುವ ಶಾಲೆಗಳು ಎಷ್ಟು ; ದಾಖಲಾತಿ ಹೆಚ್ಚಿಸಲು ಇಲಾಖೆ ಯಾವ ಕ್ರಮ ಕೈಗೊಂಡಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ತಾಲ್ಲೂಕುಗಳಲ್ಲಿ ಮಕ್ಕಳ ಅನುಗುಣವಾಗಿ ಎಲ್ಲಾ ಗ್ರಾಮಗಳಲ್ಲಿ ಶಾಲೆಗಳಿವೆಯೇ ; ಇದ್ದಲ್ಲಿ ಹೊಸ ಶಾಲೆಗಳಿಗೆ ಅನುಮತಿ ನೀಡಬಹುದೇ ; ಇಲ್ಲವಾದಲ್ಲಿ, ಇನ್ನೂ ಎಷ್ಟು ಶಾಲೆಗಳಿಗೆ ಅನುಮತಿ ನೀಡಬೇಕಾಗಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳು ಎಷ್ಟು ;

(ಈ) ಈ ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ. ಕ್ಯಾಮರಾ ವ್ಯವಸ್ಥೆ ಇದೆಯೇ ; ಸಿ.ಸಿ. ಕ್ಯಾಮರಾ ವ್ಯವಸ್ಥೆ ಇಲ್ಲದಿರುವ ಪರೀಕ್ಷಾ ಕೇಂದ್ರದಲ್ಲಿ ಸರ್ಕಾರ ಯಾವ ಕ್ರಮಕ್ಕೆ ಕೈಗೊಂಡಿದೆ ?

## ಬೀದರ್ ಜಿಲ್ಲೆಯ ಬಸವ ರಾಜೀವ್ ಗಾಂಧಿ ವಸತಿ ಯೋಜನೆಯಿಂದ ಮನೆಗಳ ಹಂಚಿಕೆ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೧ (೭೩೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೫–೨೦೧೬ನೇ ಸಾಲಿನಲ್ಲಿ ರಾಜೀವ್ ಗಾಂಧಿ ವಸತಿ ಯೋಜನೆ ಹಾಗೂ ಬಸವ ವಸತಿ ಯೋಜನೆಯಿಂದ ಎಷ್ಟು ಮನೆಗಳು ಮಂಜೂರಾಗಿವೆ : (ತಾಲ್ಲೂಕುವಾರು ವಿವರ ನೀಡುವುದು)

(ಆ) ಮನೆಗಳ ಹಂಚಿಕೆಯಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬೀದರ್ ಜಿಲ್ಲೆಯಲ್ಲಿ ಮನೆಗಳು ಮಂಜೂರಾಗಿದ್ದರೂ ಫಲಾನುಭವಿಗಳಿಗೆ ಹಂಚಿಕೆಯಾಗದಿರಲು ಕಾರಣಗಳೇನು ? (ವಿವರ ನೀಡುವುದು)

## ಶಾಲಾ ಮಕ್ಕಳನ್ನು ಕರೆದೊಯ್ಯುವ ವಾಹನಗಳಿಗೆ ರೂಪಿಸಿರುವ ಸುರಕ್ಷಾ ಮಾನದಂಡಗಳ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೩೨ (೭೧೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶಾಲಾ ಮಕ್ಕಳನ್ನು ಕರೆದೊಯ್ಯುವ ವಾಹನಗಳಿಗೆ ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಇಲಾಖೆ ರೂಪಿಸಿರುವ ಸುರಕ್ಷತಾ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಸುರಕ್ಷತಾ ಮಾನದಂಡಗಳನ್ನು ರೂಪಿಸಿದ್ದಲ್ಲಿ, ಅವುಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ ಮೇಲ್ವಿಚಾರಣೆಯನ್ನು ಯಾವ ರೀತಿ ಕೈಗೊಳ್ಳಲಾಗುತ್ತಿದೆ ;

(ಇ) ಇದುವರೆಗೂ ಈ ರೀತಿಯ ಸುರಕ್ಷಾದ ಮಾನದಂಡಗಳನ್ನು ಪಾಲಿಸದೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಅಂತಹ ಶಾಲೆಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ನಿರ್ಭಯಾ ಫಂಡ್ ಮೂಲಕ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮಗಳು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೩೩ (೭೧೬) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿರ್ಭಯಾ ಫಂಡ್ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಸಾರಿಗೆ ಇಲಾಖೆಗೆ ಬಿಡುಗಡೆಯಾದ ಹಣವೆಷ್ಟು ;

(ಆ) ಸದರಿ ಹಣದಿಂದ ಮಹಿಳಾ ಸುರಕ್ಷತೆಯ ದೃಷ್ಟಿಯಿಂದ ಕೈಗೊಂಡಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಯ ಮೂಲಕ ಸಾರಿಗೆ ಇಲಾಖೆಯಲ್ಲಿ ಮಹಿಳಾ ಸುರಕ್ಷತೆಯ ದೃಷ್ಟಿಯಿಂದ ಕೈಗೊಳ್ಳಲು ಉದ್ದೇಶಿಸಿರುವ ಯೋಜನೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯ ಗ್ರಾಮ ಪಂಚಾಯತಿಗಳಿಗೆ ಸ್ವಂತ ಕಟ್ಟಡ / ಅಂತರ್ಜಾಲ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೩೪ (೭೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪಂಚಾಯತಿಗಳ ವಿವರ ನೀಡುವುದು)

(ಆ) ಸದರಿ ಪಂಚಾಯತಿಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಪಂಚಾಯತಿಗಳೆಷ್ಟು ; ಹೊಂದಿರದ ಪಂಚಾಯತಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸ್ವಂತ ಕಟ್ಟಡ ಹೊಂದಿರದ ಪಂಚಾಯತಿಗಳಿದ್ದಲ್ಲಿ, ಅವುಗಳಿಗೆ ಸ್ವಂತ ಕಟ್ಟಡ ಹೊಂದಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ಇದಕ್ಕೆ ನಿಗದಿಪಡಿಸಿರುವ ಕಾಲಮಿತಿ ಏನು ;

(ಈ) ಜಿಲ್ಲೆಯ ಎಲ್ಲಾ ಪಂಚಾಯತಿಗಳಿಗೆ ಅಂತರ್ಜಾಲ ಸೌಲಭ್ಯ ಕಲ್ಪಿಸಲಾಗಿದೆಯೇ ; ಕಲ್ಪಿಸದಿದ್ದಲ್ಲಿ, ಸದರಿ ಪಂಚಾಯತಿಗಳಿಗೆ ಅಂತರ್ಜಾಲ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕೊಡಗು ಜಿಲ್ಲೆಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಮೂಲಸೌಲಭ್ಯ ಅಭಿವೃದ್ಧಿ ಯೋಜನೆಗಳು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೩೫ (೭೪೦) ಮಾನ್ಯ ಬೃಹತ್ ಮತ್ತು ಮಧ್ಯಮ, ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೨–೧೩ ರಿಂದ ಇಲ್ಲಿಯವರೆಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಂಡ ಯೋಜನೆಗಳು ಯಾವುವು ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಹಾಗೂ ಖರ್ಚಾದ ಅನುದಾನವೆಷ್ಟು ; (ವರ್ಷವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಒತ್ತು ನೀಡುವುದಕ್ಕೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಕುಡಿಯುವ ನೀರಿನ ಓವರ್ ಹೆಡ್‌ಟ್ಯಾಂಕ್‌ಗಳ ದುರಸ್ಥಿ ಕುರಿತು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೩೬ (೬೦೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶದ ಶಿಥಿಲಗೊಂಡಿರುವ ಕುಡಿಯುವ ನೀರಿನ ಸಂಗ್ರಹದ ಓವರ್ ಹೆಡ್ ಟ್ಯಾಂಕುಗಳೆಷ್ಟು; (ತಾಲ್ಲೂಕುವಾರು ಹಾಗೂ ಗ್ರಾಮವಾರು ವಿವರ ನೀಡುವುದು)

(ಆ) ಕುಡಿಯುವ ನೀರಿನ ಶಿಥಿಲಗೊಂಡಿರುವ ಓವರ್ ಹೆಡ್ ಟ್ಯಾಂಕುಗಳ ದುರಸ್ಥಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ; ಅವುಗಳ ದುರಸ್ಥಿಗೆ ಪ್ರತ್ಯೇಕ ಅನುದಾನ ಕಾಯ್ದಿರಿಸಲಾಗಿದೆಯೇ ;

(ಇ) ಈಗ ಶಿಥಿಲಗೊಂಡಿರುವ ನೀರಿನ ಓವರ್ ಹೆಡ್ ಟ್ಯಾಂಕುಗಳನ್ನು ಎಷ್ಟು ದಿನಗಳಲ್ಲಿ ದುರಸ್ಥಿ ಮಾಡಲಾಗುವುದು ; ಇಲ್ಲವೆ ಹೊಸ ಟ್ಯಾಂಕ್ ನಿರ್ಮಾಣ ಮಾಡುವಿರಾ? (ವಿವರ ನೀಡುವುದು)

## ಶುದ್ಧ ಕುಡಿಯುವ ನೀರಿನ ಘಟಕಗಳು

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೩೭ (೬೦೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿರುವ ಶುದ್ಧ ಕುಡಿಯುವ ನೀರಿನ ಜಲ ಶುದ್ಧೀಕರಣ ಘಟಕಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅ ಪೈಕಿ ಕಾರ್ಯನಿರ್ವಹಿಸುತ್ತಿರುವ ಘಟಕಗಳ ಸಂಖ್ಯೆ ಎಷ್ಟು; ದುಸ್ಥಿತಿಯಲ್ಲಿರುವ ಘಟಕಗಳ ಸಂಖ್ಯೆ ಎಷ್ಟು; (ನೀರಿನ ಘಟಕಗಳ ಗ್ರಾಮವಾರು ವಿವರ ನೀಡುವುದು) ನೀರಿನ ಘಟಕಗಳ ನಿರ್ವಹಣೆ ಮಾಡುವವರ ಜವಾಬ್ದಾರಿ ಯಾರದ್ದು ;

(ಇ) ಸದರಿ ಘಟಕಗಳು ಕಾರ್ಯನಿರ್ವಹಿಸದಿರುವುದರಿಂದ ಸರಿ ಇಲ್ಲದ ಇರುವ ಘಟಕಗಳ ಗ್ರಾಮವಾರು ವಿವರ ನೀಡುವುದು ದುಸ್ಥಿತಿಯಲ್ಲಿರುವ ಘಟಕಗಳ ನಿರ್ವಹಣೆ ಮಾಡುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಮೈಸೂರಿನ ಕೂರ್ಗಹಳ್ಳಿ ಕೆರೆಯಲ್ಲಿ ಖಾಸಗಿ ವ್ಯಕ್ತಿಗಳು ಅನಧಿಕೃತವಾಗಿ ಮಣ್ಣು ತೆಗೆದು ಸಾಗಿಸುತ್ತಿರುವ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೮ (೬೦೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನ ಕೂರ್ಗಹಳ್ಳಿ ಕೆರೆಯಲ್ಲಿ ಖಾಸಗಿ ವ್ಯಕ್ತಿಗಳು ಅನಧಿಕೃತವಾಗಿ ಎಲ್ಲೆಂದರಲ್ಲಿ ಮಣ್ಣು ತೆಗೆದು ಸಾಗಿಸುತ್ತಿರುವುದು ಗಮನಕ್ಕೆ ಬಂದಿದೆಯೇ ;

(ಆ) ಈ ಬಗ್ಗೆ ಸಾರ್ವಜನಿಕರು ಪಿ.ಡಿ.ಓ. ಮತ್ತು ತಹಸೀಲ್ದಾರ್ ಗಮನಕ್ಕೆ ತಂದರೂ, ಯಾವುದೇ ಕ್ರಮ ಜರುಗಿಸದೆ ಇರಲು ಕಾರಣವೇನು;

(ಇ) ಈ ಕೆರೆಯ ಹೂಳು ಮತ್ತು ಮಣ್ಣನ್ನು ವ್ಯವಸ್ಥಿತ ರೀತಿಯಲ್ಲಿ ತೆಗೆದು ಕೆರೆಯನ್ನು ಆಳ ಮಾಡಲು ಮತ್ತು ಕೆರೆಯನ್ನು ಸಂರಕ್ಷಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

## ತಾರಕಾ ಗ್ರಾಮದಲ್ಲಿ ಬಸ್ ನಿಲ್ದಾಣ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೫ (೬೦೪) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಜಿಲ್ಲೆಯ, ಹೆಚ್.ಡಿ.ಕೋಟೆ ತಾಲ್ಲೂಕಿನ ತಾರಕಾ ಗ್ರಾಮದಲ್ಲಿ ನಿರ್ಮಿಸಿರುವ ಬಸ್ ನಿಲ್ದಾಣ ಶಿಥಿಲಾವಸ್ಥೆ ಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಸುತ್ತಲೂ ಗಿಡಗಂಟಿ ಬೆಳೆದು ಉಪಯೋಗವಾಗದ ಸ್ಥಿತಿಯಲ್ಲಿರುವ ಈ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಅಥವಾ ಹೊಸದಾಗಿ ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ತಾರಕಾ ಜಲಾಶಯ ಹಾಗೂ ಜಲಾಶಯದ ಹಿನ್ನೀರಿನ ಬಳಿ ವನ್ಯ ಪ್ರಾಣಿಗಳ ವೀಕ್ಷಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಬರುತ್ತಿದ್ದು, ಇವರುಗಳು ಬಸ್‌ಗಾಗಿ ಮಳೆ ಬಿಸಿಲಿನಲ್ಲಿ ಕಾಯುವ ಪರಿಸ್ಥಿತಿ ಇರುವುದರಿಂದ, ಪ್ರವಾಸಿಗರಿಗಾಗಿ ಒಂದು ಬಸ್ ತಂಗುದಾಣ ನಿರ್ಮಿಸಲು ಕ್ರಮ ಜರುಗಿಸಲಾಗುವುದೇ ?

## ಮೈಸೂರಿನ ಮಂಡಕಳ್ಳಿ ಬಳಿ ಆಶ್ರಯ ಮನೆಗಳ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೦ (೯೭೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನ ಸಮೀಪದ ಮಂಡಕಳ್ಳಿ ಬಳಿ ಇರುವ ಆಶ್ರಯ ಮನೆಗಳ ಸಂಖ್ಯೆ ಎಷ್ಟು ; ಯಾವಾಗ ಇವುಗಳನ್ನು ನಿರ್ಮಿಸಲಾಯಿತು ; ಈ ಮನೆಗಳು ಯಾರ (ಗ್ರಾಮೀಣ ಅಭಿವೃದ್ಧಿ, ಮೈಸೂರು ಮಹಾನಗರ ಪಾಲಿಕೆ) ವ್ಯಾಪ್ತಿಗೆ ಬರುತ್ತವೆ ;

(ಆ) ಈ ಮನೆಗಳಲ್ಲಿ ಎಷ್ಟು ಕುಟುಂಬಗಳು ವಾಸಿಸುತ್ತಿವೆ ; ಎಷ್ಟು ಖಾಲಿ ಇದೆ ; ಈ ಆಶ್ರಯ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಕುಡಿಯುವ ನೀರು, ರಸ್ತೆ ಮತ್ತು ಖಾಯಂ ವಿದ್ಯುತ್ ಸಂಪರ್ಕ ಕಲ್ಪಿಸಿ, ಈ ಮನೆಗಳಲ್ಲಿ ಫಲಾನುಭವಿಗಳು ಬಂದು ನೆಲೆಸುವಂತೆ ಮಾಡಲು ಕ್ರಮ ಜರುಗಿಸಲಾಗುವುದೇ ?

## ಶತಮಾನ ಪೂರೈಸಿದ ಕನ್ನಡ ಶಾಲೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೧ (೬೬೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಶತಮಾನ ಕಂಡ ಸರ್ಕಾರಿ ಕನ್ನಡ ಶಾಲೆಗಳು ಎಷ್ಟು ; ಅವು ಯಾವುವು ; (ವಿವರ ನೀಡುವುದು)

(ಆ) ಈ ಶಾಲೆಗಳಿಗೆ ವಿಶೇಷ ಅನುದಾನ ಹಾಗೂ ವಿಶೇಷ ಸೌಲಭ್ಯಗಳನ್ನು ನೀಡಲು ಸರ್ಕಾರ ನಿರ್ಧರಿಸಿದೆಯೇ ;

(ಇ) ನಿರ್ಧರಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳು ಹಾಗೂ ಎಷ್ಟು ಅನುದಾನ ನೀಡಲು ಯೋಜಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ವಿವಿಧ ವಸತಿ ಯೋಜನೆಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೨ (೬೬೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯ ಗ್ರಾಮ ಪಂಚಾಯತ್‌ಗಳಲ್ಲಿ ವಿವಿಧ ವಸತಿ ಯೋಜನೆಯಡಿ ಸರ್ಕಾರ

ನೀಡಿದ ಮನೆಗಳನ್ನು ಆಂಟ್ರಿ ಮಾಡದೆ ಇರುವ ಪ್ರಕರಣಗಳೇನಾದರೂ ಇವೆಯೇ ; (ಇದ್ದರೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯ ಗ್ರಾಮ ಪಂಚಾಯತ್‌ಗಳಲ್ಲಿ ವಿವಿಧ ವಸತಿ ಯೋಜನೆಯಡಿ, not ok, not recommended ಅಥವಾ ಇತರೆ ಕಾರಣದಿಂದ ವಸತಿ ನಿಗಮದಿಂದ ಹಣ ಬಿಡುಗಡೆ ಆಗದೆ ಇರುವ ಪ್ರಕರಣ ಗಳೇನಾದರೂ ಇವೆಯೇ ; ಇದ್ದರೆ, ಜಿಲ್ಲಾ ಪಂಚಾಯತ್‌ಗಳು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಗ್ರಾಮ ಪಂಚಾಯತ್ ಮತ್ತು ಪಿ.ಡಿ.ಓ.ಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೩ (೬೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಹಾವೇರಿ ಹಾಗೂ ಗದಗ ಜಿಲ್ಲೆಗಳ ವ್ಯಾಪ್ತಿಯಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳು ಬರುತ್ತವೆ ;

(ಆ) ಎಷ್ಟು ಪಿ.ಡಿ.ಓ. ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಸರ್ಕಾರದ ಮಾರ್ಗಸೂಚಿಯಂತೆ ಪ್ರತಿಯೊಂದು ಗ್ರಾಮ ಪಂಚಾಯತ್‌ಗೆ ಒಟ್ಟು ಪಿ.ಡಿ.ಓ. ಅಧಿಕಾರಿ ಕಾರ್ಯ ನಿರ್ವಹಿಸಬೇಕೆಂದು ನಿರ್ದೇಶನ ಇದೆಯೇ ;

(ಇ) ಮೂರು ಜಿಲ್ಲೆಗಳಲ್ಲಿ ಎಷ್ಟು ಪಿ.ಡಿ.ಓ. ಅಧಿಕಾರಿಗಳ ಕೊರತೆ ಇದೆ; ಕೊರತೆ ನೀಗಿಸಲು ರಾಜ್ಯ ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೆ ?

## ಹೊಸ ಗ್ರಾಮ ಪಂಚಾಯತ್ ಹಾಗೂ ಕಟ್ಟಡಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೪ (೬೭೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೦೩ ವರ್ಷಗಳಿಂದ ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತ್‌ಗಳೆಷ್ಟು ; ಹಾಲಿ ಇರುವ ಗ್ರಾಮ ಪಂಚಾಯತ್‌ಗಳೆಷ್ಟು; (ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

(ಆ) ಈ ಜಿಲ್ಲೆಗಳ ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಸ್ವಂತ ಕಟ್ಟಡಗಳ ವ್ಯವಸ್ಥೆ ಇದೆಯೇ ; ಇಲ್ಲವಾದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತಿವೆ ; (ಸಂಪೂರ್ಣ ವಿವರ ನೀಡುವುದು)

(ಇ) ಸ್ವಂತ ಕಟ್ಟಡ ನಿರ್ಮಾಣಕ್ಕೆ ಸೂಕ್ತ ಸ್ಥಳ ನಿಗಧಿಪಡಿಸಲಾಗಿದೆಯೇ; ಹಾಗೂ ಇವುಗಳಿಗೆ ಸ್ವಂತ ಕಟ್ಟಡ ಕಟ್ಟಲು ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಅನುದಾನ ಮೀಸಲಿಡಲಾಗಿದೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಹುಬ್ಬಳ್ಳಿ ತಾಲ್ಲೂಕು, ಬೇಲೂರು ಕೈಗಾರಿಕಾ ಪ್ರದೇಶದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೫ (೬೭೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಜಿಲ್ಲೆ, ಹುಬ್ಬಳ್ಳಿ ತಾಲ್ಲೂಕು ತಾರಿಹಾಳ, ಬೇಲೂರು ಕೈಗಾರಿಕಾ ಪ್ರದೇಶಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕಳೆದ ಮೂರು ವರ್ಷಗಳಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಇವು ಹಾಲಿ ಯಾವ ಹಂತದಲ್ಲಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಹಮ್ಮಿಕೊಂಡಿರುವ ಕಾಲಮಿತಿ ಏನು ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಕೈಗಾರಿಕಾ ಪ್ರದೇಶಗಳಲ್ಲಿ ತೆರಿಗೆ ಸಂಗ್ರಹಿಸಲು ಯಾವ ಕ್ರಮಗಳನ್ನು ಅನುಸರಿಸಲಾಗುತ್ತಿದೆ ;

(ಈ) ಈ ಪ್ರದೇಶದಲ್ಲಿ ಕಳೆದ ಮೂರು ವರ್ಷಗಳಿಂದ ಎಷ್ಟು ತೆರಿಗೆ ಸಂಗ್ರಹ ಬಾಕಿ ಉಳಿದಿದೆ ? (ವರ್ಷವಾರು ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೬ (೭೯+೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬರುವ ಗ್ರಾಮ ಪಂಚಾಯತ್‌ಗಳಿಗೆ ವಿವಿಧ ಕಾಮಗಾರಿಗಳ ಅನುಷ್ಠಾನಕ್ಕಾಗಿ ಸರ್ಕಾರದಿಂದ ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಒಟ್ಟು ಅನುದಾನವೆಷ್ಟು ; ಸದರಿ ಅನುದಾನದಲ್ಲಿ ಖರ್ಚಾಗಿರುವ ಅನುದಾನವೆಷ್ಟು ; ಮತ್ತು ಉಳಿದಿರುವ ಅನುದಾನವೆಷ್ಟು ? (ಗ್ರಾಮ ಪಂಚಾಯತ್‌ವಾರು ಹಾಗೂ ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಮಹಾನಗರ ಸಾರಿಗೆ ಬಸ್ಸುಗಳ ಸಂಚಾರದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೪೭ (೭೫೧) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್‌ಗಳು ಸಂಚರಿಸುತ್ತಿರುವ ಮಾರ್ಗದಲ್ಲಿ ಸಾರ್ವಜನಿಕರ ಬೇಡಿಕೆಗನುಗುಣವಾಗಿ ಬಸ್‌ಗಳನ್ನು ಓಡಿಸಲಾಗುತ್ತಿದೆಯೇ ;

(ಆ) ಹಾಗಿಲ್ಲದಿದ್ದಲ್ಲಿ ; ಕೊರತೆಯಿರುವ ಕಡೆಗಳಿಗೆ ಹೊಸ ಬಸ್ಸುಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗಿದೆಯೇ ; ಎಷ್ಟು ಹೊಸ ಬಸ್ಸುಗಳನ್ನು ಖರೀದಿಸಲಾಗುತ್ತಿದೆ ; ಬಸ್ಸುಗಳ ಖರೀದಿಗೆ ತಗಲುವ ವೆಚ್ಚದ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಹಾಗಿದ್ದಲ್ಲಿ, ಬೆಂಗಳೂರು ಸಿಟಿ ರೈಲು ನಿಲ್ದಾಣದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ಬೇ ವ್ಯವಸ್ಥೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಸ್‌ಬೇಯಿಂದ ಪ್ರತಿನಿತ್ಯ ಎಷ್ಟು ಬಸ್‌ಗಳು ಸಂಚರಿಸುತ್ತಿವೆ ; (ಮಾರ್ಗವಾರು ಮಾಹಿತಿ ನೀಡುವುದು)

(ಈ) ಬೆಂಗಳೂರು ಸಿಟಿ ರೈಲು ನಿಲ್ದಾಣದಲ್ಲಿ ಸಾರ್ವಜನಿಕರ ಹಾಗೂ ಸರ್ಕಾರಿ ನೌಕರರ ಮತ್ತು ವಿದ್ಯಾರ್ಥಿಗಳ, ವಯೋವೃದ್ಧರ ಅನುಕೂಲಕ್ಕಾಗಿ ಸಾಮಾನ್ಯ ದರ್ಜೆಯ ಬಸ್‌ಗಳನ್ನು ಓಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಜಲಸಂಗ್ರಹಣಾ ಟ್ಯಾಂಕ್‌ಗಳನ್ನು ನಿರ್ಮಿಸಲು ವಿಳಂಬ ಮಾಡುತ್ತಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೪೮ (೭೫೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿ ೨೦೧೨ರಿಂದ ೨೦೧೭ರವರೆಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿ ಮಂಜೂರಾದ ಮೇಲ್ಮಟ್ಟದ ಜಲಸಂಗ್ರಹಣ ಟ್ಯಾಂಕ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳ ೨೦೧೨ರಿಂದ ೨೦೧೭ರವರೆಗೂ ಮೇಲ್ಮಟ್ಟದ ಜಲಸಂಗ್ರಹಣಾ ಟ್ಯಾಂಕ್‌ಗಳ ನಿರ್ಮಾಣದ ಕಾಮಗಾರಿಗಳನ್ನು ಯಾವ ಸಂಸ್ಥೆಗೆ ಗುತ್ತಿಗೆದಾರರಿಗೆ ಎಷ್ಟು ಮೊತ್ತಕ್ಕೆ ಗುತ್ತಿಗೆಗೆ ನೀಡಲಾಗಿದೆ ; (ಗುತ್ತಿಗೆದಾರರ ಪೂರ್ಣ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಟೆಂಡರ್ ನಿಯಮಗಳಂತೆ ಕಾಮಗಾರಿಯನ್ನು ನಿರ್ವಹಿಸದೆ ಈ ಯೋಜನೆಯ ಬಹಳಷ್ಟು ಕಾಮಗಾರಿಗಳು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲರಾದ ಅನುಷ್ಠಾನಾಧಿಕಾರಿಗಳು/ಗುತ್ತಿಗೆದಾರರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳ ಸಂಪೂರ್ಣ ವಿವರಗಳನ್ನು ನೀಡುವುದು ;

(ಉ) ಹಾಗಿದ್ದಲ್ಲಿ, ಈ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0284/800 ಪ್ರತಿಗಳು/09–03–2017